ಸಂಪುಟ: 05 ಸಂಚಿಕೆ: 89 ಪುಟಗಳು: 08 ಗುರುವಾರ 12 ಜೂನ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಮುಖ್ಯ ವಿಷಯ ಬಿಟ್ಟು ಅಡ್ಡ ದಾರಿ ತುಳಿಯಬೇಡಿ, ಕೆಲಸಕ್ಕೆ ಬಾರದ ಹರಟೆಲೇ ಮುದುಕರಾಗ್ತಿವಿ, ಕಾಲ ಸರೀತಾ ಇದೆ.

## ಡಿಕೆಶಿ, ಸತೀಶ್ ಜಾರಕಿಹೊಳಿಯನ್ನು ಭೇಟಿಯಾದ ಜೆಡಿಎಸ್ ಶಾಸಕಿ ಕರೆಮ್ಮ ನಾಯಕ್

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಆಪರೇಷನ್ ಹಸ್ತದ ಚರ್ಚೆಗಳು ನಡೆಯುತ್ತಿದೆ. ಇತ್ತೀಚೆಗೆ ರಾಜ್ಯ ಸರ್ಕಾರದ ಸಚಿವರೊಬ್ಬರು ಆಪರೇಷನ್ ಹಸ್ತದ ಬಗ್ಗೆ ಮಾತನಾಡಿದ್ದರು. ಈ ನಡುವೆ ಜೆಡಿಎಸ್ ಶಾಸಕಿ ಕರೆಮ್ಮ ನಾಯಕ್ ಅವರು ದೆಹಲಿಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಹಾಗೂ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿರುವುದು ಕುತೂಹಲಕ್ಕೆ ಕಾರಣವಾಗಿದೆ.

**ಆಪರೇಷನ್ ಹಸ್ತದ ಸೂಚನೆಯೇ?**

ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯಿಂದ ಅಸಮಾಧಾನಗೊಂಡಿದ್ದವರು ದೇವದುರ್ಗದ ಶಾಸಕಿ ಜೆಡಿಎಸ್ ನ ಕರೆಮ್ಮ ನಾಯಕ್. ಇವರು ಪಕ್ಷವನ್ನು ತೊರೆದು ಕಾಂಗ್ರೆಸ್ ಸೇರ್ಪಡೆ ಆಗುತ್ತಾರೆ ಎಂಬ ಸುದ್ದಿ ಹರಿದಾಡಿತ್ತು. ಬಳಿಕ ಅದಕ್ಕೆ ಬ್ರೇಕ್ ಬಿದ್ದಿತ್ತು. ಆದರೆ ಇದೀಗ ದೆಹಲಿಯಲ್ಲಿ ಡಿಕೆಶಿ ಹಾಗೂ ಸತೀಶ್ ಜಾರಕಿಹೊಳಿ ಅವರನ್ನು ಭೇಟಿ ಆಗಿರುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.

**ಏನು ಉದ್ದೇಶ?:** ಕರೆಮ್ಮ ಅವರು ಜೆಡಿಎಸ್‌ನಲ್ಲಿ ಕೆಲವೊಂದು ಬೆಳವಣಿಗೆಯಿಂದ ಅಸಮಾಧಾನಗೊಂಡಿದ್ದಾರೆ. ಹಾಗಿದ್ದರೂ ಪಕ್ಷದ ಚಟುವಟಿಕೆಗಳಲ್ಲಿ ಅವರು ಭಾಗಿಯಾಗುತ್ತಿದ್ದಾರೆ. ಆದರೆ, ಅವರು ಪಕ್ಷದಲ್ಲಿ ಅಂತರ ಕಾಯ್ದುಕೊಳ್ಳುವ ಸಾಧ್ಯತೆ ಇದೆ ಎಂಬ ಚರ್ಚೆಗಳು ನಡೆದಿದ್ದವು. ಈ ನಡುವೆ ಇದೀಗ ದೆಹಲಿಯಲ್ಲಿ ಇಬ್ಬರು ನಾಯಕರನ್ನು ಭೇಟಿ ಆಗಿರುವುದು ಸಹಜವಾಗಿ ಕುತೂಹಲಕ್ಕೆ ಕಾರಣವಾಗಿದೆ. ಭೇಟಿ ವಿಚಾರವಾಗಿ ಡಿಕೆ ಶಿವಕುಮಾರ್ ಅವರು ತಮ್ಮ ಸಾಮಾಜಿಕ ಮಾಧ್ಯಮ ಪೇಜ್ ನಲ್ಲಿ ಹಂಚಿಕೊಂಡಿದ್ದಾರೆ. ದೇವದುರ್ಗದ ಶಾಸಕಿ ಜೆಡಿಎಸ್ ನ ಕರೆಮ್ಮ ನಾಯಕ್ ಅವರು ಡಿಸಿಎಂ ಡಿ ಕೆ ಶಿವಕುಮಾರ್ ಅವರನ್ನು ದೆಹಲಿಯಲ್ಲಿ ಬುಧವಾರ ಭೇಟಿ ಮಾಡಿದ್ದರು ಎಂದು ಹೇಳಿಕೊಂಡಿದ್ದಾರೆ.



ಸಚಿವ ಸತೀಶ್ ಜಾರಕಿಹೊಳಿ ಕೂಡಾ ಫೇಕ್ ಬುಕ್‌ನಲ್ಲಿ ಪೋಸ್ಟ್ ಹಾಕಿದ್ದು ದೇವದುರ್ಗ ವಿಧಾನಸಭಾ ಕ್ಷೇತ್ರದ ಶಾಸಕಿ ಶ್ರೀಮತಿ ಕರೆಮ್ಮ ಜಿ. ನಾಯಕ ಅವರು ನನ್ನನ್ನು ಇಂದು ದೆಹಲಿಯ ಕರ್ನಾಟಕ ಭವನದಲ್ಲಿ ಭೇಟಿಯಾಗಿ, ಕ್ಷೇತ್ರದ ಅಭಿವೃದ್ಧಿ ವಿಷಯಗಳ ಕುರಿತು ಚರ್ಚೆ ನಡೆಸಿದರು ಎಂದಷ್ಟೇ ಹೇಳಿಕೊಂಡಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ 136 ಸ್ಥಾನಗಳಲ್ಲಿ ಗೆಲುವು ಸಾಧಿಸಿತ್ತು. ಉಪ ಚುನಾವಣೆಯಲ್ಲೂ 3 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದೆ.

ಇಷ್ಟೇ ಅಲ್ಲ, ಪಕ್ಷೇತರರ ಬೆಂಬಲ ಹಾಗೂ ಬಿಜೆಪಿಯಿಂದ ಉಚ್ಚಾಟಿತ ಇಬ್ಬರು ಶಾಸಕರ ಬೆಂಬಲವೂ ಇದೆ. ಹೀಗಿರುವಾಗ ಮತ್ತೆ ಆಪರೇಷನ್ ಹಸ್ತದ ಮೂಲಕ ಇತರ ಪಕ್ಷದ ಶಾಸಕರನ್ನು ತಮ್ಮತ್ತ ಸೆಳೆಯಲು ಕಾಂಗ್ರೆಸ್ ನಾಯಕರು ಮುಂದಾಗುತ್ತಾರಾ ಎಂಬುವುದು ಪ್ರಶ್ನೆಯಾಗಿದೆ.

## ಬಿಜೆಪಿಯಿಂದ 10 ಜಿಲ್ಲೆಗಳಿಗೆ ಹೊಸ ಅಧ್ಯಕ್ಷರ ನೇಮಕ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಬಿಜೆಪಿ ವತಿಯಿಂದ 10 ಜಿಲ್ಲೆಗಳಿಗೆ ನೂತನ ಅಧ್ಯಕ್ಷರನ್ನು ನೇಮಕಗೊಳಿಸಲಾಗಿದೆ. ಈ ಬಗ್ಗೆ ಪಕ್ಷದ ರಾಜ್ಯ ಚುನಾವಣಾ ಅಧಿಕಾರಿಗಳು ಬುಧವಾರ ಅಧಿಕೃತ ಪ್ರಕಟಣೆ ಹೊರಡಿಸಿದ್ದಾರೆ. ದೇಶದಾದ್ಯಂತ ಪಕ್ಷದ ಸಂಘಟನಾ ಪರ್ವ 2024–25 ನಡೆಯುತ್ತಿದ್ದು, ಇದರ ಅಂಗವಾಗಿ ರಾಜ್ಯದಲ್ಲಿ ಎರಡನೇ ಹಂತದಲ್ಲಿ ಉಳಿದಿರುವ 10 ಸಂಘಟನಾತ್ಮಕ ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯನ್ನು ಮುಗಿಸಲಾಗಿದೆ. ಪಕ್ಷ ನೇಮಿಸಿರುವ ರಾಜ್ಯ ಚುನಾವಣಾಧಿಕಾರಿಯಾಗಿ ಜಿಲ್ಲಾ ಅಧ್ಯಕ್ಷರನ್ನು ಅಭಿನಂದಿಸಿರುವ ಕ್ಯಾ. ಗಣೇಶ್ ಕಾರ್ಣಿಕ್, ಈ ಹೊಣೆಗಾರಿಕೆಯನ್ನು ಅತ್ಯಂತ ಜವಾಬ್ದಾರಿಯುತವಾಗಿ ನಿರ್ವಹಿಸುತ್ತಾ, ಪಕ್ಷದ ಸಂಘಟನೆಯನ್ನು ತಳಮಟ್ಟದಲ್ಲಿ ಸದೃಢಗೊಳಿಸುತ್ತಾ, ಮುಂಬರುವ ಎಲ್ಲಾ ರೀತಿಯ ಸವಾಲುಗಳನ್ನು ಎದುರಿಸಲು ಶಕ್ತಿ ತುಂಬುತ್ತಾ ಪಕ್ಷದ ವರ್ಚಸ್ಸನ್ನು ಹೆಚ್ಚಿಸುವಲ್ಲಿ ಸತತ ಶ್ರಮಿಸುವಿರೆಂದು ಆಶಿಸುತ್ತೇನೆ ಎಂದು ತಿಳಿಸಿದ್ದಾರೆ.

**ಬಿಜೆಪಿ ನೂತನ ಜಿಲ್ಲಾಧ್ಯಕ್ಷರ ಪಟ್ಟಿ**

● ಮೈಸೂರು ಗ್ರಾಮಾಂತರ - ಕೆಎನ್ ಸುಬ್ಬಣ್ಣ ● ಹಾಸನ - ಸಿದ್ದೇಶ್ ನಾಗೇಂದ್ರ, ● ಕೊಡಗು - ರವಿ ಕಾಳಪ್ಪ ● ಉಡುಪಿ - ಕುತ್ಯಾರು ನವೀನ್ ಶೆಟ್ಟಿ ● ದಾವಣಗೆರೆ - ಎನ್ ರಾಜಶೇಖರ ● ಹಾವೇರಿ - ವಿರೂಪಾಕ್ಷಪ್ಪ ಬಳ್ಳಾರಿ ● ಚಿತ್ರದುರ್ಗ - ಕೆ.ಟಿ. ಕುಮಾರಸ್ವಾಮಿ ● ತುಮಕೂರು - ಎಚ್.ಎಸ್. ರವಿಕುಮಾರ್ (ಹೆಬ್ಬಾಕ) ● ಮಧುಗಿರಿ - ಚಿದಾನಂದ ಗೌಡ ● ಚಿಕ್ಕಬಳ್ಳಾಪುರ - ಎಸ್.ವಿ. ರಾಮಚಂದ್ರ ಗೌಡ (ಸೀಕಲ್)

## ಸಿಎಂ, ಡಿಸಿಎಂ ತಲೆದಂಡದ ಬದಲು ಜಾತಿಗಣತಿ ಅಡ್ಡ

• ಉದಯವಾಹಿನಿ, ಬೆಂಗಳೂರು

ಚಿನ್ನಸ್ವಾಮಿ ಸ್ಟೇಡಿಯಂ ಬಳಿ ನಡೆದ ಕಾಲ್ತುಳಿತದಲ್ಲಿ 11 ಸಾವಿಗೆ ಸಂಬಂಧಿಸಿದಂತೆ ಎಐಸಿಸಿ ಮುಖ್ಯಮಂತ್ರಿ, ಡಿಸಿಎಂ ಅವರ ತಲೆದಂಡ ಮಾಡುತ್ತದೆ ಎಂಬ ನಿರೀಕ್ಷೆಯಲ್ಲಿದ್ದೆವು. ಆದರೆ ಜಾತಿಗಣತಿ ಅಡ್ಡ ಇಟ್ಟು ಜನರ ಗಮನ ಬೇರೆಡೆಗೆ ಸೆಳೆಯಲು ಪ್ರಯತ್ನಿಸುತ್ತಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ವಾಗ್ದಾಳಿ ನಡೆಸಿದ್ದಾರೆ. ರಾಜ್ಯ ಕಾಂಗ್ರೆಸ್ ಸರ್ಕಾರವು ಆರ್‌ಸಿಬಿ ಗೆಲುವಿನ ಪ್ರಯೋಜನ ಪಡೆಯಲು ಪಂದ್ಯ ಗೆಲ್ಲುವ ಮೊದಲೇ ಸಂಭ್ರಮಾಚರಣೆಗೆ ಪ್ಲ್ಯಾನ್ ಮಾಡಿತ್ತು. ಬಳಿಕ ಸಂಭ್ರಮ ಆಚರಿಸಲು ಹೋಗಿ 11 ಜನರ ಸಾವಿಗೆ ಕಾರಣವಾಯಿತು. ಇದೀಗ ಈ ಘಟನೆ ಇಡೀ ದೇಶದಲ್ಲಿ ಸುದ್ದಿಯಾಗಿದೆ.

ನೂರಾರು ಜನರು ಗಾಯಗೊಂಡ ಈ ದುರ್ಘಟನೆಯ ಬಗ್ಗೆ ಬಿಜೆಪಿ, ದುರಂತವನ್ನು ಎಳೆ ಎಳೆಯಾಗಿ ಬಿಡಿಸಿ ಖಂಡಿಸಿದೆ. ಈ ಹಿನ್ನೆಲೆ ಎಐಸಿಸಿ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳನ್ನು ದೆಹಲಿಗೆ ಕರೆಸಿಕೊಂಡಿದ್ದರು. ಇವರು ಮಾಡಿದ ಅಪರಾಧಕ್ಕೆ ಇವರಿಬ್ಬರ ತಲೆದಂಡವಾಗುತ್ತದೆ ಎಂದುಕೊಂಡಿದ್ದೆವು.

ಅವರು ಜಾತಿಗಣತಿಯನ್ನು ಮುಂದಿಟ್ಟು ಜನರ ಗಮನ ಬೇರೆಡೆಗೆ ಸೆಳೆಯಲು ಪ್ರಯತ್ನಿಸುತ್ತಿದ್ದಾರೆ. ಆದರೆ ಬಿಜೆಪಿ ಯಾವುದೇ ಕಾರಣಕ್ಕೂ ಇವರ ವಿರುದ್ಧ ಹೋರಾಟ ನಿಲ್ಲಿಸುವುದಿಲ್ಲ, ಇವರಿಬ್ಬರೂ ಘಟನೆಯ ಹೊಣೆ ಹೊತ್ತು ರಾಜೀನಾಮೆ ಸಲ್ಲಿಸುವವರೆಗೂ ಹೋರಾಟ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

## 11 ಜನರ ಸಾವಿನ ದುರಂತದಲ್ಲಿ ಸಿಲುಕಿ ಒದ್ದಾಡುತ್ತಿರುವ ಸರ್ಕಾರ

• ಉದಯವಾಹಿನಿ, ಬೆಂಗಳೂರು

ವಿಧಾನಸೌಧದಲ್ಲಿ ಕರ್ನಾಟಕ ರಾಜ್ಯ ಕ್ರಿಕೆಟ್ ಮಂಡಳಿ ಮತ್ತು ಆರ್‌ಸಿಬಿ ಕಾರ್ಯಕ್ರಮವನ್ನು ಆಯೋಜನೆ ಮಾಡಿತ್ತು. ಸರ್ಕಾರ ಆಯೋಜನೆ ಮಾಡಿರಲಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಕೆಎಸ್‌ಸಿಎ, ಆರ್‌ಸಿಬಿ ವಿಧಾನಸೌಧ ಬಳಿ ಸನ್ಮಾನ ಕಾರ್ಯಕ್ರಮ ಇಟ್ಟುಕೊಂಡಿದ್ದಕ್ಕೆ ನಾನು ಒಪ್ಪಿಕೊಂಡಿದ್ದೆ. ಗೋವಿಂದರಾಜು ಕರೆ ಮಾಡಿ ರಾಜ್ಯಪಾಲರಿಗೆ ಕೊಟ್ಟರು. ನಾನು ಹೋಗುತ್ತಿದ್ದೇನೆ. ನೀವು ಬನ್ನಿ ಎಂದು ಹೇಳಿದೆ. ಅಧಿಕೃತ ಆಹ್ವಾನ ಯಾರು ಕೊಟ್ಟಿದ್ದಾರೆ ಗೊತ್ತಿಲ್ಲ ಎಂದು ತಿಳಿಸಿದರು. ಕಾಲ್ತುಳಿತ ಪ್ರಕರಣದಲ್ಲಿ ರಾಜೀನಾಮೆ ಕೇಳಿದ ಬಿಜೆಪಿ ವಿರುದ್ಧ ಕಿಡಿಕಾರಿದ ಅವರು, ಕುಂಭಮೇಳ, ಗೋಧ್ರಾ ಹತ್ಯಾಕಾಂಡ, ಕೋವಿಡ್ ಸಮಯದಲ್ಲಿ ಆಮ್ಲಜನಕ ಸಿಗದೇ ಎಷ್ಟು ಜನ ಸತ್ತಿದ್ದಾರೆ? ಆಗ ಬಿಜೆಪಿಗರು ರಾಜೀನಾಮೆ ನೀಡಿದ್ದಾರಾ ಎಂದು ಪ್ರಶ್ನಿಸಿದರು.





■ ಬಳ್ಳಾರಿ ಕಾಂಗ್ರೆಸ್ ಸಂಸದ, 4 ಶಾಸಕರ ಮನೆ ಮೇಲೆ ED ದಾಳಿ ■ ನಮ್ಮ ಶಾಸಕರಿಗೂ, ಸಂಸದರಿಗೂ ವಾಲ್ಮೀಕಿ ಹಗರಣಕ್ಕೂ ಸಂಬಂಧವಿಲ್ಲ ■ ಇಡಿ ದಾಳಿಗೆ ಡಿಕೆಶಿ ಆಕ್ರೋಶ ■ ಏಕಕಾಲಕ್ಕೆ 8 ಕಡೆ ಇಡಿ ದಾಳಿ

# 'ಕೈ' ಶಾಸಕರಿಗೆ ಇಡಿ ಶಾಕ್!

**ಮತ್ತೆ ಮುನ್ನಲೆಗೆ ಬಂದ ವಾಲ್ಮೀಕಿ ಹಗರಣ**

**ಹಣ ನುಂಗಿ ನೀರು ಕುಡಿದಿದ್ದಾರೆ**

ಬಿಜೆಪಿ ಕಚೇರಿಯಲ್ಲಿ ಬುಧವಾರ ಮಾತನಾಡಿದ ಅವರು, ಪರಿಶಿಷ್ಟ ಜಾತಿ ಮತ್ತು ಪಂಗಡ ಮಕ್ಕಳ ವಿದ್ಯಾರ್ಥಿಗಳ ಪ್ರೋತ್ಸಾಹಧನ, ಸ್ಕಾಲರ್ಶಿಪ್ ಹಣ, ಗಂಗಾ ಕಲ್ಯಾಣ ಯೋಜನೆಯ ಹಣ, ಬಡವರಿಗೆ ನೀಡಬೇಕಾದ ಯೋಜನೆಯ ಹಣವನ್ನು ಇವರು ನುಂಗಿ ನೀರನ್ನು ಕುಡಿದಿದ್ದಾರೆ ಎಂದು ಆರೋಪಿಸಿದರು. ನಿಗಮದ 187 ಕೋಟಿ ಹಣವನ್ನು ಬಾರ್ ಶಾಪ್‌ಗಳಿಗೆ, ಸೆಕ್ಯುರಿಟಿ ಏಜೆನ್ಸಿಗಳಿಗೆ, ರೈತರ ಖಾತೆಗಳಿಗೆ ವರ್ಗಾವಣೆ ಮಾಡಿದರು. ವರ್ಗಾವಣೆ ಮಾಡಿದ ಹಣ ಎಲ್ಲಿ ಹೋಯಿತು ಎಂದು ಪ್ರಶ್ನಿಸಿದ್ದರೂ ಹಣ ಎಲ್ಲಿ ಹೋಗಿದೆ ಎಂದು ಸರ್ಕಾರಕ್ಕೂ ಉತ್ತರ ಕೊಡುವುದಕ್ಕೆ ಆಗುತ್ತಿಲ್ಲ. ಈ ಸರ್ಕಾರವು ಪರಿಶಿಷ್ಟ ಜಾತಿ-ಪಂಗಡಗಳ ಜನರ ಪರವಾಗಿ ನಾವು ಇದ್ದೇವೆ ಎಂದು ಹೇಳಿಕೆ ನೀಡುತ್ತದೆ. ಆದರೆ ಆ ಮಕ್ಕಳನ್ನು ಉಳಿಸುವ ಕೆಲಸ ಕಾಂಗ್ರೆಸ್ ಸರ್ಕಾರ ಮಾಡಲಿಲ್ಲ ಎಂದು ಆಕ್ಷೇಪಿಸಿದರು.

**1** ಬಳ್ಳಾರಿಯಲ್ಲಿ ಕಾಂಗ್ರೆಸ್ ಶಾಸಕರು ಹಾಗೂ ಸಂಸದರ ವಿರುದ್ಧ ಇಡಿ ದಾಳಿ

**2** ಈ ಹಗರಣದ ಹಿಂದೆ ಯಾವ ಮಹಾನಾಯಕ ಇದ್ದಾರೆ ಎಂದು ತಿಳಿಯಬೇಕಿದೆ

**3** ವಾಲ್ಮೀಕಿ ಹಗರಣದ ವಿರುದ್ಧ ಬಿಜೆಪಿ ಹೋರಾಟ

• ಉದಯವಾಹಿನಿ, ಬೆಂಗಳೂರು

ಮಹರ್ಷಿ ವಾಲ್ಮೀಕಿ ಬುಡಕಟ್ಟು ಕಲ್ಯಾಣ ಮಂಡಳಿ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ (ಇಡಿ) 60 ಅಧಿಕಾರಿಗಳ ತಂಡ ಬಳ್ಳಾರಿ ಜಿಲ್ಲೆ ಮತ್ತು ಬೆಂಗಳೂರಿನಲ್ಲಿ ನಾಲ್ವರು ಕಾಂಗ್ರೆಸ್ ಶಾಸಕರು ಹಾಗೂ ಓರ್ವ ಸಂಸದನ ಮನೆ ಮತ್ತು ಕಚೇರಿಗಳ ಮೇಲೆ ದಾಳಿ ನಡೆಸಿದೆ. ಬೆಳಗ್ಗೆಯೆ ಬಳ್ಳಾರಿಯಲ್ಲಿ ಐದು ಮತ್ತು ಬೆಂಗಳೂರು ನಗರದಲ್ಲಿ ಮೂರು ಸೇರಿ ಎಂಟು ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿದ್ದು ಪರಿಶೀಲನೆ ನಡೆಸುತ್ತಿದೆ. ಇಡಿ ಮೂಲಗಳ ಪ್ರಕಾರ, ಪ್ರಸ್ತುತ ಕಾಂಗ್ರೆಸ್ ಬಳ್ಳಾರಿ ಸಂಸದ ಇ. ತುಕಾರಾಂ ಮತ್ತು ಕಾಂಗ್ರೆಸ್ ಶಾಸಕರಾದ ನಾ. ರಾ. ಭರತ್ ರೆಡ್ಡಿ, ಜೆ.ಎನ್. ಗಣೇಶ್, ಕಂಪ್ಲಿ ಗಣೇಶ್ ಮತ್ತು ಎನ್.ಟಿ. ಶ್ರೀನಿವಾಸ್ ಅವರ ನಿವಾಸಗಳು ಮತ್ತು ಕಚೇರಿಗಳ ಮೇಲೆ ದಾಳಿ ನಡೆಯುತ್ತಿದೆ. ಇದೇ ವೇಳೆ ಮಾಜಿ ಸಚಿವ ಮತ್ತು ಕಾಂಗ್ರೆಸ್ ಶಾಸಕ ನಾಗೇಂದ್ರ ಅವರ ಬೆಂಗಳೂರಿನ ಕಚೇರಿ ಹಾಗೂ ನಾಗೇಂದ್ರರ ಆಪ್ತ ಸಹಾಯಕ ಗೋವರ್ಧನ್ ನಿವಾಸದ ಮೇಲೂ ದಾಳಿ ನಡೆಸಲಾಗುತ್ತಿದೆ.

ಕರ್ನಾಟಕದಲ್ಲಿ 2024ರ ಲೋಕಸಭಾ ಚುನಾವಣೆಗೆ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಲಿಮಿಟೆಡ್‌ಗೆ ಹಂಚಿಕೆ ಮಾಡಿದ ಹಣವನ್ನು ದುರುಪಯೋಗಪಡಿಸಿಕೊಂಡ ಆರೋಪದ ಮೇಲೆ ಈ ದಾಳಿ ನಡೆಸಲಾಗುತ್ತಿದೆ. ಅಷ್ಟೇ ಕಳೆದ ತೆಲಂಗಾಣ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಈ ಹಣವನ್ನು ಬಳಸಲಾಗಿದೆ ಎಂಬ ಆರೋಪವೂ ಇದೆ.

**ಶಾಸಕರ ಮನೆ ಮೇಲೆ ದಾಳಿ**

ಬಳ್ಳಾರಿ ಲೋಕಸಭಾ ಸಂಸದ ತುಕಾರಾಂ (ಸಂಡೂರು), ಬಳ್ಳಾರಿ ನಗರ ಶಾಸಕ ಭರತ್ ರೆಡ್ಡಿ, ಕೂಡ್ಲಿಗಿ ಶಾಸಕ ಡಾ. ಶ್ರೀನಿವಾಸ, ಕಂಪ್ಲಿ ಶಾಸಕ ಗಣೇಶ, ಬಳ್ಳಾರಿ ಗ್ರಾಮಾಂತರ ಶಾಸಕ , ಮಾಜಿ ಸಚಿವ ನಾಗೇಂದ್ರ ಅವರ ಕಚೇರಿ, ಮನೆ ಮೇಲೆ ಇಡಿ ದಾಳಿ ನಡೆಸಿದೆ. ಎಂಟು ತಂಡಗಳಲ್ಲಿ ಇಡಿ ಅಧಿಕಾರಿಗಳು ಕಾರ್ಯಾಚರಣೆ ಆರಂಭಿಸಿದ್ದಾರೆ. ಶಾಸಕರು ಹಾಗೂ ಸಂಸದರ ನಿವಾಸ ಹಾಗೂ ಗೃಹ ಕಚೇರಿಗಳಲ್ಲಿ ಶೋಧ ಕಾರ್ಯ ಮುಂದುವರೆದಿದೆ.

ವಿಧಾನಸೌಧದ ಬಳಿ ಇರುವ ಶಾಸಕರ ಭವನದ ಆವರಣದಲ್ಲಿರುವ ಮಾಜಿ ಸಚಿವ ಮತ್ತು ಬಳ್ಳಾರಿ ಗ್ರಾಮೀಣ ಶಾಸಕ ನಾಗೇಂದ್ರ ಅವರಿಗೆ ಸೇರಿದ ಕೋಣೆಯಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ. ಇಡಿ ದಾಳಿಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ತಪ್ಪಿತಸ್ಥರು ಯಾರೇ ಆಗಿರಲಿ ಅವರ ವಿರುದ್ಧ ಕ್ರಮ ಕೈಗೊಳ್ಳಲಿ. ಈ ವಿಷಯದಲ್ಲಿ ನಾನು ತಪ್ಪಿತಸ್ಥರನ್ನು ಬೆಂಬಲಿಸುವುದಿಲ್ಲ. ತನಿಖೆ ನಡೆಸಲಾಗುತ್ತಿದೆ ಮತ್ತು ಸತ್ಯ ಹೊರಬರಲಿ ಎಂದು ಹೇಳಿದರು. ಕಾಂಗ್ರೆಸ್ ನಾಯಕರನ್ನು ಮಾತ್ರ ಗುರಿಯಾಗಿ ಸಿಕೊಂಡು ದಾಳಿ ಮಾಡುತ್ತಿರುವುದು ಸರಿಯಲ್ಲ. ರಾಜ್ಯ ಸರ್ಕಾರವೇ ತನಿಖೆ ನಡೆಸುತ್ತಿದೆ. ಕಾಂಗ್ರೆಸ್ ನಾಯಕರು ಮತ್ತು ಜನಪ್ರತಿನಿಧಿಗಳಲ್ಲಿ ಭಯ ಹುಟ್ಟಿಸಲು ದಾಳಿ ನಡೆಸಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಬಿಜೆಪಿ ದ್ವೇಷದ ರಾಜಕೀಯ ಮಾಡುತ್ತಿದೆ ಎಂದು ಅವರು ಟೀಕಿಸಿದರು. ತನಿಖೆ ನಡೆಸುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ಕಾಂಗ್ರೆಸ್ ಎಂಎಲ್‌ಸಿ ಬಿ.ಕೆ ಹರಿಪ್ರಸಾದ್ ವಾಗ್ದಾಳಿ ನಡೆಸಿದರು. ರಾಜಕೀಯ ವಿರೋಧಿಗಳನ್ನು ಎದುರಿಸಲು ಬಿಜೆಪಿ ಇಡಿಯನ್ನು ತನ್ನ ಸಾಧನವನ್ನಾಗಿ ಮಾಡಿಕೊಂಡಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಬಳ್ಳಾರಿ ನಗರದ ಶಾಸಕ ಭರತ್ ರೆಡ್ಡಿ ಅವರನ್ನು ಅವರ ನಿವಾಸದಲ್ಲಿ ಇಡಿ ಅಧಿಕಾರಿಗಳು ಪ್ರಶ್ನಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕಂಪ್ಲಿ ಪಟ್ಟಣದ ಹೊರವಲಯದಲ್ಲಿರುವ ಶಾಸಕ ಕಂಪ್ಲಿ ಗಣೇಶ್ ಅವರ ನಿವಾಸದ ಮೇಲೆ ದಾಳಿ ನಡೆಸಲಾಗುತ್ತಿದೆ.



ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಮತ್ತು ಶಾಸಕ ಬಿ. ನಾಗೇಂದ್ರ, ಈ ಹಿಂದೆ ಜೈಲಿಗೂ ಹೋಗಬೇಕಾಯಿತು. ಹಗರಣ ಬೆಳಕಿಗೆ ಬಂದ ನಂತರ ಅವರು ರಾಜೀನಾಮೆ ನೀಡಬೇಕಾಯಿತು. ನಾಗೇಂದ್ರ ಅವರನ್ನು ಮತ್ತೆ ಸೇರಿಸಿಕೊಳ್ಳುವ ವಿಷಯವನ್ನು ಪರಿಶೀಲಿಸಲಾಗುವುದು ಎಂದು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದರು. ಎಸ್‌ಟಿ ಕಲ್ಯಾಣ ಇಲಾಖೆಯ ಮಾಜಿ ಸಚಿವ ನಾಗೇಂದ್ರ ಅವರನ್ನು 2024ರ ಜುಲೈ 12ರಂದು ಜಾರಿ ನಿರ್ದೇಶನಾಲಯ (ಇಡಿ) ಬಂಧಿಸಿತು. ನಂತರ, ಅವರನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಯಿತು. ಮೂರು ತಿಂಗಳು ಜೈಲಿನಲ್ಲಿ ಕಳೆದ ನಂತರ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಯಿತು.

ಆದಾಗ್ಯೂ, ಕಾಂಗ್ರೆಸ್ ಸರ್ಕಾರ ರಚಿಸಿದ ವಿಶೇಷ ತನಿಖಾ ತಂಡ (ಎಸ್‌ಐಟಿ) ಹಗರಣದಲ್ಲಿ ನಾಗೇಂದ್ರ ಅವರಿಗೆ ಕ್ಲೀನ್ ಚಿಟ್ ನೀಡಿತ್ತು ಮತ್ತು ಚಾರ್ಜ್‌ಶೀಟ್‌ನಲ್ಲಿ ಅವರ ಹೆಸರನ್ನು ಉಲ್ಲೇಖಿಸಿರಲಿಲ್ಲ.

**ಏನಿದು ವಾಲ್ಮೀಕಿ ಹಗರಣ...?**

ವಾಲ್ಮೀಕಿ ಹಗರಣವು 2024ರಲ್ಲಿ ಕರ್ನಾಟಕದಲ್ಲಿ ಬೆಳಕಿಗೆ ಬಂದ ದೊಡ್ಡ ಆರ್ಥಿಕ ವಂಚನೆ ಹಗರಣವಾಗಿದೆ. ವಾಲ್ಮೀಕಿ ನಿಗಮದ ಅಧೀಕ್ಷಕ ಚಂದ್ರಶೇಖರನ್. ಪಿ (52) ವಾಲ್ಮೀಕಿ ನಿಗಮದ ಅನುದಾನದ ಹಣವು ದುರುಪಯೋಗವಾಗಿದೆ ಎಂದು ಆರೋಪಿಸಿ, ಮೇ 26 ರಂದು 5 ಪುಟಗಳ ಡೆತ್ ನೋಟ್ ಬರೆದಿಟ್ಟು ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದರು. ಮೃತರ ಪತ್ನಿಯು ನೀಡಿದ ದೂರಿನ ಮೇರೆಗೆ ಶಿವಮೊಗ್ಗದ ವಿನೋಬನಗರ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಾಗಿತ್ತು. ಜೊತೆಗೆ ನಿಗಮದಲ್ಲಿ ಅನುದಾನ ಹಣವು ಬ್ಯಾಂಕ್ ಮೂಲಕ ದುರ್ಬಳಕೆಯಾಗಿರುವುದಾಗಿ ಅಧಿಕಾರಿ ನೀಡಿದ ದೂರಿನ ಆಧಾರದ ಮೇಲೆ ಬೆಂಗಳೂರು ನಗರದ ಹೈಗೌಂಡ್ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಿದ್ದರು.

## ರಾಜ್ಯದಲ್ಲಿ ಕೋವಿಡ್ ಕಾರಣದಿಂದಾಗಿ ಯಾವುದೇ ಸಾವುಗಳಾಗಿಲ್ಲ

■ ಕಳೆದ 10 ದಿನಗಳಲ್ಲಿ 5 ಸಾವಿರಕ್ಕೂ ಹೆಚ್ಚು ಕೋವಿಡ್ ಟೆಸ್ಟಿಂಗ್ ■ ನಿಧನರಾದ 11 ಜನರ ಪೈಕಿ 10 ಜನರ ಡೆತ್ ಆಡಿಟ್

• ಉದಯವಾಹಿನಿ, ಬೆಂಗಳೂರು

**ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟನೆ**

ರಾಜ್ಯದಲ್ಲಿ ಕೋವಿಡ್ ಸೋಂಕಿನಿಂದಾಗಿ ಯಾವುದೇ ಸಾವು ಸಂಭವಿಸಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಬೆಂಗಳೂರಿನ ಕಾವೇರಿ ನಿವಾಸದಲ್ಲಿ ಇಂದು ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಭೆ ಬಳಿಕ ಸಚಿವರು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದರು.

ಕೋವಿಡ್ ಸೋಂಕು ಹತೋಟಿಯಲ್ಲಿದ್ದು ಜನರು ಆತಂಕಕ್ಕೆ ಒಳಗಾಗುವ ಸ್ಥಿತಿ ಇಲ್ಲ. ರಾಜ್ಯದಲ್ಲಿ ಕೋವಿಡ್ ಪಾಸಿಟಿವ್ ಬಂದವರಲ್ಲಿ ಸಾವಿಗೀಡಾಗಿರುವ 11 ಜನರಲ್ಲಿ 10 ಜನರ ಡೆತ್ ಆಡಿಟ್ ರಿಪೋರ್ಟ್ ಬಂದಿದೆ. ಡೆತ್ ಆಡಿಟ್ ರಿಪೋರ್ಟ್ ಪ್ರಕಾರ 10 ಜನರು ಇತರ ಮಾರಕ ಕಾಯಿಲೆಗಳಾದ ಹೃದಯಸಂಬಂಧಿ, ಕಿಡ್ನಿ, ಅಂಗಾಂಗ ವೈಫಲ್ಯದಂತಹ ಕಾರಣಗಳಿಂದ ಸಾವನ್ನಪ್ಪಿದ್ದು, ಕೋವಿಡ್ ಕಾರಣವಲ್ಲ ಎಂಬುದು ಸ್ಪಷ್ಟವಾಗಿದೆ. ಇನ್ನು ಒಬ್ಬರ ಡೆತ್ ಆಡಿಟ್ ರಿಪೋರ್ಟ್ ಬರುವುದು ಬಾಕಿ ಇದೆ ಎಂದು ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದರು. ಡೆತ್ ಆಡಿಟ್ ರಿಪೋರ್ಟ್ ಬಳಿಕವೇ ಕೋವಿಡ್ ಡೆತ್ ರಿಪೋರ್ಟ್ ಘೋಷಿಸುವಂತೆ ಸಿಎಂ ಸಭೆಯಲ್ಲಿ ತೀರ್ಮಾನಿಸಲಾಗಿದೆ.



ಕೋವಿಡ್ ಡೆತ್ ಎಂದಾಕ್ಷಣ ಅನಗತ್ಯವಾಗಿ ಜನರು ಆತಂಕಕ್ಕೆ ಒಳಗಾಗುವುದು ಸಹಜ.. ಆದರೆ ವಾಸ್ತವ ಚಿತ್ರಣ ಬೇರೆಯೇ ಆಗಿರುತ್ತದೆ.

ಈಗಿರುವ ಕೋವಿಡ್ ರೂಪಾಂತರಿ ವೈರಸ್ ಸೌಮ್ಯ ಸ್ವಭಾವದ್ದಾಗಿದೆ. 500 ಕ್ಕೂ ಹೆಚ್ಚು ಕೋವಿಡ್ ಪಾಸಿಟಿವ್ ಪ್ರಕರಣಗಳಲ್ಲಿ ಕೇವಲ ಇಬ್ಬರು ಮಾತ್ರ ಆಸ್ಪತ್ರೆಯ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಹೀಗಾಗಿ ಆತಂಕದ ಸ್ಥಿತಿ ಇಲ್ಲ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಆರೋಗ್ಯ ಇಲಾಖೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನ ತೆಗೆದುಕೊಂಡಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕೋವಿಡ್ ಟೆಸ್ಟಿಂಗ್ ಮಾಡಲಾಗುತ್ತಿದೆ. ಕಳೆದ 10 ದಿನಗಳಲ್ಲಿ 5 ಸಾವಿರಕ್ಕೂ ಹೆಚ್ಚು ಕೋವಿಡ್ ಟೆಸ್ಟಿಂಗ್ ಮಾಡಲಾಗಿದೆ.

ಕೊರೋನಾ ಪ್ರಕರಣಗಳಲ್ಲಿ ಕಡ್ಡಾಯವಾಗಿ ಕೋವಿಡ್ ಟೆಸ್ಟಿಂಗ್ ನಡೆಸಲಾಗುತ್ತಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ವ್ಯವಸ್ಥೆಯನ್ನ ಕಲ್ಪಿಸಲಾಗಿದೆ. ತಜ್ಞರ ಸಮಿತಿ ಸಭೆಗಳನ್ನ ನಡೆಸುತ್ತಿದ್ದು, ಆರೋಗ್ಯ ಇಲಾಖೆ ಕೂಡ ಮೇಲ್ವಿಚಾರಣೆ ನಡೆಸುತ್ತಿದೆ.

ಕೋವಿಡ್ ಗೆ ಆತಂಕಗೊಳ್ಳದೇ ಜನರು ತಮ್ಮ ಸಹಜ ಜೀವನ ನಡೆಸಬಹುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

## ವರ್ಗಾವಣೆ ಬೆನ್ನಲ್ಲೇ ವಿದೇಶ ಪ್ರವಾಸ ತೆರಳಲು ನಿಂಬಾಳ್ಕರ್‌ಗೆ ಸೂಚನೆ

● ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ದುರಂತದಿಂದ ಸರ್ಕಾರಕ್ಕೆ ಮುಜುಗರ ● 16 ದಿನ ರಜೆ ಮಂಜೂರು

• ಉದಯವಾಹಿನಿ, ಬೆಂಗಳೂರು

ಚಿನ್ನಸ್ವಾಮಿ ಕ್ರೀಡಾಂಗಣದ ಕಾಲ್ತುಳಿತ ದುರಂತದಿಂದ ತೀವ್ರ ಮುಜುಗರಕ್ಕೆ ಒಳಗಾಗಿದ್ದ ರಾಜ್ಯ ಸರಕಾರ, ಪೊಲೀಸ್ ಇಲಾಖೆಗೆ ಮೇಜರ್ ಸರ್ಜರಿ ನಡೆಸಿತ್ತು.

ಕಾಲ್ತುಳಿತ ದುರಂತಕ್ಕೆ ಗುಪ್ತಚರದಳದ ವೈಫಲ್ಯವೂ ಕಾರಣ ಎಂಬ ಪ್ರತಿಪಕ್ಷಗಳ ಟೀಕೆ ಹಾಗೂ ಸಾರ್ವಜನಿಕ ವಲಯದ ಆಕ್ರೋಶದ ಬೆನ್ನಲ್ಲೇ ಗುಪ್ತಚರ ದಳದ ಮುಖ್ಯಸ್ಥ ಎಡಿಜಿಪಿ ಹೇಮಂತ್ ನಿಂಬಾಳ್ಕರ್ ಅವರನ್ನು ಗುಪ್ತಚರ ದಳದಿಂದ ವರ್ಗಾಯಿಸಿ ಮಾಹಿತಿ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ನಿಯುಕ್ತಿ ಮಾಡಿತ್ತು. ಇದೀಗ ಹೇಮಂತ್ ನಿಂಬಾಳ್ಕರ್ ಅವರಿಗೆ ಜೂ.12 ರಿಂದ ಜೂ.27ರ ವರೆಗೆ ವಿದೇಶ ಪ್ರವಾಸ ಕೈಗೊಳ್ಳಲು 16 ದಿನಗಳ ವೇತನ ಸಹಿತ ರಜೆಯನ್ನು ರಾಜ್ಯ ಸರ್ಕಾರ ಮಂಜೂರು ಮಾಡಿ ಆದೇಶ ಹೊರಡಿಸಿದೆ. ಜತೆಗೆ ಜೂ.28, 29ರ ಎರಡು ದಿನಗಳ ಸಾರ್ವತ್ರಿಕ ರಜೆಯನ್ನು ಬಳಸಿಕೊಳ್ಳಲು ಅನುಮತಿ ನೀಡಿದೆ.

**ಪೊಲೀಸ್ ವಿಭಾಗಕ್ಕೆ ಅಂಟಿರುವ ವೈಫಲ್ಯ**

**ಪೊಲೀಸ್ ಆಯುಕ್ತ ದಯಾನಂದ್ ಅಮಾನತು:** ಬೆಂಗಳೂರಿನ



ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಆರ್‌ಸಿಬಿ ವಿಜಯೋತ್ಸವದ ವೇಳೆ ಸಂಭವಿಸಿದ ಕಾಲ್ತುಳಿತ ದುರಂತದ ಪ್ರಕರಣದಿಂದ ರಾಜ್ಯ ಸರಕಾರ ದೇಶೀಯ ಮಟ್ಟದಲ್ಲಿ ತೀವ್ರ ಮುಜುಗರ ಅನುಭವಿಸುವಂತಾಯಿತು.

**ಇಂಟೆಲಿಜೆನ್ಸ್ ವೈಫಲ್ಯವೂ ಕಾರಣ!**

ಬೆಂಗಳೂರಿನಲ್ಲಿ ಆರ್‌ಸಿಬಿ ತಂಡದ ಗೆಲುವಿನ ಸಂಭ್ರಮಾಚರಣೆ ವೇಳೆ ಕಾಲ್ತುಳಿತ ಸಂಭವಿಸಲು ಇಂಟೆಲಿಜೆನ್ಸ್ ವೈಫಲ್ಯವೂ ಕಾರಣ ಎಂದು ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಟೇಡಿಯಂನಲ್ಲಿ ಸನ್ಮಾನ ಮಾಡಲು ಅನುಮತಿ ಪಡೆದಿದ್ದರಾ? ಈ ವೇಳೆ ಗುಪ್ತಚರ ಇಲಾಖೆ ಏನು ಮಾಡುತ್ತಿತ್ತು? ಅನುಮತಿ ಇಲ್ಲದೇ ಕಾರ್ಯಕ್ರಮಕ್ಕೆ ಅವಕಾಶ ಕೊಟ್ಟಿದ್ದಕ್ಕೆ ಪೊಲೀಸರ ಮೇಲೆ ಕ್ರಮ ಕೈಗೊಳ್ಳಲಾಗಿದೆ. ಪೊಲೀಸರನ್ನು ಬಿಟ್ರೆ ಜವಾಬ್ದಾರಿ ಯಾರದ್ದು? ಎಂದರು.

ಸೂಮೋಟೊ ಪ್ರಕರಣ ದಾಖಲಿಸಿಕೊಂಡ ಹೈಕೋರ್ಟ್ ರಾಜ್ಯ ಸರಕಾರಕ್ಕೆ ಚಾಟಿ ಬೀಸಿತು. ಇದರಿಂದ ಎಚ್ಚೆತ್ತುಕೊಂಡ ಸರಕಾರ ಕರ್ತವ್ಯ ಲೋಪದ ಮೇರೆಗೆ ಬೆಂಗಳೂರು ನಗರ ಪೊಲೀಸ್ ಆಯುಕ್ತ ದಯಾನಂದ್ ಸೇರಿ ಐದು ಮಂದಿ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿ ಆದೇಶಿಸಿತ್ತು.

**ಸೀಮಂತ್ ಕುಮಾರ್ ಸಿಂಗ್ ನೂತನ ಪೊಲೀಸ್ ಕಮಿಷನರ್:** ನಗರ ಪೊಲೀಸ್ ಕಮಿಷನರೇಟ್ ನೂತನ ಪೊಲೀಸ್ ಆಯುಕ್ತರಾಗಿ ಎಡಿಜಿಪಿ ಸೀಮಂತ್‌ಕುಮಾರ್ ಸಿಂಗ್ ಅವರನ್ನು ರಾಜ್ಯ ಸರ್ಕಾರ ನೇಮಕಗೊಳಿಸಿದ್ದು, ಶುಕ್ರವಾರ ಅಧಿಕಾರ ಸ್ವೀಕರಿಸಿದ್ದಾರೆ. ಭಾರೀ ಪೈಪೋಟಿಯಲ್ಲಿದ್ದ ಹಲವು ಹಿರಿಯ ಐಪಿಎಸ್ ಅಧಿಕಾರಿಗಳನ್ನು ಕೈ ಬಿಟ್ಟು ಸರಕಾರ, ಬಿಎಂಟಿಎಫ್ ಮುಖ್ಯಸ್ಥರಾಗಿದ್ದ ಸೀಮಂತ್ ಕುಮಾರ್ ಅವರಿಗೆ ಮಣೆ ಹಾಕಿದೆ. ಬಿಹಾರ ಮೂಲದ ಸೀಮಂತ್ ಕುಮಾರ್ ಸಿಂಗ್, 1996ರ ಬ್ಯಾಚ್‌ನ ಕರ್ನಾಟಕ ಕೇಡರ್ ಐಪಿಎಸ್ ಅಧಿಕಾರಿಯಾಗಿದ್ದಾರೆ. ಈ ಹಿಂದೆ ಬೆಂಗಳೂರಿನ ಹೆಚ್ಚುವರಿ ಪೊಲೀಸ್ ಆಯುಕ್ತರು, ಎಸಿಬಿ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಿದ್ದ ಅನುಭವ ಸೀಮಂತ್‌ಕುಮಾರ್ ಅವರಿಗಿದೆ. ಹೊಸ ಪೊಲೀಸ್ ಆಯುಕ್ತರಾಗಿ ಅಧಿಕಾರ ಸ್ವೀಕರಿಸಿರುವ ಸೀಮಂತ್‌ಕುಮಾರ್ ಸಿಂಗ್‌ಗೆ, ಕಾಲ್ತುಳಿತ ದುರಂತದಿಂದ ಪೊಲೀಸ್ ವಿಭಾಗಕ್ಕೆ ಅಂಟಿಕೊಂಡಿರುವ ವೈಫಲ್ಯವನ್ನು ಮೆಟ್ಟಿನಿಲ್ಲುವ ಸವಾಲು ಎದುರಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,840/Gram24ct ₹9,020/Gram22ct ಬೆಳ್ಳಿ: ₹109.00/Gram

# ಕಾರ್ಯಪಾಲಕ ಎಂಜಿನಿಯರ್ ಪ್ರದೀಪ್‌ಗೆ ರೂ.25 ಸಾವಿರ ದಂಡ

• ಉದಯವಾಹಿನಿ, ಬೆಂಗಳೂರು

ಮಾಹಿತಿ ಹಕ್ಕು ಕಾಯ್ದೆಯಂತೆ ಮಾಹಿತಿ ನೀಡದ, ಮಾಹಿತಿ ಆಯೋಗದ ವಿಚಾರಣೆಗೂ ಹಾಜರಾಗದ ಬಿಬಿಎಂಪಿ ಬ್ಯಾಟರಾಯನಪುರ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಪ್ರದೀಪ್ ಅವರಿಗೆ ರಾಜ್ಯ ಮಾಹಿತಿ ಆಯೋಗ ರೂ. 25 ಸಾವಿರ ದಂಡ ವಿಧಿಸಿದೆ. ಬಸವೇಶ್ವರ ನಗರದ ನಿವಾಸಿ ರವಿಕುಮಾರ್ ಅವರು ಬ್ಯಾಟರಾಯನಪುರ ವಿಭಾಗದ ಕಚೇರಿ ವ್ಯಾಪ್ತಿಯಲ್ಲಿ ನಿರ್ವಹಿಸಿದ ಕಾಮಗಾರಿಗಳ ಪಟ್ಟಿ ನೀಡುವಂತೆ 2024ರ ಅಕ್ಟೋಬರ್ 25ರಂದು ಕೋರಿದ್ದರು. ಮಾಹಿತಿ ಅಧಿಕಾರಿಯಾಗಿರುವ ಪ್ರದೀಪ್ 30 ದಿನಗಳ ಕಾಲಮಿತಿಯಲ್ಲಿ ಮಾಹಿತಿ ನೀಡಿರಲಿಲ್ಲ. ಪ್ರಥಮ ಮೇಲ್ಮನವಿ ಪ್ರಾಧಿಕಾರದ ವಿಚಾರಣೆ ನಡೆಸಿದರೂ ಮಾಹಿತಿ ನೀಡಿರಲಿಲ್ಲ. ಅರ್ಜಿದಾರರು, ಕರ್ನಾಟಕ ಮಾಹಿತಿ ಆಯೋಗಕ್ಕೆ ದ್ವಿತೀಯ ಮೇಲ್ಮನವಿ ಸಲ್ಲಿಸಿದರು. ಮಾಹಿತಿ ಆಯುಕ್ತ ರುದ್ರಣ್ಣ ಹರ್ತಿಕೋಟೆ ಅವರು ಮಾರ್ಚ್ 27 ಹಾಗೂ ಮೇ 6ರಂದು ನಡೆಸಿದ ವಿಚಾರಣೆಗೆ ಪ್ರದೀಪ್ ಹಾಜರಾಗಿರಲಿಲ್ಲ. ಈ ವಿಷಯವನ್ನು ಬಿಬಿಎಂಪಿ ಮುಖ್ಯ ಆಯುಕ್ತರ ಗಮನಕ್ಕೂ ತರಲಾಗಿತ್ತು. ಮಾಹಿತಿ ನೀಡದೆ, ವಿಚಾರಣೆಗೆ ಹಾಜರಾಗದೆ ಇರುವುದನ್ನು ನಿರ್ಲಕ್ಷ್ಯ ಧೋರಣೆ ಎಂದು ಪರಿಗಣಿಸಿ, ಪ್ರದೀಪ್ ಅವರಿಗೆ ರೂ. 25 ಸಾವಿರ ದಂಡ ವಿಧಿಸಿದ್ದಾರೆ. ಅಲ್ಲದೆ ಅರ್ಜಿದಾರರಿಗೆ ರೂ. 3 ಸಾವಿರ ಪರಿಹಾರ ನೀಡುವಂತೆ ಆಯುಕ್ತರು ಆದೇಶಿಸಿದ್ದಾರೆ. ಮುಖ್ಯ ಎಂಜಿನಿಯರ್ ಅವರು ಪ್ರದೀಪ್ ಅವರ ವೇತನದಲ್ಲಿ ಕಡಿತ ಮಾಡಿ, ಸಂಬಂಧಿಸಿದ ಖಾತೆಗೆ ಪಾವತಿ ಮಾಡುವಂತೆ ಸೂಚಿಸಿದ್ದಾರೆ.

# ಬ್ಯಾಟರಾಯನಪುರ ಜನಾಕ್ರೋಶ ಯಾತ್ರೆ ತಡೆಗೆ ಬಿಜೆಪಿ ಆಕ್ಷೇಪ

• ಉದಯವಾಹಿನಿ, ಬೆಂಗಳೂರು

ಬ್ಯಾಟರಾಯನಪುರ ಕ್ಷೇತ್ರದ ಅಭಿವೃದ್ಧಿ ಕಡೆಗಣಿಸಿರುವುದರ ವಿರುದ್ಧ ಹಮ್ಮಿಕೊಂಡಿದ್ದ ಬ್ಯಾಟರಾಯನಪುರ ಜನಾಕ್ರೋಶ ಯಾತ್ರೆ ತಡೆದಿರುವುದನ್ನು ಬಿಜೆಪಿ ರಾಜ್ಯ ಕಾರ್ಯದರ್ಶಿ ತಮ್ಮೇಶ್ ಗೌಡ ಖಂಡಿಸಿದ್ದಾರೆ. ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿ, ತೆರಿಗೆ ಹೆಚ್ಚಳ, ದುರಾಡಳಿತ, ಭ್ರಷ್ಟಾಚಾರ, ಸ್ವಜನಪಕ್ಷಪಾತದ ವಿರುದ್ಧ ಜೂನ್ 10ರಂದು ಬ್ಯಾಟರಾಯನಪುರ ಜನಾಕ್ರೋಶ ಯಾತ್ರೆಯ ಹೆಸರಿನಲ್ಲಿ, ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಕುರಿತು ಸ್ಥಳೀಯ ಬಿಬಿಎಂಪಿ ಕಚೇರಿಗೆ ಮನವಿ ಸಲ್ಲಿಸಲು ತೆರಳುವಾಗ, ಪೊಲೀಸರು ಹಾಗೂ ಕೆಲವು ಅಧಿಕಾರಿಗಳು ತಡೆದಿದ್ದಾರೆ ಎಂದು ಅವರು ಹೇಳಿದರು. ಜನಸಾಮಾನ್ಯರ ಅಭಿವ್ಯಕ್ತಿ ಸ್ವಾತಂತ್ರ್ಯ ಹತ್ತಿಕ್ಕುವ ಪ್ರಯತ್ನವಾಗಿದೆ. ಈ ಮೂಲಕ ಜನರ ಸಮಸ್ಯೆಗಳನ್ನು ಸರ್ಕಾರಕ್ಕೆ ತಿಳಿಸದಂತೆ ತಡೆಹಿಡಿಯುವ ವ್ಯವಸ್ಥಿತ ತಂತ್ರ ನಡೆಸಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ಕ್ಷೇತ್ರದ ಶಾಸಕರು ಜನಸಾಮಾನ್ಯರ ಆಕ್ರೋಶವನ್ನು ಕೇಳಿಸಿಕೊಳ್ಳಲು ಸಿದ್ಧರಿಲ್ಲವೇ? ಅಥವಾ ಕೇಳಿಸಿಕೊಳ್ಳುವುದರಿಂದ ತಪ್ಪಿಸಿಕೊಳ್ಳಲು ಹೀಗೆಲ್ಲ ಷಡ್ಯಂತ್ರ ಮಾಡಲಾಗುತ್ತಿದೆಯೇ? ಎಂಬುದು ಸೇರಿದಂತೆ ಹಲವು ಪ್ರಶ್ನೆಗಳು ಹುಟ್ಟಿಕೊಳ್ಳುತ್ತವೆ. ಶಾಸಕರು ಇವುಗಳಿಗೆಲ್ಲ ಉತ್ತರಿಸಬೇಕು' ಎಂದು ಅವರು ಆಗ್ರಹಿಸಿದ್ದಾರೆ.

# ಬನ್ನೇರುಘಟ್ಟ ಮೃಗಾಲಯದಲ್ಲಿ ಗರ್ಭಿಣಿ ಜೀಬ್ರಾ ಸಾವು: ತನಿಖೆಗೆ ಆದೇಶ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ 3 ವರ್ಷದ ಕಾವ್ಯಾ ಎಂಬ ಹೆಸರಿನ ಗರ್ಭಿಣಿ ಜೀಬ್ರಾ ಮೃತಪಟ್ಟಿದೆ. 8 ತಿಂಗಳ ಗರ್ಭಿಣಿಯಾಗಿದ್ದ ಜೀಬ್ರಾ ಇನ್ನೂ ಕೆಲವೇ ದಿನಗಳಲ್ಲಿ ಮರಿ ಜೀಬ್ರಾಗೆ ಜನ್ಮ ನೀಡಬೇಕಿತ್ತು. ಗಂಡು ಜಿರಾಫೆಗಳು ಬೆನ್ನಟ್ಟುವಾಗ ಅಥವಾ ಚಿರತೆಗಳ ಭಯದಿಂದ ಓಡುವಾಗ ತಡೆ ಬೇಲಿಗೆ ಡಿಕ್ಕಿಯಾಗಿ ಜೀಬ್ರಾ ಮೃತಪಟ್ಟಿದೆ ಬನ್ನೇರುಘಟ್ಟ ಜೈವಿಕ ಉದ್ಯಾನವನದ ಆಡಳಿತ ಮಂಡಳಿ ಮಾಹಿತಿ ನೀಡಿದೆ. ಜೀಬ್ರಾಗಳು ಬಹಳ ಸೂಕ್ಷ್ಮಯುತ ಪ್ರಾಣಿಯಾಗಿದ್ದು, ತಪ್ಪಿಸಿಕೊಳ್ಳಲು ಓಡುವುದು ಅವುಗಳ ನೈಸರ್ಗಿಕ ಪ್ರವೃತ್ತಿಯಾಗಿದೆ ಎಂದು ಬಿಬಿಪಿ ಕಾರ್ಯನಿರ್ವಾಹಕ ನಿರ್ದೇಶಕ ಎವಿ ಸೂರ್ಯ ಸೇನ್ ಅವರು ಹೇಳಿದ್ದಾರೆ.




ಮೃತಪಟ್ಟ ಜೀಬ್ರಾ ಒತ್ತಡ, ಆಘಾತ ಮತ್ತು ಮಯೋಪತಿಯಿಂದ ಬಳಲುತ್ತಿದ್ದರು. ಓಡುವಾಗ ತಡೆ ಬೇಲಿಗೆ ಡಿಕ್ಕಿ ಹೊಡೆದು ತನ್ನನ್ನು ತಾನೇ ಗಾಯಗೊಳಿಸಿಕೊಂಡು, ಮೃತಪಟ್ಟಿದೆ ಎಂದು ತಿಳಿಸಿದ್ದಾರೆ. ಕಳೆದ ಹಲವು ದಿನಗಳಿಂದ ಬನ್ನೇರುಘಟ್ಟ ಸುತ್ತ ಮುತ್ತ ಚಿರತೆಗ ಹಾವಳಿ ಹೆಚ್ಚಾಗುತ್ತಿದೆ. ಹಲವು ಗ್ರಾಮಗಳಿಗೂ ಚಿರತೆಗಳು ಬೇಟಿ ನೀಡುತ್ತಿದೆ. ಪ್ರಮುಖವಾಗಿ ಬನ್ನೇರುಘಟ್ಟ ಮೃಗಾಲಯದಲ್ಲಿ ಹಲವು ಸಂರಕ್ಷಿತ ವನ್ಯ ಪ್ರಾಣಿಗಳು ಇರುವ ಕಾರಣ ಕಾಡಿನ ಚಿರತೆಗಳು ಇದೇ ಸ್ಥಳದಲ್ಲಿ ಹೆಚ್ಚು ಓಡಾಡುತ್ತಿದೆ. ಚಿರತೆ ಆಗಮನದಿಂದ ತಡೆಗೋಡೆ ಒಳಗಿರುವ ವನ್ಯ ಮೃಗಗಳು ಭಯಗೊಳ್ಳುತ್ತಿದೆ. ದಿಕ್ಕುಪಾಲಾಗಿ ಓಡುತ್ತಿದೆ. ಇದು ಗರ್ಭಿಣಿ ಮೃಗಗಳಿಗೆ ಅಪಾಯ ಹೆಚ್ಚಿಸುತ್ತಿದೆ. ಈ ಬೆಳವಣಿಗೆ ಕುರಿತು ಮಾತನಾಡಿರುವ ಅಧಿಕಾರಿಯೊಬ್ಬರು, ಮೃಗಾಲದಲ್ಲಿ ಎರಡು ಗಂಡು, ಆರು ಹೆಣ್ಣು ಜೀಬ್ರಾಗಳಿವೆ. 2019ರಲ್ಲಿಯೂ ಇದೇ ರೀತಿಯ ಸಾವು ವರದಿಯಾಗಿತ್ತು. ಮಿಲನಕ್ಕೂ ಮುನ್ನ ಗಂಡು ಪ್ರಾಣಿಗಳು ಹೆಣ್ಣು ಪ್ರಾಣಿಗಳನ್ನು ಓಡುವಂತೆ ಮಾಡಿ ದಣಿಯುವಂತೆ ಮಾಡುತ್ತವೆ.

ಇದು ಪ್ರಾಣಿಗಳ ಪ್ರವೃತ್ತಿ. ಪ್ರಸ್ತುತ ಮೃಗಾಲಯದಲ್ಲಿರುವ ಎಲ್ಲಾ ಹೆಣ್ಣು ಚಿರತೆಗಳು ಗರ್ಭಿಣಿಯಾಗಿವೆ. ರಕ್ಷಿಸಲ್ಪಟ್ಟ, ಸೆರೆಹಿಡಿಯಲ್ಪಟ್ಟ ಮತ್ತು ಸೆರೆಯಲ್ಲಿ ಜನಿಸಿದ ಚಿರತೆಗಳನ್ನು ಮೃಗಾಲಯದಲ್ಲಿ ಇರಿಸಲಾಗಿದ್ದು, ಚಿರತೆಗಳ ಸಂಖ್ಯೆ ಹೆಚ್ಚಾಗಿದೆ. ಈ ನಡುವೆ ಮೃಗಾಲಯದ ಹೊರಗೂ ಚಿರತೆಗಳು ಓಡಾಡುತ್ತಿದ್ದು, ಅವುಗಳನ್ನು ನಿರಂತವಾಗಿ ಓಡಿಸಿ ಸ್ಥಳಾಂತರಿಸಲಾಗುತ್ತಿದೆ. ಇದೇ ರೀತಿ ಚಿರತೆದೊಂಡು ಮೃಗಾಲಯ ಪ್ರದೇಶಕ್ಕೆ ನಡೆದು ಬಂದಿರಬುದು.

# ಬಿಬಿಎಂಪಿ ಮುಖ್ಯ ಆಯುಕ್ತರಿಂದ ಅಧಿಕಾರಿಗಳಿಗೆ ಸೂಚನೆ

## ಸಾಯಿ ಲೇಔಟ್ ಜಲಕಂಟಕ ಸಮಸ್ಯೆಗೂ ಪರಿಹಾರ ಕಂಡುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ

• ಉದಯವಾಹಿನಿ, ಬೆಂಗಳೂರು

ಬೃಹತ್ ಬೆಂಗಳೂರು ಮಾಹನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ತ್ವರಿತವಾಗಿ ಮುಚ್ಚಲು ಕ್ರಮ ಕೈಗೊಳ್ಳಬೇಕು ಎಂದು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಪಾಲಿಕೆ ಕೇಂದ್ರ ಕಚೇರಿಯಲ್ಲಿ (ಜೂನ್ 10–ಮಂಗಳವಾರ) ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಲು ಮೊದಲ ಆದ್ಯತೆ ನೀಡಬೇಕು. ಮಳೆಗಾಲ ಆರಂಭಕ್ಕೆ ಮುನ್ನವೇ ಎಲ್ಲಾ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಆರಂಭಿಸಬೇಕು ಎಂದು ಸೂಚಿಸಿದರು.

ಮಳೆಯಾಗುವ ಸಂದರ್ಭದಲ್ಲಿ ಕೋಲ್ಡ್ ಮಿಕ್ಸ್ ಬಳಸಿಕೊಂಡು ರಸ್ತೆ ಗುಂಡಿಗಳನ್ನು ಮುಚ್ಚಬೇಕು. ಡಾಂಬರೀಕರಣ ಕೈಗೊಂಡಿರುವ ರಸ್ತೆಗಳಲ್ಲಿ ತ್ವರಿತವಾಗಿ ಕೆಲಸ ಮುಗಿಸಿ, ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಅಧಿಕಾರಿಗಳಿಗೆ ಇದೇ ವೇಳೆ ಬಿಇಎಂಪಿ ಆಯುಕ್ತರು ತಾಕೀತು ಮಾಡಿದರು.



ಉದಯವಾಹಿನಿ ಚಿತ್ರ

**ಬಿಬಿಎಂಪಿ ಆಯುಕ್ತರು ಅಧಿಕಾರಿಗಳಿಗೆ ಸಲಹೆ**

**ಸಾಯಿ ಲೇಔಟ್ ಸಮಸ್ಯೆ ಬಗೆಹರಿಸಿ:** ಸಾಯಿ ಲೇಔಟ್ ಮತ್ತೆ ಜಲಾವೃತವಾಗುವುದನ್ನು ತಪ್ಪಿಸಲು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಈಗಾಗಲೇ ಬಿಡಿಎ ವತಿಯಿಂದ ಜಾಕ್ ವೆಲ್ ನಿರ್ಮಿಸಿದ್ದು, ಅದರ ಮೂಲಕ ಮಳೆ ನೀರು ಹೊರ ಹೋಗುವಂತಹ ವ್ಯವಸ್ಥೆ ಮಾಡಲಾಗಿದೆ. ಜೊತೆಗೆ ಪಾಲಿಕೆಯಿಂದಲೂ ಮೋಟಾರು ಪಂಪ್‌ಗಳನ್ನು ಸ್ಥಳದಲ್ಲಿ ಶಾಶ್ವತವಾಗಿರಿಸಿ, ಪ್ರವಾಹ ಪರಿಸ್ಥಿತಿ ನಿರ್ಮಾಣವಾಗದಂತೆ ನೋಡಿಕೊಳ್ಳಬೇಕು. ರೈಲ್ವೆ ವೆಂಟ್ ಕಾಮಗಾರಿ ಚುರುಕುಗೊಳಿಸಿ, ಆದಷ್ಟು ಶೀಘ್ರ ಪೂರ್ಣಗೊಳಿಸಬೇಕು ಎಂದು ಮಹೇಶ್ವರ್ ರಾವ್ ಹೇಳಿದರು.

**ಜನರ ದೂರುಗಳಿಗೆ ಸ್ಪಂದಿಸಿ:** ನಗರದಲ್ಲಿ ಕಸದ ಸಮಸ್ಯೆ ಬೀದಿ ದೀಪ, ರಸ್ತೆ ಗುಂಡಿ ಸೇರಿದಂತೆ ಇನ್ನಿತರೆ ವಿಷಯಗಳ ಕುರಿತು ಸಹಾಯವಾಣಿ ಸಂಖ್ಯೆ, ವಾಟ್ಸಪ್ ಸಂಖ್ಯೆ, ಸಹಾಯ 2.0 ಗೆ ಬರುವ ದೂರುಗಳಿಗೆ ಸ್ಪಂದಿಸಿ ಶೀಘ್ರ ಬಗೆಹರಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಬಿಬಿಎಂಪಿ ಆಯುಕ್ತ ಮಹೇಶ್ವರ್ ರಾವ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ, ಡಾ.ಕೆ. ಹರೀಶ್ ಕುಮಾರ್, ಸುರಳ್ಕರ್ ವಿಕಾಸ್ ಕಿಶೋರ್, ಅವಿನಾಶ್ ಮೆನನ್ ರಾಜೇಂದ್ರನ್, ಪ್ರೀತಿ ಗೆಹ್ಲೋಟ್, ನವೀನ್‌ಕುಮಾರ್ ರಾಜು, ವಲಯ ಆಯುಕ್ತರಾದ ಸತೀಶ್, ರಮ್ಯಾ, ಕರೀಗೌಡ, ರಮೇಶ್, ಸ್ನೇಹಲ್ ದಿಗ್ವಿಜಯ್ ಬೋಡ್ಕೆ, ಬಿ-ಸ್ಮೈಲ್ ತಾಂತ್ರಿಕ ನಿರ್ದೇಶಕ ಪ್ರಹ್ಲಾದ್ ಮತ್ತಿತರರು ಸಭೆಯಲ್ಲಿ ಪಾಲ್ಗೊಂಡಿದ್ದರು

### ಸಣ್ಣ ಅರಣ್ಯಗಳ ನಿರ್ಮಾಣಕ್ಕೆ ಜಾಗ ಗುರುತಿಸಿ

**ಬಿಬಿಎಂಪಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಸ್ಥಳಗಳನ್ನು ಗುರುತಿಸಿ, ಸಣ್ಣ ಅರಣ್ಯಗಳನ್ನು ನಿರ್ಮಿಸಲು ಕ್ರಮ ವಹಿಸಬೇಕು. ಸ್ಥಳ ಗುರುತಿಸಿದ ಬಳಿಕ ಅರಣ್ಯ ನಿರ್ಮಾಣಕ್ಕೆ ಸೂಕ್ತ ಕ್ರಮ ವಹಿಸಬೇಕು ಎಂದು ಬಿಬಿಎಂಪಿ ಆಯುಕ್ತ ಮಹೇಶ್ವರ್ ರಾವ್ ಸಭೆಯಲ್ಲಿ ಹೇಳಿದರು.ಮುಂದುವರೆದು, ನಗರದಲ್ಲಿ ಹೆಚ್ಚು ಮಳೆಯಾಗುವ ಮುನ್ಸೂಚನೆಯಿದ್ದು, ಪ್ರವಾಹಪೀಡಿತ ಪ್ರದೇಶಗಳ ಮೇಲೆ ಹೆಚ್ಚು ನಿಗಾ ವಹಿಸಬೇಕು. ಪ್ರವಾಹ ಉಂಟಾಗಲಿರುವ ಪ್ರದೇಶಗಳಲ್ಲಿಏನಾದರೂ ಸಮಸ್ಯೆಗಳಿದ್ದರೆ, ಶಾಶ್ವತ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಬಿಬಿಎಂಪಿ ಆಯುಕ್ತರು ಅಧಿಕಾರಿಗಳಿಗೆ ಸಲಹೆ ನೀಡಿದರು.**

# ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣ

• ಉದಯವಾಹಿನಿ, ಬೆಂಗಳೂರು



**ಗಾಲಿ ಜನಾರ್ದನ ರೆಡ್ಡಿಗೆ ಬಿಗ್ ರಿಲೀಫ್**

ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಅವರಿಗೆ ತೆಲಂಗಾಣ ಹೈಕೋರ್ಟ್‌ನಿಂದ ತಾತ್ಕಾಲಿಕ ರಿಲೀಫ್ ಸಿಕ್ಕಿದ್ದು, ವಿಶೇಷ ಸಿಬಿಐ ನ್ಯಾಯಾಲಯ ಇತ್ತೀಚೆಗೆ ವಿಧಿಸಿದ್ದ ಏಳು ವರ್ಷಗಳ ಜೈಲು ಶಿಕ್ಷೆಯನ್ನು ಈ ಹಂತದಲ್ಲಿ ಜಾರಿಗೊಳಿಸುವ ಅಗತ್ಯವಿಲ್ಲ ಎಂದು ಹೈಕೋರ್ಟ್ ತೀರ್ಪು ನೀಡಿ ಜನಾರ್ದನ ರೆಡ್ಡಿಗೆ ಷರತ್ತುಬದ್ಧ ಜಾಮೀನು ನೀಡಿದೆ.

ರೆಡ್ಡಿಗೆ ಷರತ್ತುಬದ್ಧ ಜಾಮೀನು ನೀಡಿರುವ ಕೋರ್ಟ್, ತಲಾ 10 ಲಕ್ಷ ಮೌಲ್ಯದ ಇಬ್ಬರು ಶ್ಯೂರಿಟಿಗಳನ್ನು ಸಲ್ಲಿಸುವಂತೆ ಸೂಚನೆ ನೀಡಿದೆ. ಅಲ್ಲದೇ, ಭಾರತ ಬಿಟ್ಟು ಹೋಗಲು ಅನುಮತಿ ಇರುವುದಿಲ್ಲ. ಗಾಲಿ ಜನಾರ್ದನ ರೆಡ್ಡಿ ಅವರ ಪಾಸ್‌ಪೋರ್ಟ್ ಅನ್ನು ಒಪ್ಪಿಸುವಂತೆಯೂ ಆದೇಶಿಸಿದೆ. ಕಳೆದ ತಿಂಗಳು (ಮೇ 6) ಓಬಳಾಪುರಂ ಮೈನಿಂಗ್ ಕಂಪನಿಗೆ ಸಂಬಂಧಿಸಿದ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಸಿಬಿಐ ನ್ಯಾಯಾಲಯವು ಅಂತಿಮ ತೀರ್ಪು ನೀಡಿ ಏಳು ವರ್ಷಗಳ ಶಿಕ್ಷೆ ವಿಧಿಸಿತ್ತು. ಜನಾರ್ದನ ರೆಡ್ಡಿ ಜತೆಗೆ, ಶ್ರೀನಿವಾಸ್ ರೆಡ್ಡಿ, ವಿ.ಡಿ. ರಾಜಗೋಪಾಲ್ ಮತ್ತು ಅಲಿ ಖಾನ್ ಕೂಡ ತಪ್ಪಿತಸ್ಥರೆಂದು ಸಾಬೀತಾಗಿತ್ತು. ತೀರ್ಪು ಪ್ರಶ್ನಿಸಿ ರೆಡ್ಡಿ ಹೈಕೋರ್ಟ್ ಮೊರೆ ಹೋಗಿದ್ದರು.ಈ ಅರ್ಜಿಯ ವಾದಗಳನ್ನು ಮಂಗಳವಾರ ಆಲಿಸಿದ್ದ ಕೋರ್ಟ್ ತೀರ್ಪನ್ನು ಇಂದಿಗೆ ಕಾಯ್ದಿರಿಸಿತ್ತು. ನ್ಯಾಯಮೂರ್ತಿ ಕೆ. ಲಕ್ಷ್ಮಣ್ ಅವರು ಸಿಬಿಐ ನ್ಯಾಯಾಲಯದ ತೀರ್ಪನ್ನು ತಾತ್ಕಾಲಿಕವಾಗಿ ತಡೆಹಿಡಿದು ಗಾಲಿ ಜನಾರ್ದನ ರೆಡ್ಡಿಗೆ ಜಾಮೀನು ನೀಡಿ ತೀರ್ಪು ನೀಡಿದ್ದಾರೆ.

ಆಂಧ್ರ-ಕರ್ನಾಟಕದ ಗಡಿ ಭಾಗಕ್ಕೆ ಹೊಂದಿಕೊಂಡ ಹೀರೆಹಾಳ್-ಸಿದ್ದಾಪುರ ಬಳಿಯ ಓಬಳಾಪುರಂ ಬೆಟ್ಟದಲ್ಲಿ ನಡೆದಿದ್ದ ಅಕ್ರಮ ಗಣಿಕಾರಿಕೆಗೆ ಸಂಬಂಧಿಸಿದ ಪ್ರಕರಣ ಇದಾಗಿದೆ. ಓಎಂಸಿ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಶ್ರೀನಿವಾಸರೆಡ್ಡಿ ಮತ್ತು ಜನಾರ್ದನರೆಡ್ಡಿ ಈ ಕಂಪನಿಯ ಮುಖ್ಯಸ್ಥರಾಗಿದ್ದರು. ಈ ಕಂಪನಿಗೆ ಗಣಿಗಾರಿಕೆ ಮಂಜೂರಾತಿ ನೀಡುವಲ್ಲಿ ಅರಣ್ಯ ಇಲಾಖೆ ಹಾಗೂ ಗಣಿ ಇಲಾಖೆಯಿಂದಲೂ ಅಕ್ರಮ ನಡೆದಿತ್ತು.

ಇದರಲ್ಲಿ ರಾಜ್ಯದ 29 ಲಕ್ಷ ಟನ್ ಅದಿರನ್ನು ಲೂಟಿ ಮಾಡಿ 884 ಕೋಟಿ ರೂ. ಆದಾಯ ಪಡೆದಿದ್ದಾರೆ ಎನ್ನುವ ಆರೋಪವಿದೆ. 2009ರಲ್ಲಿ ಆಂಧ್ರದ ಅಂದಿನ ಮುಖ್ಯಮಂತ್ರಿ ಕಾಂಗ್ರೆಸ್‌ನ ರೋಷಯ್ಯ ಅವರು 2009 ರಲ್ಲಿ ಈ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡಿದ್ದರು. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ 2011ರ ಸೆಪ್ಟೆಂಬರ್ 5 ರಂದು ಜನಾರ್ದನ ರೆಡ್ಡಿ, ಶ್ರೀನಿವಾಸರೆಡ್ಡಿ ಸಿಬಿಐನಿಂದ ಬಂಧಿತರಾಗಿ, ಮೂರುವರೆ ವರ್ಷಗಳ ಕಾಲ ಚಂಚಲಗುಡ ಮತ್ತು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲು ವಾಸ ಅನುಭವಿಸಿದ್ದರು.

# ಬೆಂಗಳೂರು-ಮಂಗಳೂರು ಹೈಸ್ಪೀಡ್ ಕಾರಿಡಾರ್: DPR ಸಿದ್ಧತೆ

• ಉದಯವಾಹಿನಿ, ಬೆಂಗಳೂರು

ಬಹು ನಿರೀಕ್ಷಿತ ಮಂಗಳೂರು-ಬೆಂಗಳೂರು ಹೈಸ್ಪೀಡ್ ಕಾರಿಡಾರ್ ಯೋಜನೆ ಕಾರ್ಯಗತವಾಗುವ ಪ್ರಕ್ರಿಯೆ ವೇಗ ಪಡೆದುಕೊಂಡಿದೆ. ಹೆದ್ದಾರಿ ಸಚಿವಾಲಯದಿಂದ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ವಿಸ್ತೃತ ಯೋಜನಾ ವರದಿ(ಡಿಪಿಆರ್) ತಯಾರಿಸುವ ಕಾರ್ಯ ಪ್ರಾರಂಭವಾಗಲಿದೆ ಎಂದು ದಕ್ಷಿಣ ಕನ್ನಡ ಜಿಲ್ಲೆ ಸಂಸದ ಕ್ಯಾ.ಬ್ರಿಜೇಶ್ ಚೌಟ ಅವರು ಹೇಳಿದ್ದಾರೆ. ಕಾರಿಡಾರ್ ರಸ್ತೆ ನಿರ್ಮಾಣದ ಬಗ್ಗೆ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಂದ ಪತ್ರ ಬಂದಿದ್ದು, ಡಿಪಿಆರ್ ಸಿದ್ಧಪಡಿಸುವುದಕ್ಕೆ ಏ.30ರಂದು ಗುತ್ತಿಗೆ ನೀಡಲಾಗಿದೆ.

ಈ ಪ್ರಕ್ರಿಯೆ ಪೂರ್ಣವಾಗಲು 18 ತಿಂಗಳು ಅವಧಿ ನಿರೀಕ್ಷಿಸಲಾಗಿದೆ. ದ.ಕ. ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಪೂರಕವಾಗಿರುವ ಈ ಮಹತ್ವಾಕಾಂಕ್ಷೆಯ



ಉದಯವಾಹಿನಿ ಚಿತ್ರ

ಯೋಜನೆ ಜಾರಿಗೆ ಮಹತ್ವದ ಹೆಜ್ಜೆ ಇರಿಸಿರುವ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಹಾಗೂ ಹೆದ್ದಾರಿ ಸಚಿವ ಗಡ್ಕರಿ ಅವರಿಗೆ ಧನ್ಯವಾದ ಸಲ್ಲಿಸುವುದಾಗಿ ಸಂಸದರು ತಿಳಿಸಿದ್ದಾರೆ.

ಈ ಹೈಸ್ಪೀಡ್ ಎಕ್ಸ್‌ಪ್ರೆಸ್ ಹೆದ್ದಾರಿಯು 4-8 ಪಥಗಳನ್ನು ಹೊಂದುವ ನಿರೀಕ್ಷೆಯಿದ್ದು, ಹಾಸನದ ಮೂಲಕ ಹಾದು ಹೋಗಲಿದೆ. ಈ ಹೆದ್ದಾರಿಯಿಂದ 2 ಮಹಾನಗರಗಳ ನಡುವಿನ ಸಾರಿಗೆ ಮೂಲಸೌಕರ್ಯ ಮತ್ತಷ್ಟು ಮೇಲ್ದರ್ಜೆಗೇರಲಿದೆ. ಸಂಚಾರ ದಟ್ಟಣೆ ಪ್ರಯಾಣದ ಸಮಯ ಕಡಿಮೆಯಾಗಲಿದೆ.

ಈ ಯೋಜನೆಯಿಂದ ಮಂಗಳೂರು ಮಾತ್ರವಲ್ಲದೇ ದಕ್ಷಿಣ ಕರ್ನಾಟಕಕ್ಕೆ ಹಾಗೂ ಸುತ್ತಮುತ್ತದ ನಗರಗಳ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಮಂಗಳೂರು ಬಂದರು ಹಾಗೂ ಪ್ರವಾಸೋದ್ಯಮ, ವ್ಯಾಪಾರ , ವಾಣಿಜ್ಯ ಚಟುವಟಿಕೆಗಳ ಬೆಳವಣಿಗೆಗೂ ಇನ್ನಷ್ಟು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

ಶಿರಾಡಿ ಘಾಟಿಯಲ್ಲಿ ಪ್ರತ್ಯೇಕ ರೈಲು ಮಾರ್ಗ ನಿರ್ಮಿಸಲು ರೈಲ್ವೆ ಇಲಾಖೆ ಡಿಪಿಆರ್ ಸಿದ್ಧಪಡಿಸಲು ಮುಂದಾಗಿದೆ. ಇಲ್ಲಿ ರಸ್ತೆ ಮತ್ತು ರೈಲು ಮಾರ್ಗವನ್ನು ಸಮಾನಾಂತರವಾಗಿ ಅಭಿವೃದ್ಧಿಸುವ ಸಾಧ್ಯತೆಗಳ ಬಗ್ಗೆ ಅನ್ವೇಷಿಸಲು ರೈಲ್ವೆ ಮಂಡಳಿ ಮತ್ತು ಎನ್‌ಎಚ್‌ಎಐ ಅಧಿಕಾರಿಗಳನ್ನು ಒಳಗೊಂಡ ಜಂಟಿ ಸಮಿತಿಯನ್ನು ರಚಿಸುವಂತೆ ಕೋರಿದ್ದೇನೆ' ಎಂದು ಇದೇ ವೇಳೆ ಸಂಸದರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಡಿಜಿಟಲ್ ಅರೆಸ್ಟ್; ವೃದ್ಧ ದಂಪತಿಗೆ 4.79 ಕೋಟಿ ರೂ ವಂಚನೆ

• ಉದಯವಾಹಿನಿ, ಬೆಂಗಳೂರು

ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ಬೆದರಿಸಿ ವೃದ್ಧ ದಂಪತಿಯಿಂದ ರೂ. 4.79 ಕೋಟಿ ಸುಲಿಗೆ ಮಾಡಿದ್ದ ಇಬ್ಬರು ಆರೋಪಿಗಳನ್ನು ಬೆಂಗಳೂರು ಆಗ್ನೇಯ ವಿಭಾಗದ ಸೈಬರ್ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಂಧಿತರನ್ನು ಈಶ್ವರ್ ಸಿಂಗ್ ಮತ್ತು ನಾರಾಯಣ್ ಸಿಂಗ್ ಚೌಧರಿ ಎಂದು ಗುರುತಿಸಲಾಗಿದೆ.

ಜೆಪಿ ನಗರದಲ್ಲಿ ವಾಸಿಸುವ ಸಂತ್ರಸ್ತ ದಂಪತಿಗಳನ್ನು ಮಾರ್ಚ್ 19 ರಿಂದ ಮೇ 15 ರವರೆಗೆ ಸುಮಾರು ಮೂರು ತಿಂಗಳ ಕಾಲ ಡಿಜಿಟಲ್ ಅರೆಸ್ಟ್‌ನಲ್ಲಿ ಇರಿಸಲಾಗಿತ್ತು. ದೂರುದಾರರಾದ ಮಂಜುನಾಥ್ 77 ನೈಜೀರಿಯಾದಲ್ಲಿ 31 ವರ್ಷಗಳಿಂದ ಇಂಜಿನಿಯರ್ ಆಗಿ ಕೆಲಸ ಮಾಡಿದ್ದಾರೆ. ಅವರಿಬ್ಬರ



ಮಕ್ಕಳು ಮದುವೆಯ ನಂತರ ಪ್ರತ್ಯೇಕವಾಗಿ ವಾಸಿಸುತ್ತಿದ್ದಾರೆ. ಬ್ಯಾಂಕ್ ಅಧಿಕಾರಿಗಳ ಸೋಗಿನಲ್ಲಿ ಸಂತ್ರಸ್ತರಿಗೆ ಕರೆ ಮಾಡಿದ್ದ ಸೈಬರ್ ವಂಚಕರು, ನಿಮ್ಮ ಬ್ಯಾಂಕ್ ಖಾತೆಗಳ ಮೂಲಕ ಅಕ್ರಮವಾಗಿ ಹಣ ವರ್ಗಾವಣೆ ಆಗುತ್ತಿದ್ದು, ಅದಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಸಿಬಿಐನಲ್ಲಿ ಪ್ರಕರಣ ದಾಖಲಾಗಿದೆ ಎಂದು ಬೆದರಿಸಿದ್ದರು. ಅಲ್ಲದೇ, ನಕಲಿ ಬಂಧನ ವಾರೆಂಟ್ ಪ್ರತಿ ಕಳುಹಿಸಿ, ಬಂಧನದಿಂದ ತಪ್ಪಿಸಿಕೊಳ್ಳಲು ತಮ್ಮ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ ಮಾಡುವಂತೆ ಒತ್ತಡ ಹಾಕಿದ್ದರು. ಇದರಿಂದ ಬೆದರಿದ ದಂಪತಿಗಳು ವಂಚಕರಾದ ಈಶ್ವರ್ ಖಾತೆಗೆ ರೂ. 10 ಲಕ್ಷ, ನಾರಾಯಣ್ ಖಾತೆಗೆ 1.8 ಕೋಟಿ ರೂ. ವರ್ಗಾವಣೆ ಮಾಡಿದ್ದರು.

ಬ್ಯಾಂಕ್ ವಿವರಗಳನ್ನು ಬಳಸಿಕೊಂಡು ಪೊಲೀಸರು ಇಬ್ಬರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ವೃದ್ಧ ದಂಪತಿಗಳು ದಕ್ಷಿಣ ವಿಭಾಗದಲ್ಲಿ ನೆಲೆಸಿದ್ದರೂ ಸುಳಿವು ಆಧರಿಸಿ ಅವರನ್ನು ರಕ್ಷಿಸಲಾಗಿದೆ. ಆರೋಪಿಗಳು ಶ್ರೀಲಂಕಾದ ಕ್ಯಾಸಿನೊದಲ್ಲಿದ್ದಾರೆ ಎಂಬ ಮಾಹಿತಿಯ ಮೇರೆಗೆ ಅವರ ವಿರುದ್ಧ ಲುಕ್‌ಔಟ್ ನೋಟಿಸ್ ಜಾರಿಗೊಳಿಸಿ ಬಂಧಿಸಲಾಗಿದೆ. ಡಿಜಿಟಲ್ ಬಂಧನದ ಬಗ್ಗೆ ಸಂತ್ರಸ್ತರು ತಮ್ಮ ಮಕ್ಕಳಿಗೆ ತಿಳಿಸಿಲ್ಲ.

# ಮಹಿಳೆಯರಿಗೆ ಮುತ್ತಿಟ್ಟ ಪ್ರಕರಣ

• ಉದಯವಾಹಿನಿ, ಬೆಂಗಳೂರು

ಇಬ್ಬರು ಮಹಿಳೆಯರನ್ನು ತಬ್ಬಿಕೊಂಡು ಬಲವಂತವಾಗಿ ಚುಂಬಿಸಿ ಪರಾರಿಯಾಗಿದ್ದ ಆರೋಪಿಯನ್ನು ಪುಲಿಕೇಶಿನಗರ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಬಾಣಸವಾಡಿ ನಿವಾಸಿ ಮದನ್(37) ಬಂಧಿತ ಆರೋಪಿ.



ಜೂನ್ 6ರಂದು ಆರೋಪಿ ಕೃತ್ಯ ಎಸಗಿ ಪರಾರಿ ಆಗಿದ್ದ ಎಂದು ಪೊಲೀಸರು ಹೇಳಿದರು. ಠಾಣಾ ವ್ಯಾಪ್ತಿಯ ಉದ್ಯಾನವೊಂದರಲ್ಲಿ ಮಹಿಳೆಯೊಬ್ಬರು ವಾಯುವಿಹಾರಕ್ಕೆ ತೆರಳಿದ್ದರು. ಆಗ ಮಹಿಳೆಯನ್ನು ಆರೋಪಿ ಬಲವಂತವಾಗಿ ತಬ್ಬಿಕೊಂಡು ಮುತ್ತಿಟ್ಟಿದ್ದ. ಅಂದೇ ಸಂಜೆ ಅಂಗಡಿಯೊಂದರ ಎದುರು ನಿಂತಿದ್ದ ಮಹಿಳೆ ಮೇಲೆ ದೌರ್ಜನ್ಯ ಎಸಗಿದ್ದ. ಘಟನೆಯಿಂದ ವಿಚಲಿತರಾದ ಮಹಿಳೆಯರು, ಜೋರಾಗಿ ಕಿರುಚಾಟ ನಡೆಸಿದ್ದರು. ಸ್ಥಳೀಯರು ಆರೋಪಿಯನ್ನು ಹಿಡಿಯು ವಷ್ಟರಲ್ಲಿ ಆತ ಪರಾರಿ ಆಗಿದ್ದ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಪೊಲೀಸ್ ಸಹಾಯವಾಣಿಗೆ ಕರೆ ಮಾಡಿ ಸ್ಥಳೀಯರು ಮಾಹಿತಿ ನೀಡಿದ್ದರು. ಹೊಯ್ಸಳ ಸಿಬ್ಬಂದಿ ಸ್ಥಳಕ್ಕೆ ಬಂದು ಪರಿಶೀಲನೆ ನಡೆಸಿದ್ದರು. ಆರೋಪಿ ಪರಾರಿ ಆಗುತ್ತಿರುವ ದೃಶ್ಯವು ಸಿಸಿಟಿವಿ ಕ್ಯಾಮೆರಾಗಳಲ್ಲಿ ಸೆರೆ ಆಗಿತ್ತು. ದೃಶ್ಯಾವಳಿ ಆಧರಿಸಿ ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸಲಾಯಿತು ಎಂದು ಪೊಲೀಸರು ಹೇಳಿದರು.

# ಬೆಂಗಳೂರಿನಲ್ಲಿ ದುಬಾರಿಯಾಗಲಿದೆ ಆಟೋ ಪ್ರಯಾಣ!

• ಉದಯವಾಹಿನಿ, ಬೆಂಗಳೂರು

ರಾಜ್ಯದ ಜನತೆ ಹಲವು ಬೆಲೆ ಏರಿಕೆಗಳಿಂದ ತತ್ತರಿಸಿರುವ ನಡುವೆಯೇ ಆಟೋ ಪ್ರಯಾಣ ದರ ಕೂಡ ಏರಿಕೆಯಾಗುವ ಸಾಧ್ಯತೆಯಿದೆ. ಆಟೋರಿಕ್ಷಾ ದರವು ಈಗಿರುವ 30 ರೂ. ಗಳಿಂದ 36 ರೂ.ಗಳಿಗೆ, ನಂತರದ ಪ್ರತಿ ಕಿಲೋಮೀಟರ್ ಶುಲ್ಕವು 15 ರೂ.ಗಳಿಂದ 18 ರೂ.ಗಳಿಗೆ ಏರಿಕೆಯಾಗುವ ನಿರೀಕ್ಷೆಯಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಆಟೋರಿಕ್ಷಾ ಚಾಲಕರು, ಸಂಘಗಳು ಸರ್ಕಾರವನ್ನು ಪದೇ ಪದೇ ದರವನ್ನು ಹೆಚ್ಚಿಸುವಂತೆ ಒತ್ತಾಯಿಸುತ್ತಿವೆ. ಮೂಲ ದರವನ್ನು 40 ರೂ.ಗಳಿಗೆ ಮತ್ತು ಪ್ರತಿ ಕಿಲೋಮೀಟರ್ ಶುಲ್ಕವನ್ನು 20 ರೂ.ಗಳಿಗೆ ಪರಿಷ್ಕರಿಸಬೇಕೆಂದು ಒತ್ತಡ ಹೇರುತ್ತಿದ್ದಾರೆ.

ನಗರ ವ್ಯಾಪ್ತಿಗೆ ಬರುವ 10 ಪ್ರಾದೇಶಿಕ ಸಾರಿಗೆ ಕಚೇರಿಗಳ (ಆರ್‌ಟಿಒ) ಅಧಿಕಾರಿಗಳು, ಪೊಲೀಸ್ ಉಪ ಆಯುಕ್ತರು (ಸಂಚಾರ) ಮತ್ತು ಆಟೋ ಚಾಲಕರ ಸಂಘಗಳ ಪ್ರತಿನಿಧಿಗಳು ಜಿಲ್ಲಾ ಸಾರಿಗೆ ಪ್ರಾಧಿಕಾರದ (ಡಿಟಿಎ) ಭಾಗವಾಗಿರುತ್ತಾರೆ. ಅಸ್ತಿತ್ವದಲ್ಲಿರುವ ಇಂಧನ ಬೆಲೆಗಳು,



ಉದಯವಾಹಿನಿ ಚಿತ್ರ

ನಗರದಲ್ಲಿನ ಸಂಚಾರ ಸ್ಥಿತಿ ಮತ್ತು ಪ್ರಯಾಣಿಕರ ಬೇಡಿಕೆಯಂತಹ ಅಂಶಗಳನ್ನು ಪರಿಗಣಿಸಿ ದರ ಪರಿಷ್ಕರಣೆಯನ್ನು ನಿರ್ಧರಿಸಲಾಗುತ್ತದೆ. ಶಿಫಾರಸಿನ ಆಧಾರದ ಮೇಲೆ, ಡಿಟಿಎ ಅಧ್ಯಕ್ಷರಾಗಿರುವ ಬೆಂಗಳೂರು ನಗರ ಉಪ ಆಯುಕ್ತರು ದರ ಪರಿಷ್ಕರಣೆಯ ಬಗ್ಗೆ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತಾರೆ. ಬೆಂಗಳೂರು ನಗರ ಡಿಸಿ ಕಚೇರಿಯ ಮೂಲಗಳ ಪ್ರಕಾರ, ಪರಿಷ್ಕೃತ ದರಗಳು ರೂ 36 ಮತ್ತು ರೂ 18 ಆಗಿದ್ದು, ಬೆಂಗಳೂರು ನಗರ ಡಿಸಿ ಜಗದೀಶ ಜಿ ಅವರ ಅನುಮೋದನೆಗಾಗಿ ಕಾಯುತ್ತಿವೆ. ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತದ ತನಿಖೆಯ ಕಾರ್ಯವನ್ನು ಬೆಂಗಳೂರು ಡಿಸಿ ವಹಿಸಿದ್ದಾರೆ ಹಾಗೂ ಆ ಕೆಲಸದಲ್ಲಿ ಸಂಪೂರ್ಣವಾಗಿ ನಿರತರಾಗಿದ್ದಾರೆ, ಈ ಕೆಲಸಗಳು ಮುಗಿದ ನಂತರ, ದರಗಳನ್ನು ಅಧಿಕೃತವಾಗಿ ಘೋಷಿಸಲಾಗುವುದು ಎಂದು ಮೂಲಗಳು ತಿಳಿಸಿವೆ.

**ಪರಿಷ್ಕೃತ ದರಗಳು ರೂ 40 ಮತ್ತು ರೂ 20 ಆಗದಿದ್ದರೆ ಹೋರಾಟ ನಡೆಸುವುದಾಗಿ ಆಟೋರಿಕ್ಷಾ ಚಾಲಕರ ಸಂಘ, ಆದರ್ಶ ಆಟೋ ಮತ್ತು ಟ್ಯಾಕ್ಸಿ ಚಾಲಕರ ಒಕ್ಕೂಟದಂತಹ ಆಟೋ ಒಕ್ಕೂಟಗಳು ತಿಳಿಸಿವೆ. 2021 ರಿಂದ ದರಗಳನ್ನು ಪರಿಷ್ಕರಿಸಲಾಗಿಲ್ಲ. ಈ ಎಲ್ಲಾ ವರ್ಷಗಳಲ್ಲಿ, ಅನೇಕ ವಸ್ತುಗಳ ಬೆಲೆಗಳು ಹೆಚ್ಚಿವೆ. ಆಟೋ ದರ ಪರಿಷ್ಕರಣೆಯನ್ನು ಸಗಟು ಬೆಲೆ ಸೂಚ್ಯಂಕಕ್ಕೆ ಲಿಂಕ್ ಮಾಡಬೇಕೆಂದು ನಾವು ಒತ್ತಾಯಿಸುತ್ತೇವೆ ಎಂದು ಎಆರ್‌ಡಿಯು ಪ್ರಧಾನ ಕಾರ್ಯದರ್ಶಿ ರುದ್ರಮೂರ್ತಿ ಹೇಳಿದರು.**

# ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ದುರಂತ ಪ್ರಕರಣ


## ವಿಚಾರಣೆ ಹಾಜರಾಗುವಂತೆ ಬಿ ದಯಾನಂದ್‌ಗೆ ಜಿಲ್ಲಾಧಿಕಾರಿ ನೋಟಿಸ್

• ಉದಯವಾಹಿನಿ, ಬೆಂಗಳೂರು

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ದುರಂತ ಪ್ರಕರಣದ ವಿಚಾರಣೆಗೆ ಹಾಜರಾಗುವಂತೆ ನಿರ್ಗಮಿತ ಪೊಲೀಸ್ ಆಯುಕ್ತ ಬಿ.ದಯಾನಂದ ನೋಟಿಸ್ ಜಾರಿಗೊಳಿಸಲಾಗಿದೆ. ಕಾಲ್ತುಳಿತ ದುರಂತಕ್ಕೆ ಕಾರಣ ಪತ್ತೆಹಚ್ಚಲು ಮ್ಯಾಜಿಸ್ಟೀರಿಯಲ್ ತನಿಖೆ ನಡೆಸುತ್ತಿರುವ ನಗರ ಜಿಲ್ಲಾಧಿಕಾರಿ ಜಿ.ಜಗದೀಶ್ ಅವರು, ಘಟನೆಗೆ ಸಂಬಂಧಿಸಿ ಜೂ.13 ರಂದು ವಿಚಾರಣೆಗೆ ಹಾಜರಾಗುವಂತೆ ನಿರ್ಗಮಿತ ಪೊಲೀಸ್ ಆಯುಕ್ತ ಬಿ.ದಯಾನಂದ ಅವರಿಗೆ ನೋಟಿಸ್ ಜಾರಿಗೊಳಿಸಿದ್ದಾರೆ.

ಜೂ.4ರಂದು ಚಿನ್ನಸ್ವಾಮಿ ಕ್ರೀಡಾಂಗಣದ ಬಳಿಕ ಕೈಗೊಂಡಿದ್ದ ಬಂದೋಬಸ್ತ್, ಭದ್ರತೆ ವಿಚಾರಗಳ ಕುರಿತು ಮಾಹಿತಿ ಪಡೆಯುವ ಸಲುವಾಗಿ ಬಿ.ದಯಾನಂದ್, ಪಶ್ಚಿಮ ವಿಭಾಗದ ಹೆಚ್ಚುವರಿ ಪೊಲೀಸ್ ಆಯುಕ್ತ ವಿಕಾಸ್ ಕುಮಾರ್, ಕೇಂದ್ರ ವಿಭಾಗದ ಡಿಸಿಪಿ ಅವರನ್ನು ವಿಚಾರಣೆಗೆ ಕರೆಯಲಾಗಿದೆ ಎಂದು ಮೂಲಗಳು ಹೇಳಿವೆ.

**ಸಿಐಡಿಯಿಂದ ತನಿಖೆ ಚುರುಕು:** ಇನ್ನೊಂದೆಡೆ ತನಿಖೆ ಚುರುಕುಗೊಳಿಸಿರುವ ಸಿಐಡಿ ಅಧಿಕಾರಿಗಳು ಬುಧವಾರ ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಶನ್ (ಕೆಎಸ್‌ಸಿಎ) ಮಾಜಿ ಕಾರ್ಯದರ್ಶಿ ಎ.ಶಂಕರ್, ಖಜಾಂಚಿ ಇ.ಎಸ್.ಜಯರಾಮ್ ಅವರನ್ನು ವಿಚಾರಣೆಗೊಳಪಡಿಸಿದರು. ವಿಚಾರಣಾ ನೋಟಿಸ್ ಜಾರಿ ಹಿನ್ನೆಲೆಯಲ್ಲಿಸಿಐಡಿ ಕಚೇರಿಗೆ ಆಗಮಿಸಿದ್ದ ಇಬ್ಬರನ್ನೂ



ಎಸ್‌ಪಿ ಶುಭನ್ವಿತಾ ನೇತೃತ್ವದ ತಂಡ ಹಲವು ತಾಸುಗಳ ಕಾಲ ವಿಚಾರಣೆ ನಡೆಸಿದೆ. ಆರ್‌ಸಿಬಿ ವಿಜಯೋತ್ಸವ ಆಚರಣೆ ಸಂಬಂಧ ಕೈಗೊಂಡ ನಿರ್ಧಾರಗಳು, ಪೊಲೀಸರಿಂದ ಪಡೆದ ಅನುಮತಿ ಹಾಗೂ ಕಾಲ್ತುಳಿತ ದುರಂತಕ್ಕೆ ಸಂಬಂಧಿಸಿ ಸರಣಿ ಪ್ರಶ್ನೆಗಳನ್ನು ಕೇಳಿ ಉತ್ತರ ಪಡೆದಿದ್ದಾರೆ. ಜತೆಗೆ, ವಿಜಯೋತ್ಸವಕ್ಕೂ ಮುನ್ನ ಕೆಎಸ್‌ಸಿಎ ವತಿಯಿಂದ ಕೈಗೊಂಡಿದ್ದ ಭದ್ರತಾ ಕ್ರಮಗಳೇನು ಕಾಲ್ತುಳಿತದ ಬಳಿಕವೂ ಕಾರ್ಯಕ್ರಮ ನಡೆಸಿದ್ದರ ಕುರಿತು ಮಾಹಿತಿ ಪಡೆದಿದ್ದಾರೆ. ತನಿಖೆಗೆ ಸಂಬಂಧಿಸಿ ಅಗತ್ಯಬಿದ್ದರೆ ಪುನಃ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ಕಳುಹಿಸಲಾಗಿದೆ. ಹಾಗೆಯೇ, ಕೆಲವು ಲಿಖಿತ ದಾಖಲೆಗಳನ್ನು ಒದಗಿಸುವಂತೆ ಸೂಚಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

**ದುರಂತ ಬಿಚ್ಚಿಟ್ಟ ಗಾಯಾಳುಗಳು:** ಕಾಲ್ತುಳಿತದಲ್ಲಿ ಗಾಯಗೊಂಡಿದ್ದ 45 ಮಂದಿ ಜಿಲ್ಲಾಧಿಕಾರಿ ಮುಂದೆ ಹಾಜರಾಗಿ ಹೇಳಿಕೆ ದಾಖಲಿಸಿದ್ದಾರೆ. ದುರಂತ ಹೇಗೆ ಸಂಭವಿಸಿತು. ಆನಂತರ ರಕ್ಷಣೆಗೊಳಗಾಗಿ ಆಸ್ಪತ್ರೆಗೆ ದಾಖಲಾಗಿದ್ದರ ಬಗ್ಗೆ ವಿವರಿಸಿದ್ದಾರೆ.

### ಇನ್‌ಸ್ಪೆಕ್ಟರ್ ವಿಚಾರಣೆ

**ಚಿನ್ನಸ್ವಾಮಿ ಕ್ರೀಡಾಂಗಣದ ವ್ಯಾಪ್ತಿಗೆ ಬರುವ ಕಬ್ಬನ್‌ಪಾರ್ಕ್ ಠಾಣೆಯ ಈ ಹಿಂದಿನ ಇನ್‌ಸ್ಪೆಕ್ಟರ್ ಎ.ಕೆ.ಗಿರೀಶ್ ಅವರು ಕೂಡ ಬುಧವಾರ ಸಿಐಡಿ ವಿಚಾರಣೆ ಎದುರಿಸಿದರು. ಕೆಎಸ್‌ಸಿಎ ವತಿಯಿಂದ ಆರ್‌ಸಿಬಿ ವಿಜಯೋತ್ಸವ ಆಚರಣೆ ಸಂಬಂಧ ಬಂದಿದ್ದ ಮನವಿ ಪತ್ರ, ಹಿರಿಯ ಅಧಿಕಾರಿಗಳಿಗೆ ಕಾರ್ಯಕ್ರಮದ ಕುರಿತು ಮಾಹಿತಿ ನೀಡಲಾಗಿತ್ತೇ ಎಂಬುದು ಸೇರಿದಂತೆ ಹಲವು ವಿಚಾರಗಳ ಬಗ್ಗೆ ಹೇಳಿಕೆ ದಾಖಲಿಸಿಕೊಳ್ಳಲಾಗಿದೆ ಎಂದು ಮೂಲಗಳು ಹೇಳಿವೆ. ಪ್ರಾಥಮಿಕ ತನಿಖೆ ಸಲುವಾಗಿ ಕೆಎಸ್‌ಸಿಎ ಹಾಗೂ ಪೊಲೀಸರ ವಿಚಾರಣೆ ನಡೆಸಲಾಗುತ್ತಿದೆ. ಬಳಿಕ ಗಾಯಾಳುಗಳನ್ನು ವಿಚಾರಣೆ ನಡೆಸಲಾಗುವುದು. ಕ್ರೀಡಾಂಗಣದ ಸಿಸಿಟಿವಿ ಪರಿಶೀಲನೆ ನಡೆಯುತ್ತಿದೆ ಎಂದು ತನಿಖಾ ಮೂಲಗಳು ತಿಳಿಸಿವೆ.**

### ಸರಕಾರ, ಕೆಎಸ್‌ಸಿಎಯದ್ದೇ ತಪ್ಪು ಮೊನೀಶ್



**ವಿಚಾರಣೆ ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಗಾಯಾಳು ಮೊನೀಶ್, ಆರ್‌ಸಿಬಿ ವಿಜಯೋತ್ಸವಕ್ಕೆ ಟಿಕೆಟ್ ವಿತರಿಸಿದ್ದರೆ, ಅಷ್ಟೊಂದು ಜನ ಸೇರುತ್ತಿರಲಿಲ್ಲ. ಪಂದ್ಯ ಗೆದ್ದ ಎರಡು ದಿನಗಳ ನಂತರ ವಿಜಯೋತ್ಸವ ಆಚರಿಸಬೇಕಿತ್ತು. ಭದ್ರತೆಗೆ ಹೆಚ್ಚಿನ ಪೊಲೀಸರನ್ನು ನಿಯೋಜಿಸಬೇಕಿತ್ತು. ರಾಜ್ಯ ಸರಕಾರ ಮತ್ತು ಕೆಎಸ್‌ಸಿಎಯಿಂದ ಸಾಕಷ್ಟು ತಪ್ಪಾಗಿದೆ, ಎಂದು ತಿಳಿಸಿದರು.**

# ನಗರದ ಹಲವೆಡೆ ರಾತ್ರಿ ಭಾರಿ ಮಳೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಗರದ ಹಲವು ಭಾಗಗಳಲ್ಲಿ ಮಂಗಳವಾರ ರಾತ್ರಿ ಗುಡುಗು ಮಿಂಚು ಸಹಿತ ಭಾರಿ ಮಳೆಯಾಯಿತು. ರಾತ್ರಿ ಸುಮಾರು 10.30ಕ್ಕೆ ಆರಂಭವಾದ ಮಳೆ ತಡರಾತ್ರಿ ವರೆಗೂ ಮುಂದುವರಿಯಿತು. ಹಲವಾರು ರಸ್ತೆಗಳು ಜಲಾವೃತಗೊಂಡಿದ್ದರಿಂದ ವಾಹನ ಸಂಚಾರ ನಿಧಾನಗತಿಯಲ್ಲಿತ್ತು. ಕಸ್ತೂರಿನಗರದ ಬಳಿ ಮಳೆ ನೀರು ನಿಂತು ರಾಮಮೂರ್ತಿನಗರದ ಕಡೆಗೆ ವಾಹನ ಸಂಚಾರಕ್ಕೆ ಅಡ್ಡಿಯಾಗಿತ್ತು. ಒಕಳಿಪುರ ಕೆಳಸೇತುವೆಯಲ್ಲಿ ಮಳೆ ನೀರು ನಿಂತು ವಾಹನ ಸಂಚಾರ ಸ್ಥಗಿತ ಗೊಂಡಿತ್ತು. ರಿಡ್ಕಂಡ್ ರಸ್ತೆ, ಹಲಸೂರು, ಹೊಸೂರು ರಸ್ತೆ, ಹಳೆ ಮದ್ರಾಸ್ ರಸ್ತೆಯಲ್ಲಿ ಒಂದು ಅಡಿಗೂ ಹೆಚ್ಚು ಮಳೆ ನೀರು ನಿಂತು ವಾಹನ ಸವಾರರು ಪರದಾಡಿದರು. ಬೊಮ್ಮನಹಳ್ಳಿಯಲ್ಲಿ 4.9 ಸೆಂ.ಮೀ, ಕೋರಮಂಗಲ 41 ಸೆಂ.ಮೀ, ಬಿಟಿಎಂ ಲೇಔಟ್‌ಟಿನಲ್ಲಿ 2.7ಸೆಂ.ಮೀ, ಎಚ್.ಎಸ್. ಆರ್ ಲೇಔಟ್‌ನಲ್ಲಿ 26 ಸೆಂ.ಮೀ, ಸಂಪಂಗಿರಾಮನಗರ, ಸಿಂಗಸಂದ್ರ, ಮಹದೇವಪುರ, ಪುಲಕೇಶಿ ನಗರ ಬಾಣಸವಾಡಿ, ವಿಶ್ವೇಶ್ವರ ಪುರ, ಹಂಪಿನಗರ, ಬೆಳ್ಳಂದೂರು, ಹೊರಮಾವು, ಕೊಟ್ಟಿಗೆಪಾಳ್ಯ, ಬಸವೇಶ್ವರನಗರ, ಜಕ್ಕೂರು, ಪಟ್ಟಾಭಿರಾಮ ನಗರ, ಕಾಟನ್‌ಪೇಟೆ, ವಿದ್ಯಾಪೀಠ, ಗರುಡಾಚಾರ್ ಪಾಳ್ಯ ಸುತ್ತಮುತ್ತ ಪ್ರದೇಶಗಳಲ್ಲಿ ತಲಾ 2ಸೆಂ.ಮೀಗೂ ಹೆಚ್ಚಿನ ಮಳೆಯಾಯಿತು. ಹೆಬ್ಬಾಳ, ಯಲಹಂಕ, ವಿದ್ಯಾರಣ್ಯಪುರ, ಕಮ್ಮನಹಳ್ಳಿ, ರಾಮಮೂರ್ತಿ ನಗರ, ಮಾರತ್ ಹಳ್ಳಿ, ಹೂಡಿ. ಗರುಡಾಚಾರ್ಯ ಪಾಳ್ಯ, ಎಚ್ ಎ ಎಲ್ ವಿಮಾನ ನಿಲ್ದಾಣ ಕೊತ್ತನೂರು, ರಾಜಾಜಿನಗರ, ವಿಜಯನಗರ, ಹಂಪಿನಗರ, ನಾಯಂಡಹಳ್ಳಿ, ರಾಜರಾಜೇಶ್ವರಿ ನಗರ, ಕೆಂಗೇರಿ ಸುತ್ತ ಮುತ್ತ ಪ್ರದೇಶಗಳಲ್ಲಿ ಮಳೆಯಾಯಿತು

# ನಿರ್ಗಮನ ಪರವಾನಗಿ ಇಲ್ಲದೇ ಪ್ರಯಾಣ ನಿಷಿದ್ಧ

## ವಲಸಿಗರ ಕಾರ್ಮಿಕರ ದೇಶ ತೊರೆಯುವ ಪ್ರಕ್ರಿಯೆಯಲ್ಲಿ ಹೊಸ ಬದಲಾವಣೆ ತಂದ ಕುವೈತ್

**ಕುವೈತ್:** ಮಹತ್ವದ ಬೆಳವಣಿಗೆಯೊಂದರಲ್ಲಿ, ಖಾಸಗಿ ವಲಯದಲ್ಲಿರುವ ವಲಸಿಗ ಕಾರ್ಮಿಕರು ತಮ್ಮ ವಿದೇಶ ಪ್ರಯಾಣಕ್ಕೂ ಮೊದಲು ನೋಂದಾಯಿತ ಉದ್ಯೋಗ ದಾತರಿಂದ ಅಧಿಕೃತ ನಿರ್ಗಮನ ಪರವಾನಗಿಯನ್ನು ಪಡೆಯಬೇಕು ಎಂಬ ಹೊಸ ನಿಯಮವನ್ನು ಕುವೈತ್ ಸರ್ಕಾರ ಜಾರಿಗೊಳಿಸಿದೆ. ಮುಂದಿನ ತಿಂಗಳು ಅಂದರೆ ಜುಲೈ ಆರಂಭದಿಂದ ಈ ಹೊಸ ನಿಯಮ ಜಾರಿಗೆ ಬರಲಿದ್ದು, ಈ ಕ್ರಮವನ್ನು ಕಾರ್ಮಿಕರು, ಉದ್ಯೋಗದಾತರ ಹಕ್ಕುಗಳನ್ನು ರಕ್ಷಿಸುವಾಗ, ವಲಸಿಗರ ಚಲನಶೀಲತೆಯ ಮೇಲ್ವಿಚಾರಣೆಯನ್ನು ಬಲಪಡಿಸುವ ಪ್ರಯತ್ನಗಳ ಭಾಗ ಎಂದು ಕುವೈತ್ ಸರ್ಕಾರ ಬಣ್ಣಿಸಿದೆ. ಈ ಕುರಿತು ಮಾಹಿತಿ ನೀಡಿರುವ ಕುವೈತ್ ಉಪ ಪ್ರಧಾನಮಂತ್ರಿ ಮತ್ತು ಆಂತರಿಕ ಸಚಿವ ಶೇಖ್ ಫಹಾದ್ ಅಲ್-ಯೂಸೆಫ್, ಎಲ್ಲಾ ವಲಸಿಗ ಕಾರ್ಮಿಕರು ದೇಶವನ್ನು ತೊರೆಯುವ ಮೊದಲು ನಿರ್ಗಮನ ಪರವಾನಗಿಯನ್ನು ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಶೇಖ್ ಫಹಾದ್ ಅಲ್-ಯೂಸೆಫ್ ಮೇಲುಸ್ತುವಾರಿಯಲ್ಲೇ ಈ ಆದೇಶದ ಔಪಚಾರಿಕ ಸುತ್ತೋಲೆಯನ್ನು ಹೊರಡಿಸಲಾಗಿದೆ.



ದೇಶ ಬಿಡುವ ಘಟನೆ

**ಹೊಸ ನಿಯಮ ಏನು ಹೇಳುತ್ತದೆ?:** ಹೊಸ ನಿಯಮ ಅನುಷ್ಠಾನಗೊಂಡ ಬಳಿಕ ಕುವೈತ್‌ನಲ್ಲಿ ಕೆಲಸ ಮಾಡುವ ಎಲ್ಲಾ ವಲಸಿಗ ಕಾರ್ಮಿಕರು ವಿದೇಶ ಪ್ರಯಾಣದ ಮೊದಲು, ತಮ್ಮ ವೈಯಕ್ತಿಕ ವಿವರಗಳು, ಪ್ರಯಾಣ ದಿನಾಂಕ, ಸಾರಿಗೆ ವಿಧಾನವನ್ನು ಒಳಗೊಂಡ ದಾಖಲಾತಿಗಳಿಗೆ ಉದ್ಯೋಗದಾತರಿಂದ ಪರರವಾನಗಿ ಪತ್ರವನ್ನು ಪಡೆಯಬೇಕಾಗುತ್ತದೆ. ವಲಸಿಗರ ಕಾರ್ಮಿಕರ ವಿದೇಶ ಪ್ರಯಾಣ ಪ್ರಕ್ರಿಯೆಯನ್ನು ಸುಗಮಗೊಳಿಸಲು, ನಿಖರತೆಯನ್ನು ಕಾಪಾಡಿಕೊಳ್ಳಲು, ಪೂರ್ಣಗೊಂಡ ಪರವಾನಗಿಯನ್ನು ಗೊತ್ತುಪಡಿಸಿದ ವೇದಿಕೆಯ ಮೂಲಕ ಆನ್‌ಲೈನ್ ಮೂಲಕ ಸಲ್ಲಿಸಬೇಕು. ವಲಸೆ ಕಾರ್ಮಿಕರ ನಿರ್ಗಮನವನ್ನು ಕಾನೂನು ಬದ್ಧವಾಗಿರುವಂತೆ ನೋಡಿಕೊಳ್ಳುವುದು, ಈ ನಿಯಮದ ಉದ್ದೇಶ ಎಂದು ಕುವೈತ್ ಸರ್ಕಾರ ಹೇಳಿದೆ.


ಜು.1ರಿಂದ ಹೊಸ ನಿಯಮ ಜಾರಿಯಾಗಲಿರುವುದರಿಂದ, ಉದ್ಯೋಗದಾತರು, ವಲಸಿಗ ಕಾರ್ಮಿಕರು ಇಬ್ಬರೂ ಈ ನಿಯಮವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಕುವೈತ್ ವಲಸೆ ಇಲಾಖೆ ಸ್ಪಷ್ಟಪಡಿಸಿದೆ. ಭಾರತೀಯ ವೈದ್ಯರು, ಅರೆ ವೈದ್ಯರು ತಮ್ಮ ಪರಿಣತಿ, ಸಹಾಯಕಾರಿ ಗುಣ, ಸಹಾನುಭೂತಿಯ ಮನೋಭಾವಕ್ಕೆ ಹೆಸರುವಾಸಿಯಾಗಿದ್ದಾರೆ. ಕುವೈತ್‌ನಲ್ಲಿ ಸುಮಾರು 1,000 ಭಾರತೀಯ ವೈದ್ಯರು, 500 ಭಾರತೀಯ ದಂತ ವೈದ್ಯರು, ಸುಮಾರು 24,000 ಭಾರತೀಯ ದಾದಿಯರು ಕೆಲಸ ಮಾಡುತ್ತಿದ್ದಾರೆ.

**ಕುವೈತ್‌ನಲ್ಲಿ ಭಾರತೀಯ ಕಾರ್ಮಿಕರು**

**ಕುವೈತ್‌ನ ಒಟ್ಟು ಜನಸಂಖ್ಯೆಯಲ್ಲಿ ಭಾರತೀಯರು ಶೇ. 21 (1 ಮಿಲಿಯನ್), ಅದರ ಕಾರ್ಯಪಡೆಯ ಶೇ. 30 (9 ಲಕ್ಷ) ರಷ್ಟಿದ್ದಾರೆ. ಕುವೈತ್‌ನ ಖಾಸಗಿ ವಲಯ, ದೇಶೀಯ ವಲಯದ ಕಾರ್ಯಪಡೆಯ ಪಟ್ಟಿಯಲ್ಲಿ, ಭಾರತೀಯ ಕಾರ್ಮಿಕರು ಅಗ್ರಸ್ಥಾನದಲ್ಲಿದ್ದಾರೆ. ಕುವೈತ್‌ನಲ್ಲಿ ಕೆಲಸ ಮಾಡುವ ಭಾರತೀಯ ವೃತ್ತಿಪರರಲ್ಲಿ, ವೈದ್ಯಕೀಯ ವಲಯ ಹೆಚ್ಚಿನ ಭಾರತೀಯ ಕಾರ್ಮಿಕರನ್ನು ಹೊಂದಿದೆ.**

**ವಲಸೆ ಕಾರ್ಮಿಕರಿಗೆ ಉದ್ಯೋಗ ನೀಡಿರುವ ಖಾಸಗಿ ಕಂಪನಿಗಳ ರಕ್ಷಣೆಯ ಉದ್ದೇಶವನ್ನೂ ಈ ನಿಯಮ ಹೊಂದಿದೆ ಎಂದು ಹೇಳಲಾಗಿದೆ. ಸರಿಯಾದ ಸೂಚನೆ ಇಲ್ಲದೆ ವಲಸೆ ಕಾರ್ಮಿಕರು ದೇಶ ಬಿಡುವ ಘಟನೆಗಳು ಹೆಚ್ಚಾಗುತ್ತಿದ್ದು, ಇದನ್ನು ತಡೆಗಟ್ಟಲು ಹೊಸ ವ್ಯವಸ್ಥೆಯನ್ನು ವಿನ್ಯಾಸಗೊಳಿಸಲಾಗಿದೆ ಎಂದು ಕುವೈತ್ ಸರ್ಕಾರ ಮಾಹಿತಿ ನೀಡಿದೆ.**

# 11 ವರ್ಷಗಳಲ್ಲಿ ಮೂಲಸೌಕರ್ಯ ಕ್ರಾಂತಿ; ಮೋದಿ



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಮೂಲಸೌಕರ್ಯ ಕ್ರಾಂತಿಯ 11 ವರ್ಷಗಳು ಕಳೆದಿವೆ ಎಂದು ಹೇಳಿದ್ದಾರೆ, ಭಾರತದ ವೇಗವಾಗಿ ವಿಸ್ತರಿಸುತ್ತಿರುವ ಮೂಲ ಸೌಕರ್ಯ ಜಾಲವು ಜೀವನದ ಸುಲಭತೆಯನ್ನು ಹೆಚ್ಚಿಸುತ್ತಿದೆ, ಸಮೃದ್ಧಿಯನ್ನು ಹೆಚ್ಚಿಸುತ್ತಿದೆ ಎಂದು ಪ್ರತಿಪಾದಿಸಿದ್ದಾರೆ. ಇದು 11 ವರ್ಷಗಳ ಮೂಲಸೌಕರ್ಯ ಕ್ರಾಂತಿಯಾಗಿದೆ, ಭಾರತದ ಬೆಳವಣಿಗೆಯ ಪಥವನ್ನು ಹೆಚ್ಚಿಸಿರುವ ಅತ್ಯುತ್ತಮ ಮೂಲಸೌಕರ್ಯಗಳನ್ನು ಸೇರಿಸಲಾಗುತ್ತಿದೆ ಎಂದು ಮೋದಿ ಎಕ್ಸ್‌ನಲ್ಲಿ ಹೇಳಿದ್ದಾರೆ. ರೈಲ್ವೆಗಳಿಂದ ಹೆದ್ದಾರಿಗಳವರೆಗೆ, ಬಂದರುಗಳಿಂದ ವಿಮಾನ ನಿಲ್ದಾಣಗಳವರೆಗೆ, ಭಾರತದ ವೇಗವಾಗಿ ವಿಸ್ತರಿಸುತ್ತಿರುವ ಮೂಲಸೌಕರ್ಯ ಜಾಲವು ಜೀವನದ ಸುಲಭತೆಯನ್ನು ಹೆಚ್ಚಿಸುತ್ತಿದೆ ಸಮೃದ್ಧಿಯನ್ನು ಹೆಚ್ಚಿಸುತ್ತಿದೆ ಎಂದು ಅವರು ಹೇಳಿದರು.

ಕಳೆದ 11 ವರ್ಷಗಳಲ್ಲಿ ನವ ಭಾರತದ ಮೂಲಸೌಕರ್ಯ ಅಭಿವೃದ್ಧಿಯನ್ನು ಎತ್ತಿ ತೋರಿಸುವ ಸರ್ಕಾರದ ನಾಗರಿಕ ತೊಡಗಿಸಿಕೊಳ್ಳುವಿಕೆ ವೇದಿಕೆಯಿಂದ ಮೋದಿ ಒಂದು ಥ್ರೆಡ್ ಅನ್ನು ಹಂಚಿಕೊಂಡಿದ್ದಾರೆ. ಸ್ಮಾರ್ಟ್‌ಸಿಟಿಗಳು. ಸುರಕ್ಷಿತ ರಸ್ತೆಗಳು. ಸುಗಮ ಪ್ರಯಾಣ- ನವಭಾರತದ ಮೂಲಸೌಕರ್ಯ ಭರವಸೆ. ಪ್ರಧಾನಿ ಅವರ ನಾಯಕತ್ವದಲ್ಲಿ ಭಾರತದ ಮೂಲಸೌಕರ್ಯವು ಭವಿಷ್ಯದತ್ತ ಧಾವಿಸುತ್ತಿದೆ ಎಂದು ಪೋಸ್ಟ್ ಮಾಡಲಾಗಿದೆ. ಇದು ಉಕ್ಕು, ಚೈತನ್ಯ, ವಿಲೀನ ಗೊಳ್ಳುವ ಪ್ರಯಾಣ, ಪ್ರತಿ ಮೈಲಿಗಲ್ಲು ಶತಕೋಟಿ ಜನರ ಭರವಸೆಯನ್ನು ಹೊತ್ತಿದೆ. ದೂರವನ್ನು ಕಡಿಮೆ ಮಾಡುವ ಹೆದ್ದಾರಿಗಳು, ಸಮುದಾಯಗಳನ ಒಂದುಗೂಡಿಸುವ ಸೇತುವೆಗಳು, ನಾವೀನ್ಯತೆಯನ್ನು ಹುಟ್ಟುಹಾಕುವ ಡಿಜಿಟಲ್ ನೆಟ್ ವರ್ಕ್‌ಗಳು ಭಾರತವು ಮೂಲಸೌಕರ್ಯಕ್ಕಿಂತ ಹೆಚ್ಚು ನಿರ್ಮಿಸುತ್ತಿದೆ. ಆತ್ಮವಿಶ್ವಾಸ, ಸಂಪರ್ಕ, ಪ್ರತಿಯೊಬ್ಬ ಭಾರತೀಯ ಕನಸಿಗೆ ಸುಂದರವಾದ ಕ್ಯಾನ್ವಾಸ್ ಅನ್ನು ನಿರ್ಮಿಸುತ್ತಿದೆ ಎಂದು ಅದು ಹೇಳಿದೆ.

ಆವೇಗ ಬದಲಾವಣೆಯು ಕೇವಲ ಪ್ರಗತಿಯ ಬಗ್ಗೆ ಅಲ್ಲ ಇದು ಪ್ರತಿಯೊಬ್ಬ ನಾಗರಿಕನನ್ನು ಉನ್ನತೀಕರಿಸುವ, ಭಾರತದ ಭವಿಷ್ಯವನ್ನು ಪರಿವರ್ತಿಸುವ ಭರವಸೆಯ ಬಗ್ಗೆ ಎಂದು ಥ್ರೆಡ್ ಹೈಲೈಟ್ ಮಾಡಿದೆ. ಮತ್ತೊಂದು ಪೋಸ್ಟ್‌ನಲ್ಲಿ, ಮೋದಿ, ಮುಂದಿನ ಪೀಳಿಗೆಯ ಮೂಲ ಸೌಕರ್ಯಕ್ಕಾಗಿ ಭಾರತದ ಪ್ರಚೋದನೆಯು ಸುಸ್ಥಿರತೆ, ದೀರ್ಘಾವಧಿಯ ದೃಷ್ಟಿಕೋನದಿಂದ ನಡೆಸ ಲ್ಪಡುತ್ತದೆ ಎಂದು ಹೇಳಿದರು. ಇದು ಸ್ವಾವಲಂಬಿ ಭಾರತದ ಅಡಿಪಾಯವನ್ನು ಹಾಕುತ್ತಿದೆ ಎಂದರು.

# ಕಡಿಮೆಯಾಗುತ್ತಿದೆ ಅಮೆರಿಕ-ಚೀನಾ ನಡುವಿನ ಸುಂಕ ಸಮರದ ತೀವ್ರತೆ

**ಲಂಡನ್:** ಅಮೆರಿಕ, ಚೀನಾ ನಡುವಿನ ವಾಣಿಜ್ಯ ಮುಖಾಮುಖಿ ಬಿಸಿ ವಾತಾವರಣ ತಣ್ಣಗಾಗುವ ಲಕ್ಷಣ ಗೋಚರವಾಗುತ್ತಿವೆ. ಉಭಯ ರಾಷ್ಟ್ರಗಳ ವಾಣಿಜ್ಯ ಇಲಾಖೆ ಅಧಿಕಾರಿಗಳು, ತಮ್ಮ ವ್ಯಾಪಾರ ಒಪ್ಪಂದವನ್ನು ಮತ್ತೆ ಹಳಿಗೆ ತರಲು ಒಪ್ಪಿಕೊಂಡಿದ್ದಾರೆ. ಚೀನಾ ಮೇಲಿನ ರಫ್ತು ನಿರ್ಬಂಧಗಳನ್ನು ತೆಗೆದುಹಾಕಲು, ಅಮೆರಿಕ ಷರತ್ತುಬದ್ಧ ಒಪ್ಪಂದಕ್ಕೆ ಸೈ ಎಂದಿದೆ. ಲಂಡನ್‌ನಲ್ಲಿ ಎರಡು ದಿನಗಳ ಕಾಲ ನಡೆದ ಅಮೆರಿಕ ಮತ್ತು ಚೀನಾ ವಾಣಿಜ್ಯ ಅಧಿಕಾರಿಗಳ ಸಭೆಯಲ್ಲಿ, ಚೀನಾ ಮೇಲಿನ ರಫ್ತು ನಿರ್ಬಂಧಗಳನ್ನು ತೆಗೆದುಹಾಕಲು ಅಮೆರಿಕ ಷರತ್ತುಬದ್ಧ ಒಪ್ಪಿಗೆ ಸೂಚಿಸಿದೆ.

ಆದರೆ ಈ ಸಭೆ ಉಭಯ ರಾಷ್ಟ್ರಗಳ ನಡುವಿನ ದೀರ್ಘಕಾಲದ ವ್ಯಾಪಾರ ವ್ಯತ್ಯಾಸಗಳಿಗೆ, ಶಾಶ್ವತ ಪರಿಹಾರ ಕಂಡುಹಿಡಿಯುವಲ್ಲಿ ಯಾವುದೇ ಪ್ರಗತಿ ಸಾಧಿಸಿಲ್ಲ. ಈ ಕುರಿತು ಮಾಹಿತಿ ನೀಡಿರುವ ಅಮೆರಿಕದ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್, ಈ ಚೌಕಟ್ಟಿನ ಒಪ್ಪಂದವು ಕಳೆದ ತಿಂಗಳು ಜಿನೀವಾದಲ್ಲಿ ತಲುಪಿದ ಒಪ್ಪಂದದ ಮುಂದುವರೆದ ಭಾಗವಾಗಿದೆ. ಇದು ಮೂರಂಕಿ ಮಟ್ಟವನ್ನು ತಲುಪಿದ್ದ ದ್ವಿಪಕ್ಷೀಯ ಪ್ರತೀಕಾರದ ಸುಂಕಗಳನ್ನು ಕಡಿತಗೊಳಿಸಲು ದಾರಿ ಮಾಡಿಕೊಟ್ಟಿದೆ ಎಂದು ಹೇಳಿದ್ದಾರೆ.



ನಿರ್ಣಾಯಕ ಖನಿಜಗಳ ರಫ್ತಿನ ಮೇಲೆ ಚೀನಾದ ನಿರಂತರ ನಿರ್ಬಂಧಗಳಿಂದ, ಅಮೆರಿಕ, ಚೀನಾ ನಡುವಿನ ಜಿನೀವಾ ಒಪ್ಪಂದವು ವಿಫಲವಾಗಿದೆ. ಇದು ಡೊನಾಲ್ಡ್ ಟ್ರಂಪ್ ಆಡಳಿತವು ಚೀನಾಕ್ಕೆ ಅರೆವಾಹಕ ವಿನ್ಯಾಸ ಸಾಫ್ಟ್‌ವೇರ್, ರಾಸಾಯನಿಕಗಳು ಮತ್ತು ಇತರ ತಂತ್ರಜ್ಞಾನ ಸರಕುಗಳ ಸಾಗಣೆಯನ್ನು ತಡೆಯುವ ತನ್ನದೇ ಆದ ರಫ್ತು ನಿಯಂತ್ರಣಗಳೊಂದಿಗೆ ಪ್ರತಿಕ್ರಿಯಿಸಲು ಪ್ರೇರೇಪಿಸಿದೆ. ಆದರೆ ಲಂಡನ್‌ನಲ್ಲಿ ನಡೆದ ಸಭೆಯು, ಚೀನಾ ಮೇಲಿನ ಕೆಲವು ಯುಎಸ್ ರಫ್ತು ನಿರ್ಬಂಧಗಳನ್ನು ತೆಗೆದುಹಾಕಿದೆ. ಅದೇ ರೀತಿ ಲಂಡನ್‌ನಲ್ಲಿ ನಡೆದ ಪ್ರತ್ಯೇಕ ಪ್ರೆಸ್ ಬ್ರೀಫಿಂಗ್‌ನಲ್ಲಿ, ಚೀನಾದ ಉಪ ವಾಣಿಜ್ಯ ಸಚಿವ ಲಿ ಚೆಂಗ್‌ಗ್ಯಾಂಗ್ ಕೂಡ ಒಂದು ವ್ಯಾಪಾರ ಚೌಕಟ್ಟನ್ನು ತಲುಪಲಾಗಿದೆ ಎಂದು ಹೇಳಿದ್ದಾರೆ. ಅಮೆರಿಕ-ಚೀನಾ ವ್ಯಾಪಾರ ಉದ್ವಿಗ್ನತೆ ಕಡಿಮೆ ಮಾಡುವ ಉದ್ದೇಶದಿಂದ, ಹೆಚ್ಚು ಸಮಗ್ರ ಒಪ್ಪಂದವನ್ನು ಜಾರಿಗೊಳಿಸಲು ಅಮೆರಿಕ, ಚೀನಾ ಅಧಿಕಾರಿಗಳು ನಿರಂತರ ಪ್ರಯತ್ನ ನಡೆಸುತ್ತಿದ್ದಾರೆ. ಆಗಸ್ಟ್ 10ರ ನಂತರ ಅಮೆರಿಕವು ಚೀನಾದ ಸರಕುಗಳ ಮೇಲೆ ಶೇ. 145ರಷ್ಟು ಸುಂಕ ವಿಧಿಸಲಿದೆ. ಇದಕ್ಕೆ ವಿರುದ್ಧವಾಗಿ ಚೀನಾಕೂಡ ಅಮೆರಿಕದ ಸರಕುಗಳ ಮೇಲೆ ಶೇ. 125ರಷ್ಟು ಸುಂಕ ವಿಧಿಸಲಿದೆ. ಇದನ್ನು ತಪ್ಪಿಸುವ ಇರಾದೆಯೊಂದಿಗೆ ಉಭಯ ರಾಷ್ಟ್ರಗಳ ವಾಣಿಜ್ಯ ಅಧಿಕಾರಿಗಳ ನಡುವೆ ಮಾತುಕತೆಗಳು ನಡೆಯುತ್ತಿವೆ.

**ಟ್ರಂಪ್ ಅನುಮೋದನೆ ಅತ್ಯಗತ್ಯ**

**ಜಿನೀವಾ ಒಪ್ಪಂದ, ಅಮೆರಿಕ ಹಾಗೂ ಚೀನಾ ಅಧ್ಯಕ್ಷರ ನಡುವಿನ ದೂರವಾಣಿ ಮಾತುಕತೆ ಬಳಿಕ, ಉಭಯ ರಾಷ್ಟ್ರಗಳ ವಾಣಿಜ್ಯ ಮುಖಾಮುಖಿಯನ್ನು ಕಡಿಮೆ ಮಾಡಲು ನಾವು ಒಂದು ಚೌಕಟ್ಟನ್ನು ತಲುಪಿದ್ದೇವೆ. ಲಂಡನ್ ಸಭೆಯ ವಿವರಗಳನ್ನು ನಾವು ಶೀಘ್ರದಲ್ಲೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ತಲುಪಿಸಲಿದ್ದೇವೆ. ಈ ಒಪ್ಪಂದಕ್ಕೆ ಟ್ರಂಪ್ ಅನುಮೋದನೆ ಅತ್ಯಗತ್ಯ ಎಂದು ಹೊವಾರ್ಡ್ ಲುಟ್ನಿಕ್ ಸ್ಪಷ್ಟಪಡಿಸಿದ್ದಾರೆ.**

# ರಘುವಂಶಿ ಕೊಲೆಗೆ ಪ್ಲಾನ್ ಬಿ ರೆಡಿ ಮಾಡಿಕೊಂಡಿದ್ದ ಸೋನಮ್

**ಇಂದೋರ್:** ಮೊದಲ ಪ್ರಯತ್ನದಲ್ಲಿ ಪತಿಯ ಕೊಲೆ ಪ್ರಯತ್ನ ವಿಫಲವಾದರೆ ಮತ್ತೆ ಆತನನ್ನು ಕೊಲೆ ಮಾಡಿಸಲು ಸೋನಮ್ ಪ್ಲಾನ್ ಬಿ ರೆಡಿ ಮಾಡಿ ಕೊಂಡಿದ್ದಳು ಎಂಬ ಆಘಾತಕಾರಿ ವಿಚಾರ ಪೊಲೀಸರ ತನಿಖೆ ವೇಳೆ ಬಹಿರಂಗಗೊಂಡಿದೆ. ಇಂದೋರ್‌ನ ರಾಜಾ ರಘುವಂಶಿ ಕೊಲೆ ಪ್ರಕರಣದ ನಾಲ್ವರು ಆರೋಪಿಗಳು ವಿಚಾರಣೆಯ ಸಮಯದಲ್ಲಿ ಅನೇಕ ಆಘಾತಕಾರಿ ವಿಷಯಗಳನ್ನು ಬಹಿರಂಗಪಡಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಕುತಂತ್ರಿ ಸೋನಮ್ ರಘುವಂಶಿ ಪತಿಯನ್ನು ಕೊಲ್ಲಲು ಪ್ಲಾನ್ ಬಿಅನ್ನು ಸಹ ಸಿದ್ಧಪಡಿಸಿದ್ದಳು. ಆರೋಪಿಗಳು ಅವನನ್ನು ಕೊಲ್ಲಲು ಸಾಧ್ಯವಾಗದಿದ್ದರೆ, ಸೋನಮ್ ಸೆಲ್ಫಿ ತೆಗೆದು ಕೊಳ್ಳುವ ನೆಪದಲ್ಲಿ ರಾಜ್‌ನನ್ನು ಕಂದಕಕ್ಕೆ ತಳ್ಳಿ ಕೊಲ್ಲಲು ಬಯಸಿದ್ದಳು ಎನ್ನುವ ಆಘಾತಕಾರಿ ವಿಚಾರ ಬಹಿರಂಗಗೊಂಡಿದೆ. ರಾಜ್ ಕುಶ್ವಾಹ ಹವಾಲಾ ವ್ಯವಹಾರದಲ್ಲಿ ಭಾಗಿಯಾಗಿದ್ದ ಎಂದು ಹೇಳಲಾಗುತ್ತಿದೆ. ರಾಜಾ ರಘುವಂಶಿ ಕೊಲೆ ಪ್ರಕರಣದ ಆರೋಪಿಗಳು ತಮ್ಮ ಅಪರಾಧವನ್ನು ಒಪ್ಪಿಕೊಂಡಿದ್ದಾರೆ. ವಿಚಾರಣೆಯ ಸಮಯದಲ್ಲಿ, ಆರೋಪಿಗಳು ರಾಜಾ ರಘುವಂಶಿಯನ್ನು ಕೊಲೆ



ಮಾಡಿರುವುದಾಗಿ ಪೊಲೀಸರಿಗೆ ತಿಳಿಸಿದ್ದಾರೆ.

ರಾಜಾನನ್ನು ಕೊಂದ ನಂತರ, ದೇಹವನ್ನು ಶಿಲ್ಲಾಂಗ್‌ನಲ್ಲಿರುವ ಕಂದಕಕ್ಕೆ ಎಸೆಯಲಾಯಿತು. ಇಂದೋರ್ ಅಪರಾಧ ವಿಭಾಗವು ಆರೋಪಿಯ ತಪ್ಪೊಪ್ಪಿಗೆಯನ್ನು ದೃಢಪಡಿಸಿದೆ. ಆರೋಪಿಗಳನ್ನು ಎರಡು ದಿನಗಳ ಕಾಲ ವಿಚಾರಣೆ ನಡೆಸಲಾಗುತ್ತಿದೆ. ರಾಜಾ ಅವರ ಪತ್ನಿ ಸೋನಮ್ ರಘುವಂಶಿ ಈ ಇಡೀ ಪ್ರಕರಣದ ಸೂತ್ರಧಾರಿ ಎಂದು ಹೇಳಲಾಗುತ್ತಿದೆ. ಶಿಲ್ಲಾಂಗ್ ಪೊಲೀಸರು ಎಲ್ಲಾ ಆರೋಪಿಗಳೊಂದಿಗೆ ದೆಹಲಿಗೆ ತೆರಳಿದ್ದಾರೆ. ಅಲ್ಲಿಂದ ಅವರು ಗುವಾಹಟಿಗೆ ಹೋಗಲಿದ್ದಾರೆ. ನಂತರ ಶಿಲ್ಲಾಂಗ್ ಪೊಲೀಸ್ ತಂಡ ಗುರುವಾರ ಬೆಳಗ್ಗೆ ಅಲ್ಲಿಗೆ ತಲುಪಲಿದೆ.

ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರು ಆರೋಪಿಯನ್ನು ಥಳಿಸಿದರು. ಇದು ಮಾತ್ರವಲ್ಲದೆ, ವಿಮಾನ ನಿಲ್ದಾಣದಲ್ಲಿ ಒಬ್ಬ ಪ್ರಯಾಣಿಕನು ರಾಜ್‌ಗೆ ಕಪಾಳಮೋಕ್ಷ ಮಾಡಿದ್ದಾರೆ ಎಂದು ವರದಿಯಾಗಿದೆ.

**ಯಾರಿಗೂ ಏನೂ ಅನುಮಾನ ಬರದಂತೆ ರಾಜ್ ಇಂದೋರ್‌ನಲ್ಲಿಯೇ ಉಳಿದುಕೊಂಡಿದ್ದ ಎಂದು ಪೊಲೀಸರು ಹೇಳುತ್ತಾರೆ. ಶಿಲ್ಲಾಂಗ್ ಪೊಲೀಸರು ಆರೋಪಿಗಳಿಂದ ಕೆಲವು ತಾಂತ್ರಿಕ ಪುರಾವೆಗಳನ್ನು ಸಹ ಪಡೆದುಕೊಂಡಿದ್ದಾರೆ. ಎಲ್ಲಾ ಆರೋಪಿಗಳನ್ನು ವಿಮಾನದ ಮೂಲಕ ಕರೆದೊಯ್ಯಲಾಯಿತು. ಎಲ್ಲರನ್ನೂ ಇಂದೋರ್ ಅಪರಾಧ ಶಾಖೆಯ ಪೊಲೀಸ್ ಠಾಣೆಯಲ್ಲಿ ಇರಿಸಲಾಗಿದೆ. ಏತನ್ಮಧ್ಯೆ, ಇಂದೋರ್ ವಿಮಾನ ನಿಲ್ದಾಣದಲ್ಲಿ ರಾಜಾ ರಘುವಂಶಿ ಕೊಲೆ ಪ್ರಕರಣದ ಆರೋಪಿಯನ್ನು ನೋಡಿದ ಜನರು ಕೋಪಗೊಂಡರು.**

# ತೀಸ್ತಾ ನದಿಯಲ್ಲಿ ಕೊಚ್ಚಿ ಹೋದ ನವ ದಂಪತಿ

**ಸಿಕ್ಕಿಂ:** ಹನಿಮೂನ್‌ಗೆ ತೆರಳಿದ್ದ ನವವಿವಾಹಿತ ದಂಪತಿ ಸೇರಿ 9 ಮಂದಿ ಇದ್ದ ವಾಹನವು ಸಿಕ್ಕಿಂನ ತೀಸ್ತಾ ನದಿಗೆ ಉರುಳಿದ ಪರಿಣಾಮ ಎಲ್ಲರೂ ನೀರಿನಲ್ಲಿ ಕೊಚ್ಚಿ ಹೋಗಿದ್ದಾರೆ. ಉತ್ತರ ಪ್ರದೇಶದ ಪ್ರತಾಪ್‌ಗಢ ಜಿಲ್ಲೆಯ ನವವಿವಾಹಿತ ದಂಪತಿ ಹನಿಮೂನ್‌ಗೆ ಸಿಕ್ಕಿಂಗೆ ಹೋಗಿದ್ದರು. ಸಿಕ್ಕಿಂನಲ್ಲಿ ಭಾರಿ ಮಳೆಯಾಗುತ್ತಿರುವ ಕಾರಣ ವಾಹನ ನಿಯಂತ್ರಣ ತಪ್ಪಿ ತೀಸ್ತಾ ನದಿಗೆ ಉರುಳಿದೆ. ಇಬ್ಬರನ್ನು ಹುಡುಕಲು ಶೋಧ ಕಾರ್ಯಾಚರಣೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ದಂಪತಿ ಇದ್ದ ವಾಹನ ಲಾಚೆನ್ ನಿಂದ ಲಾಚುಂಗ್ ಗೆ ಹಿಂತಿರುಗುತ್ತಿದ್ದಾಗ ಈ ಘಟನೆ ನಡೆದಿದ್ದು, ದಂಪತಿ ಅವರ ಚಾಲಕ ಸೇರಿದಂತೆ ಒಟ್ಟು ಒಂಬತ್ತು ಜನರು ಇನ್ನೂ ಪತ್ತೆಯಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.


ಕಾಣೆಯಾದ ಕೌಶಲೇಂದ್ರ ಪ್ರತಾಪ್ ಸಿಂಗ್ (29), ಬಿಜೆಪಿ ನಾಯಕ ಉಮ್ಮದ್ ಸಿಂಗ್ ಅವರ ಸೋದರಳಿಯ. ಅವರು ಮೇ 5 ರಂದು ಧಂಗಢ್ ಸರಾಯ್ ಚಿವ್ಲಾಹಾ ಗ್ರಾಮದ ವಿಜಯ್ ಸಿಂಗ್ ಡಬ್ಬು ಅವರ ಪುತ್ರಿ ಅಂಕಿತಾ ಸಿಂಗ್ (26) ಅವರನ್ನು ವಿವಾಹವಾಗಿದ್ದರು. ಕೌಶಲೇಂದ್ರ ಅವರ ಚಿಕ್ಕಪ್ಪ ದಿನೇಶ್ ಸಿಂಗ್ ಅವರ ಪ್ರಕಾರ, ದಂಪತಿ ಮೇ 25 ರಂದು ರೈಲಿನಲ್ಲಿ ಸಿಕ್ಕಿಂಗೆ ಹೊರಟು ಮೇ 26 ರಂದು ಮಂಗನ್ ಜಿಲ್ಲೆಯನ್ನು ತಲುಪಿದ್ದರು. ಮೇ 29 ರಂದು ಲಾಚೆನ್‌ನಿಂದ ಹಿಂತಿರುಗುತ್ತಿದ್ದಾಗ, ಭಾರೀ ಮಳೆಯ ಸಮಯದಲ್ಲಿ ಅವರ ವಾಹನ ನದಿಗೆ ಉರುಳಿದೆ ಎಂದು ವರದಿಯಾಗಿದೆ.



ನವವಿವಾಹಿತರ ಜೊತೆಗೆ, ವಾಹನದಲ್ಲಿ ಇತರ ಏಳು ಪ್ರವಾಸಿಗರಿದ್ದರು, ಇಬ್ಬರು ಉತ್ತರ ಪ್ರದೇಶದವರು, ಇಬ್ಬರು ತ್ರಿಪುರದವರು ಮತ್ತು ನಾಲ್ವರು ಒಡಿಶಾದವರು, ಜೊತೆಗೆ ಚಾಲಕನೂ ಸೇರಿ ಎಲ್ಲರೂ ಕಾಣೆಯಾಗಿದ್ದಾರೆ. ಎಸ್‌ಡಿಆರ್‌ಎಫ್, ಎನ್‌ಡಿಆರ್‌ಎಫ್ ತಂಡಗಳ ನಿರಂತರ ಪ್ರಯತ್ನಗಳ ಹೊರತಾಗಿಯೂ, ಇಲ್ಲಿಯವರೆಗೆ ಯಾವುದೇ ಮೃತದೇಹಗಳು ಬದುಕುಳಿದವರು ಪತ್ತೆಯಾಗಿಲ್ಲ ಎಂದು ದಿನೇಶ್ ಸಿಂಗ್ ಹೇಳಿದ್ದಾರೆ. ಸಿಕ್ಕಿಂಗೆ ಪ್ರಯಾಣ ಬೆಳೆಸಿದ ನಾಪತ್ತೆಯಾದ ದಂಪತಿಯ ಕುಟುಂಬ ಸದಸ್ಯರು ಡಿಐಜಿ ಅಕ್ಷಯ್ ಸಚ್‌ದೇವ್ ಮತ್ತು ಪ್ರದೇಶದ ಎಸ್‌ಪಿ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳನ್ನು ಭೇಟಿ ಮಾಡಿದ್ದಾರೆ ಎಂದು ಅವರು ಹೇಳಿದರು.

# ಟ್ರಂಪ್ ವಲಸೆ ನೀತಿ: ಅಮೆರಿಕ ತೊರೆದ ಜನಪ್ರಿಯ ಟಿಕ್‌ಟಾಕರ್ ಖಾಬಿ ಲೇಮ್

**ಲಾಸ್ ವೇಗಾಸ್:** ಸಾಮಾಜಿಕ ಮಾಧ್ಯಮದಲ್ಲಿ ಲಕ್ಷಾಂತರ ಅಭಿಮಾನಿಗಳನ್ನು ಹೊಂದಿರುವ ಜನಪ್ರಿಯ ಟಿಕ್‌ಟಾಕರ್ ಖಾಬಿ ಲೇಮ್, ಅಕ್ರಮವಾಗಿ ನೆಲೆಸಿದ ಆರೋಪ ಮೇಲೆ ವಲಸೆ ಅಧಿಕಾರಿಗಳಿಂದ ಬಂಧಕ್ಕೊಳಗಾದ ನಂತರ ಅಮೆರಿಕ ತೊರೆದಿದ್ದಾರೆ. ವೀಸಾ ಅವಧಿ ಮುಗಿದ ನಂತರವೂ ಅಕ್ರಮವಾಗಿ ಉಳಿದುಕೊಂಡ



ಆರೋಪದ ಮೇಲೆ ಖಾಬಿ ಅವರನ್ನು ಶುಕ್ರವಾರ ವಲಸೆ ಅಧಿಕಾರಿಗಳು ಬಂಧಿಸಿದ್ದರು. ಗಡೀಪಾರು ಆದೇಶವಿಲ್ಲದೇ ದೇಶ ತೊರೆಯಲು ಅವರಿಗೆ ಅನುಮತಿಸಲಾಗಿದೆ ಎಂದು ಅಮೆರಿಕದ ವಲಸೆ, ಕಸ್ಟಮ್ಸ್ ಜಾರಿ ವಕ್ತಾರರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಆಫ್ರಿಕಾದ ಸೆನೆಗಲ್‌ನಲ್ಲಿ ಜನಿಸಿದ ಖಾಬಿ, ಚಿಕ್ಕವರಿದ್ದಾಗಲೇ ತಮ್ಮ ಪೋಷಕರೊಂದಿಗೆ ಇಟಲಿಗೆ ವಲಸೆ ಬಂದಿದ್ದರು. ಇಟಲಿಯ ಪೌರತ್ವನ್ನೂ ಹೊಂದಿದ್ದಾರೆ. ಕೋವಿಡ್ ಸಮಯದಲ್ಲಿ ತಮ್ಮ ಅಂಗಿಕ ಅಭಿನಯದ ಮೂಲಕವೇ ಸಾಮಾಜಿಕ ಜಾಲತಾಣದಲ್ಲಿ ಜನಪ್ರಿಯತೆ ಪಡೆದಿದ್ದ ಅವರು, ಟಿಕ್‌ಟಾಕ್‌ನಲ್ಲಿ ಸುಮಾರು 162 ಮಿಲಿಯನ್ ಹಿಂಬಾಕರನ್ನು ಹೊಂದಿದ್ದಾರೆ. 2022ರಲ್ಲಿ 'ಹೂಗೋ ಬಾಸ್' ಬ್ರಾಂಡ್ ಜೊತೆ ಪಾಲುದಾರಿಕೆ ಒಪ್ಪಂದಕ್ಕೆ ಸಹಿ ಮಾಡಿದ್ದ ಖಾಬಿ, ಯುನಿಸೆಫ್‌ನ ಸೌಹಾರ್ದ ರಾಯಭಾರಿಯಾಗಿ ನೇಮಕಗೊಂಡಿದ್ದರು. ಕಳೆದ ತಿಂಗಳು ನ್ಯೂಯಾರ್ಕ್‌ನಲ್ಲಿ ನಡೆದ 'ಮೆಟ್ ಗಾಲಾ' ಕಾರ್ಯಕ್ರಮದಲ್ಲಿಯೂ ಭಾಗವಹಿಸಿದ್ದರು.

# ಕಾಲ್ತುಳಿತದಂತಹ ಅನಾಹುತ ತಪ್ಪಿಸಲು ಎಐ ಮೊರೆ ಹೋದ ಗುಜರಾತ್

**ಅಹಮದಾಬಾದ್:** ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಸಂಭವಿಸಿದ ಕಾಲ್ತುಳಿತದಲ್ಲಿ 11 ಮಂದಿ ಅಮಾಯಕ ಜೀವಗಳು ಬಲಿಯಾದ ಪ್ರಕರಣ ಇನ್ನು ಹಸಿಯಾಗಿರುವಾಗಲೇ ಜನದಟ್ಟಣೆ ಸಂದರ್ಭದಲ್ಲಿ ಸಂಭವಿಸಬಹುದಾದ ಅನಾಹುತಗಳನ್ನು ತಪ್ಪಿಸಲು ಗುಜರಾತ್ ಕೃತಕ ಬುದ್ಧಿಮತ್ತೆಯ ಮೊರೆಹೋಗಿದೆ. ಜೂ. 27 ರಂದು ಅಹಮದಾಬಾದ್‌ನಲ್ಲಿ ನಡೆಯಲಿರುವ ಮುಖ್ಯ ರಥಯಾತ್ರೆ ಮೆರವಣಿಗೆಯಲ್ಲಿ ಕಾಲ್ತುಳಿತದಂತಹ ಪರಿಸ್ಥಿತಿಯನ್ನು ತಡೆಗಟ್ಟಲು ಗುಜರಾತ್ ಪೊಲೀಸರು ಡ್ರೋನ್‌ಗಳೊಂದಿಗೆ ಕೃತಕ ಬುದ್ಧಿಮತ್ತೆ ಆಧಾರಿತ ಕಣ್ಗಾವಲು ವ್ಯವಸ್ಥೆಯನ್ನು ನಿಯೋಜಿಸಲಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಈ ಕಾರ್ಯಕ್ರಮಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ನಿರೀಕ್ಷೆಯಿರುವುದರಿಂದ ಈ ಕ್ರಮ ಕೈಗೊಳ್ಳಲಾಗಿದೆ. ಬೆಂಗಳೂರಿನಲ್ಲಿ ನಡೆದ ಘಟನೆ ಸೇರಿದಂತೆ ಸಾಮೂಹಿಕ ಸಭೆಗಳನ್ನು ಒಳಗೊಂಡ ಘಟನೆಗಳಿಂದ ಗಮನದಲ್ಲಿಟ್ಟುಕೊಂಡು, ಅಹಮದಾಬಾದ್ ಅಪರಾಧ ವಿಭಾಗವು -ಚಾಲಿತ ದೃಶ್ಯ ವಿಶ್ಲೇಷಣಾ ಸಾಫ್ಟ್‌ವೇರ ಅನ್ನು ನಿಯೋಜಿಸಲಿದೆ, ಇದು ಜನಸಂದಣಿಯ ಮಾದರಿಗಳ ಬಗ್ಗೆ ಪೊಲೀಸರಿಗೆ ಮುಂಚಿತವಾಗಿ ಎಚ್ಚರಿಕೆ ನೀಡುತ್ತದೆ ಎಂದು ಸಹಾಯಕ ಪೊಲೀಸ್ ಆಯುಕ್ತ




ಭರತ್ ಪಟೇಲ್ ತಿಳಿಸಿದ್ದಾರೆ. ಜೂನ್ 4 ರಂದು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಮುಂದೆ ಆರ್‌ಸಿಬಿ ತಂಡದ ಐಪಿಎಲ್ ವಿಜಯೋತ್ಸವದಲ್ಲಿ ಭಾಗವಹಿಸಲು ಹೆಚ್ಚಿನ ಸಂಖ್ಯೆಯ ಜನರು ಸೇರಿದ್ದ ಕಾಲ್ತುಳಿತದ ನಂತರ ಹನ್ನೊಂದು ಜನರು ಸಾವನ್ನಪ್ಪಿದರು, 56 ಜನರು ಗಾಯಗೊಂಡಿದ್ದರು.

ಪೊಲೀಸರ ಪ್ರಕಾರ, ಜೂನ್ 27 ರಂದು ನಡೆಯಲಿರುವ ಅದ್ದೂರಿ ಕಾರ್ಯಕ್ರಮದಲ್ಲಿ 14 ರಿಂದ 15 ಲಕ್ಷ ಜನರು ಭಾಗವಹಿಸುವ ನಿರೀಕ್ಷೆಯಿದೆ. ವ್ಯವಸ್ಥೆಯಡಿಯಲ್ಲಿ, ಪೊಲೀಸ್ ನಿಯಂತ್ರಣ ಕೊಠಡಿಯಲ್ಲಿರುವ ದೃಶ್ಯ ವಿಶ್ಲೇಷಣಾ ಸಾಫ್ಟ್‌ವೇರ್, ಯಾತ್ರೆಯ ಮಾರ್ಗದಲ್ಲಿ ನಿಯೋಜಿಸಲಾದ ಸಿಸಿಟಿವಿ ಕ್ಯಾಮೆರಾಗಳು ಮತ್ತು ಡ್ರೋನ್‌ಗಳಿಂದ ಲೈವ್ ವೀಡಿಯೋ ಫೀಡ್‌ಗಳನ್ನು ಸ್ವೀಕರಿಸುತ್ತದೆ ಎಂದು ಪಟೇಲ್ ಹೇಳಿದರು.

ಆ ನಿರ್ದಿಷ್ಟ ಸ್ಥಳದಲ್ಲಿ ಎಷ್ಟು ಜನರು ಇದ್ದಾರೆ ಮತ್ತು ಕಡಿಮೆ ಅವಧಿಯಲ್ಲಿ ಎಷ್ಟು ಜನರು ಆಗಮಿಸುತ್ತಾರೆ ಎಂಬುದನ್ನು ಅಂದಾಜು ಮಾಡಲು ಲೈವ್ ಫೀಡ್ ಅನ್ನು ವಿಶ್ಲೇಷಿಸಲು ಸಾಫ್ಟ್‌ವೇರ್ ಅನ್ನು ಪ್ರೋಗ್ರಾಮ್ ಮಾಡಲಾಗಿದೆ ಎಂದು ಅವರು ಹೇಳಿದರು. ಸಾಫ್ಟ್‌ವೇರ್ ತಲೆಗಳನ್ನು ಎಣಿಸುತ್ತದೆ, ಆ ಸ್ಥಳದ ಗರಿಷ್ಠ ಸಾಮರ್ಥ್ಯವನ್ನು ಲೆಕ್ಕಹಾಕುತ್ತದೆ, ಆ ಸ್ಥಳದಲ್ಲಿ ಭವಿಷ್ಯದ ಒಳಹರಿವಿನ ಬಗ್ಗೆ ಪೊಲೀಸರನ್ನು ಎಚ್ಚರಿಸುತ್ತದೆ.

**ಕೆಲವು ರಾಜ್ಯಗಳಲ್ಲಿ ಸಂಭವಿಸಿದ ಕಾಲ್ತುಳಿತಗಳನ್ನು ಗಮನದಲ್ಲಿಟ್ಟುಕೊಂಡು, ದೃಶ್ಯ ದತ್ತಾಂಶದ ನೈಜ-ಸಮಯದ ಸಂಸ್ಕರಣೆಯ ಮೂಲಕ ರಥಯಾತ್ರೆಯ ಸಮಯದಲ್ಲಿ ಜನಸಂದಣಿಯನ್ನು ಮೇಲ್ವಿಚಾರಣೆ ಮಾಡಲು ಮತ್ತು ನಿರ್ವಹಿಸಲು -ಚಾಲಿತ ಸಾಫ್ಟ್‌ವೇರ್ ಅನ್ನು ಬಳಸಲು ನಾವು ನಿರ್ಧರಿಸಿದ್ದೇವೆ – ಪಟೇಲ್**

**ಅಕ್ರಮ ವಲಸಿಗರನ್ನು ಪತ್ತೆಹಚ್ಚುವ ಕಾರ್ಯಾಚರಣೆಗೆ ವಿರೋಧ**

**ಲಾಸ್ ಏಂಜಲೀಸ್‌ನಲ್ಲಿ ಪ್ರತಿಭಟನೆ, ಹಿಂಸಾಚಾರ ಮುಂದುವರಿಕೆ**

# ಶಾಂತಿಗಾಗಿ ಕರ್ಫ್ಯೂ ಜಾರಿ, ಶೀಘ್ರವೇ ಸ್ವತಂತ್ರಗೊಳಿಸಲಾಗುತ್ತದೆ: ಟ್ರಂಪ್

**ಲಾಸ್ ಏಂಜಲಿಸ್:** ಅಕ್ರಮ ವಲಸಿಗರನ್ನು ಪತ್ತೆಹಚ್ಚುವ ಕಾರ್ಯಾಚರಣೆಯಲ್ಲಿ ತೊಡಗಿದ್ದ ಫೆಡರಲ್ ಸಿಬ್ಬಂದಿಗಳನ್ನು ವಿರೋಧಿಸಿ ಅಮೆರಿಕದ ಅಮೆರಿಕದ ಎರಡನೇ ಅತಿದೊಡ್ಡ ನಗರದಲ್ಲಿ ನಡೆಯುತ್ತಿದ್ದ ಪ್ರತಿಬಟನೆ ಮುಂದುವರೆದಿದೆ. ಹೀಗಾಗಿ ಕರ್ಫ್ಯೂ ವಿಧಿಸಲಾಗಿದೆ. ಈ ಬಗ್ಗೆ ಮಾತನಾಡಿದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಕ್ಯಾಲಿಫೋರ್ನಿಯಾದಲ್ಲಿ ನೀವು ನೋಡುತ್ತಿರುವುದು ಶಾಂತಿ, ಸಾರ್ವಜನಿಕ ಸುವ್ಯವಸ್ಥೆ ಮತ್ತು ರಾಷ್ಟ್ರೀಯ ಸಾರ್ವಭೌಮತ್ವದ ಮೇಲೆ ವಿದೇಶಿ ಧ್ವಜಗಳನ್ನು ಹೊಂದಿರುವ ಗಲಭೆಕೋರರು ನಡೆಸುವ ಸಂಪೂರ್ಣ ದಾಳಿಯಾಗಿದೆ. ಲಾಸ್ ಏಂಜಲಿಸ್ ಅನ್ನು ಶೀಘ್ರವೇ ಸ್ವತಂತ್ರಗೊಳಿಸಲಾಗುತ್ತದೆ ಎಂದು ಭರವಸೆ ನೀಡಿದರು.

**ಹಿಂಸಾಚಾರ ತಡೆಯಲು ಕರ್ಫ್ಯೂ ಅಗತ್ಯ:** ಲಾಸ್ ಏಂಜಲೀಸ್‌ನ ನಿವಾಸಿಗಳು, ನಿರ್ಗತಿಕರು, ಮಾಧ್ಯಮದವರು ಮತ್ತು ತುರ್ತು ಸೇವೆಗಳ ಸಿಬ್ಬಂದಿಗೆ ಈ ಕರ್ಫ್ಯೂ ಅನ್ವಯಿಸುವುದಿಲ್ಲ. ಕರ್ಫ್ಯೂ ಉಲ್ಲಂಘಿಸುವವರನ್ನು ಬಂಧಿಸಲಾಗುವುದು. ಅಶಾಂತಿ, ಹಿಂಸಾಚಾರ ತಡೆಯಲು ಕರ್ಫ್ಯೂ ಅಗತ್ಯ ಎಂದು ಪೊಲೀಸ್ ಮುಖ್ಯಸ್ಥ ಜಿಮ್ ಮೆಕ್‌ಡೊನೆಲ್ ತಿಳಿಸಿದರು. ಟ್ರಂಪ್ ಆಡಳಿತವು ಅಕ್ರಮ ವಲಸಿಗರನ್ನು ಪತ್ತೆ



ವ್ಯಾಪಕ ಪ್ರತಿಭಟನೆ ಶುರು

ಹಚ್ಚುವ ಕಾರ್ಯ ಪ್ರಾರಂಭಿಸಿದ ನಂತರ ಲಾಸ್ ಏಂಜಲೀಸ್‌ನಲ್ಲಿ ವ್ಯಾಪಕ ಪ್ರತಿಭಟನೆಗಳು ಶುರುವಾಗಿವೆ. ಮೆಕ್ಸಿಕೋ, ಇತರ ದೇಶಗಳ ಧ್ವಜಗಳನ್ನು ಹಿಡಿದ ಪ್ರತಿಭಟನಾಕಾರರು ಬಂಧಿತ ವಲಸಿಗರಿಗೆ ಬೆಂಬಲ ಸೂಚಿಸಿದ್ದಾರೆ. ಲಾಸ್ ಏಂಜಲೀಸ್ ಪೊಲೀಸ್ ಇಲಾಖೆ ಪ್ರಕಾರ, 96 ಜನರನ್ನು ಬಂಧಿಸಲಾಗಿದೆ. ನ್ಯೂಯಾರ್ಕ್ ನಲ್ಲಿಯೂ ಇಮಿಗ್ರೇಷನ್ ದಾಳಿಗಳ ವಿರುದ್ಧ ಪ್ರತಿಭಟನೆಗಳು ನಡೆದವು.

**ಕ್ಯಾಲಿಫೋರ್ನಿಯಾ ನಾಯಕರ ಪ್ರತಿಕ್ರಿಯೆ:** ಟ್ರಂಪ್ ಅವರ ಕ್ರಮವನ್ನು ತೀವ್ರವಾಗಿ ಕ್ಯಾಲಿಫೋರ್ನಿಯಾದ ಗವರ್ನರ್ ಗೇವಿನ್ ನ್ಯೂಸಮ್ ಟೀಕಿಸಿದ್ದಾರೆ. ಮುಸುಕುಧಾರಿ ಕಳ್ಳರು ಆಪಲ್ ಮಳಿಗೆಗೆ ನುಗ್ಗಿ, ಗ್ಯಾಡ್ಜೆಟ್‌ಗಳನ್ನು ದೋಚಿದ್ದಾರೆ. ಪ್ರತಿಭಟನೆ, ಹಿಂಸಾಚಾರ ಹಿನ್ನೆಲೆಯಲ್ಲಿ ಟ್ರಂಪ್ ನಗರದಲ್ಲಿ ನ್ಯಾಷನಲ್ ಗಾರ್ಡ್ ಪಡೆಗಳನ್ನು ನಿಯೋಜಿಸಿದ್ದಾರೆ. ಅಧ್ಯಕ್ಷರ ಈ ನಡೆಗೆ ಸ್ಥಳೀಯ ಅಧಿಕಾರಿಗಳು, ಗವರ್ನರ್ ಗ್ಯಾವಿನ್ ನ್ಯೂಸಮ್ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಟ್ರಂಪ್, ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ ಸೆತ್ ಅವರು ಯುಎಸ್ ಸಂವಿಧಾನವನ್ನು ಉಲ್ಲಂಘಿಸಿದ್ದಾರೆ. ಸೈನಿಕರನ್ನು ಪೊಲೀಸ್ ಪಡೆಯಾಗಿ ಬಳಸುವುದನ್ನು ತಡೆಯಲು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾರೆ.

**ಬಂಧನಗಳ ಸಂಖ್ಯೆಯಲ್ಲಿ ಏರಿಕೆ:** ನ್ಯೂಯಾರ್ಕ್ ಪೊಲೀಸರು ಪ್ರತಿಭಟನಾಕಾರರನ್ನು ಬಂಧಿಸುತ್ತಿದ್ದಾರೆ, ಪ್ರತಿಭಟನಾಕಾರರು ಕಾಲುದಾರಿಗೆ ಹೋಗಬೇಕೆಂದು ಪೊಲೀಸರು ಸೂಚನೆ ನೀಡಿದ್ದಾರೆ. ಶನಿವಾರ 27 ಜನರನ್ನು ಬಂಧಿಸಲಾಯಿತು. ಭಾನುವಾರ 40, ಸೋಮವಾರ 114, ಮಂಗಳವಾರ 197 ಜನರನ್ನು ಬಂಧಿಸಲಾಗಿದೆ. ನಗರದಲ್ಲಿ ಅಶಾಂತಿ ಹೆಚ್ಚುತ್ತಿದೆ. ಕಾನೂನುಬಾಹಿರ ಮತ್ತು ಅಪಾಯಕಾರಿ ನಡವಳಿಕೆಗಳು ಕಂಡುಬರುತ್ತಿವೆ ಎಂದು ಮೆಕ್ ಡೊನೆಲ್ ಹೇಳಿದ್ದಾರೆ.

**ದಾಳಿಗಳ ವಿರುದ್ಧ ಪ್ರತಿಭಟನೆ**

**ಅಕ್ರಮ ವಲಸಿಗರನ್ನು ಪತ್ತೆಹಚ್ಚುವ ಕಾರ್ಯಾಚರಣೆ ವಿರೋಧಿಸಿ ಅಮೆರಿಕದ ಲಾಸ್ ಏಂಜಲಿಸ್‌ನಲ್ಲಿ ಪ್ರತಿಭಟನೆಗಳು ನಡೆದವು. ಪ್ರತಿಭಟನೆ ಹಿಂಸಾತ್ಮಕ ಸ್ವರೂಪ ಪಡೆದಿದ್ದರಿಂದ ನಗರದಲ್ಲಿ ಕರ್ಫ್ಯೂ ವಿಧಿಸಲಾಗಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಲಾಸ್ ಏಂಜಲಿಸ್ ಅನ್ನು ಶೀಘ್ರವೇ ಸ್ವತಂತ್ರಗೊಳಿಸುವುದಾಗಿ ಭರವಸೆ ನೀಡಿದರು. ಗವರ್ನರ್ ಗೇವಿನ್ ನ್ಯೂಸಮ್ ಟ್ರಂಪ್ ಅವರ ಕ್ರಮವನ್ನು ಟೀಕಿಸಿದ್ದಾರೆ. ನ್ಯೂಯಾರ್ಕ್‌ನಲ್ಲಿಯೂ ಸಹ ಇಮಿಗ್ರೇಷನ್ ದಾಳಿಗಳ ವಿರುದ್ಧ ಪ್ರತಿಭಟನೆಗಳು ನಡೆದಿವೆ. ಈ ಹಿನ್ನೆಲೆಯಲ್ಲಿ ಹಲವರನ್ನು ಬಂಧಿಸಲಾಗಿದೆ.**

**ಲಾಸ್ ಏಂಜಲೀಸ್‌ನಲ್ಲಿ ಕರ್ಫ್ಯೂ ಜಾರಿ**

**ಪ್ರತಿಭಟನೆ ಹಿಂಸಾಚಾರ ಹೆಚ್ಚಾದ ಕಾರಣ, ನಗರದಲ್ಲಿ ಕರ್ಫ್ಯೂ ಜಾರಿ ಮಾಡಲಾಗಿದೆ. ರಾತ್ರಿ 8 ಗಂಟೆಯಿಂದ ಬೆಳಿಗ್ಗೆ 6 ಗಂಟೆಯವರೆಗೆ ಈ ಕರ್ಫ್ಯೂ ಇರುತ್ತದೆ. ಇದು ಕೆಲವು ದಿನಗಳವರೆಗೆ ಮುಂದುವರಿಯುವ ಸಾಧ್ಯತೆ ಹೆಚ್ಚಿದೆ**
**– ಕರೆನ್ ಬಾಸ್, ಲಾಸ್ ಏಂಜಲಿಸ್ ಮೇಯರ್**

## ಮಿನಿ ನ್ಯೂಸ್

### ಪ್ರಧಾನಿ ಮೋದಿ ಭೇಟಿಗೂ ಮುನ್ನ ಕೋವಿಡ್ ಪರೀಕ್ಷೆ ಕಡ್ಡಾಯ

**ನವದೆಹಲಿ:** ಇನ್ನು ಮುಂದೆ ಪ್ರಧಾನಿ ನರೇಂದ್ರಮೋದಿ ಭೇಟಿಮಾಡುವ ಸಚಿವರು ಕಡ್ಡಯವಾಗಿ ಆರ್‌ಟಿ-ಪಿಸಿಆರ್ ಪರೀಕ್ಷೆಗೆ ಒಳಗಾಗಬೇಕು. ಏಕೆಂದರೆ ದೇಶದಲ್ಲಿ ದಿನದಿಂದ ದಿನಕ್ಕೆ ಕೋವಿಡ್ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಮುನ್ನಚ್ಚರಿಕೆಯ ಕ್ರಮವಾಗಿ ಪ್ರಧಾನಿ ಮೋದಿಯವರನ್ನು ಭೇಟಿಯಾಗುವ ಸಚಿವರಿಗೆ ಆರ್ಟಿ-ಪಿಸಿಆರ್ ಪರೀಕ್ಷೆಯನ್ನು ಕಡ್ಡಾಯಗೊಳಿಸಲಾಗಿದೆ. ದೇಶದಲ್ಲಿ ಸಕ್ರಿಯ ಕೋವಿಡ್ -19 ಪ್ರಕರಣಗಳು 7,000 ದಾಟಿವೆ. ಕೇಂದ್ರ ಆರೋಗ್ಯ ಸಚಿವಾಲಯ ಇಂದು ಬಿಡುಗಡೆ ಮಾಡಿದ ಅಧಿಕೃತ ಹೇಳಿಕೆಯ ಪ್ರಕಾರ, ಕಳೆದ 24 ಗಂಟೆಗಳಲ್ಲಿ ದೇಶವು 306 ಹೊಸ ಪ್ರಕರಣಗಳು, ಆರು ಸಾವುಗಳಿಗೆ ಸಾಕ್ಷಿಯಾಗಿದೆ. ಕೇರಳದಲ್ಲಿ ಮೂರು ಸಾವುಗಳು ದಾಖಲಾಗಿದ್ದರೆ, ಮಹಾರಾಷ್ಟ್ರ (1), ಕರ್ನಾಟಕ (2) ಒಂದೇ ಅವಧಿಯಲ್ಲಿ ಉಳಿದ ಸಾವುಗಳನ್ನು ವರದಿ ಮಾಡಿದ ಏಕೈಕ ರಾಜ್ಯಗಳಾಗಿವೆ. ಕೇರಳದಲ್ಲಿ ಒಂದೇ ದಿನದಲ್ಲಿ ಹೆಚ್ಚು ಸೋಂಕು ಪ್ರಕರಣಗಳು ದಾಖಲಾಗಿದ್ದು, 170 ಹೊಸ ಪ್ರಕರಣಗಳು ವರದಿಯಾಗಿವೆ. ಏತನಧ್ಯೆ, ಗುಜರಾತ್‌ನಲ್ಲಿ 114 ಹೊಸ ಸೋಂಕುಗಳು ಮತ್ತು 1,223 ಸಕ್ರಿಯ ಪ್ರಕರಣಗಳು ದಾಖಲಾಗಿವೆ, ನಂತರದ ಸ್ಥಾನದಲ್ಲಿ ಕರ್ನಾಟಕವಿದೆ. ಕಳೆದ 24 ಗಂಟೆಗಳಲ್ಲಿ ದೆಹಲಿಯಲ್ಲಿ 66 ಹೊಸ ಪ್ರಕರಣಗಳು ದಾಖಲಾಗಿದ್ದು, ನಗರದ ಒಟ್ಟು ಪ್ರಕರಣಗಳ ಸಂಖ್ಯೆ 757 ಕ್ಕೆ ತಲುಪಿದೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ.

### ಜನಾರ್ಧನ ರೆಡ್ಡಿಗೆ ಬಿಗ್ ರಿಲೀಫ್ ಕೊಟ್ಟ ಹೈಕೋರ್ಟ್

**ಹೈದರಾಬಾದ್:** ಅಕ್ರಮ ಗಣಿಗಾರಿಕೆಯಲ್ಲಿ ಮಾಜಿ ಸಚಿವ ಗಾಲಿ ಜನಾರ್ಧನ ರೆಡ್ಡಿಗೆ ತೆಲಂಗಾಣ ಹೈಕೋರ್ಟ್ ಹಲವು ಷರತ್ತುಗಳನ್ನು ವಿಧಿಸಿ ಜಾಮೀನು ನೀಡಿದೆ. ಸಿಬಿಐ ನ್ಯಾಯಾಲಯ ವಿಧಿಸಿದ್ದ ಏಳು ವರ್ಷ ಜೈಲು ಶಿಕ್ಷೆಗೆ ಗುರಿಯಾಗಿದ್ದ ಜನಾರ್ಧನ ರೆಡ್ಡಿ ಅವರು ಸಿಬಿಐ ನ್ಯಾಯಾಲಯದ ಆದೇಶ ಪ್ರಶ್ನಿಸಿ ತೆಲಂಗಾಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಮೂರ್ತಿಗಳು ಶಿಕ್ಷೆಗೆ ತಡೆಯಾಜ್ಞೆ ನೀಡಿ ಹತ್ತು ಲಕ್ಷ ರೂ. 2 ಶೂರಿಟಿ, ಪಾಸ್‌ಪೋರ್ಟ್ ನೀಡುವುದೂ ಸೇರಿದಂತೆ ಕೆಲವು ಷರತ್ತುಗಳನ್ನು ವಿಧಿಸಿ ಜಾಮೀನು ಮಂಜೂರು ಮಾಡಿದ್ದಾರೆ. ಜನಾರ್ಧನ ರೆಡ್ಡಿಯವರು ದೇಶ ಬಿಟ್ಟು ಹೋಗದಂತೆ ತೆಲಂಗಾಣ ಹೈಕೋರ್ಟ್ ಆದೇಶ ನೀಡಲಾಗಿದೆ. ಶಾಸಕ ಸ್ಥಾನವನ್ನು ಕಳೆದುಕೊಂಡಿದ್ದ ಜನಾರ್ಧನ ರೆಡ್ಡಿಯವರಿಗೆ ಈ ಆದೇಶದಿಂದ ನಿರಾಳರಾಗಿದ್ದು, ಸಧ್ಯದಲ್ಲೇ ಜೈಲಿನಿಂದ ಹೊರ ಬರಲಿದ್ದಾರೆ. ಪ್ರಕರಣದಲ್ಲಿ ಇನ್ನೂ ಹಲವರು ಶಿಕ್ಷೆಗೆ ಗುರಿಯಾಗಿದ್ದು ಅವರ ಅರ್ಜಿಯ ವಿಚಾರಣೆ ಸದ್ಯದಲ್ಲೇ ನಡೆಯಲಿದೆ.

### ನೀವಾಗಿಯೇ ದೇಶ ತೊರೆಯಿರಿ ಅಕ್ರಮ ವಲಸಿಗರಿಗೆ ಪಾಕ್ ಎಚ್ಚರಿಕೆ

**ಪೇಶಾವರ:** ದೇಶದಲ್ಲಿರುವ ಅಫ್ಘಾನಿಸ್ತಾನ ನಿರಾಶ್ರಿತರು, ಅಕ್ರಮವಾಗಿ ನೆಲೆಸಿರುವ ವಿದೇಶಿಯರಿಗೆ ತಾವಾಗಿಯೇ ದೇಶ ತೊರೆಯುವಂತೆ ಪಾಕಿಸ್ತಾನ ಎಚ್ಚರಿಕೆ ನೀಡಿದೆ. ತಮ್ಮ ದೇಶಗಳಿಗೆ ತೆರಳುತ್ತಿರುವವರಿಗೆ ಗೌರವಯುತ ಸತ್ಕಾರ ಖಾತ್ರಿಪಡಿಸಲಾಗುತ್ತಿದೆ ಎಂಬುದಾ ಆಂತರಿಕ ಸಚಿವಾಲಯ ಹೇಳಿಕೆ ಬಿಡುಗಡೆ ಮಾಡಿದೆ. ಮುಖ್ಯವಾಗಿ ಮಹಿಳೆಯರು, ಮಕ್ಕಳು, ವಯಸ್ಸಾದವರಿಗೆ ವೈದ್ಯಕೀಯ, ಆಹಾರ ಸೌಲಭ್ಯಗಳನ್ನು ವಿಶೇಷವಾಗಿ ಕಲ್ಪಿಸಲಾಗುವುದು ಎಂದೂ ಅದರಲ್ಲಿ ಉಲ್ಲೇಖಿಸಿದೆ. ಅಕ್ರಮವಾಗಿ ನೆಲೆಸಿರುವ ಎಲ್ಲಾ ವಿದೇಶಿಯರು, ಅಫ್ಗನ್ ನಾಗರಿಕ ಕಾರ್ಡ್ ಹೊಂದಿರುವವರು ಮಾ. 31ರೊಳಗೆ ಪಾಕಿಸ್ತಾನ ತೊರೆಯಬೇಕು.

ಇಲ್ಲದಿದ್ದರೆ ಏ. 1ರಂದು ಗಡೀಪಾರು ಆರಂಭಿಸಲಾಗುವುದು ಎಂದು ಸಚಿವಾಲಯವು ಈ ವರ್ಷದ ಆರಂಭದಲ್ಲೇ ಎಚ್ಚರಿಸಿತ್ತು. ಎಸಿಸಿ ಎಂಬುದು ಅಫ್ಘಾನ್ ನಿರಾಶ್ರಿತರಿಗೆ ತಾತ್ಕಾಲಿಕ ಕಾನೂನು ಸ್ಥಾನಮಾನ ಕಲ್ಪಿಸುವ ಸಲುವಾಗಿ 2017ರಲ್ಲಿ ಆರಂಭಿಸಲಾದ ತಾತ್ಕಾಲಿಕ ದಾಖಲೆಯಾಗಿದೆ. ಸದ್ಯ ದೇಶದ ಎಲ್ಲಾ ಭಾಗಗಳಲ್ಲೂ ಅಫ್ಘಾನ್ ನಾಗರಿಕರನ್ನು ಗಡೀಪಾರು ಮಾಡುವ ಕಾರ್ಯವನ್ನು ಅಧಿಕಾರಿಗಳು ಆರಂಭಿಸಿದ್ದಾರೆ. ಅಕ್ರಮ ವಿದೇಶಿಯರ ವಾಪಸಾತಿ ಕಾರ್ಯಕ್ರಮ 2025ರ ಏಪ್ರಿಲ್ 1ರಂದು ಆರಂಭವಾದಾಗಿನಿಂದ ಈವರೆಗೆ ಒಟ್ಟು 11.02 ಲಕ್ಷ ವಿದೇಶಿಯರನ್ನು ಹೊರಹಾಕಲಾಗಿದೆ ಎಂದು ಸಚಿವಾಲಯದ ಹೇಳಿಕೆಯಿಂದ ತಿಳಿದುಬಂದಿದೆ. ಅಕ್ರಮ ವಿದೇಶಿಯರಿಗೆ ಉದ್ಯೋಗ ನೀಡುವುದು, ಮನೆಗಳಲ್ಲಿ ಅಥವಾ ಹೋಟೆಲ್‌ಗಳಲ್ಲಿ ಬಾಡಿಗೆಗೆ ವಸತಿ ಒದಗಿಸುವವರು, ಅವರೊಂದಿಗೆ ವ್ಯವಹಾರ ನಡೆಸುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದೂ ಎಚ್ಚರಿಸಲಾಗಿದೆ. ಅಂದಾಜು 30 ಲಕ್ಷ ಅಫ್ಗನ್ ನಿರಾಶ್ರಿತರು ಪಾಕಿಸ್ತಾನದಲ್ಲಿ ನೆಲೆಸಿದ್ದಾರೆ. ಅವರಲ್ಲಿ ಸುಮಾರು 8.13 ಲಕ್ಷ ಮಂದಿ ಎಸಿಸಿ ಕಾರ್ಡ್‌ಗಳನ್ನು ಹೊಂದಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ. 2023ರ ನವೆಂಬರ್ ಬಳಿಕ ಸುಮಾರು 13 ಲಕ್ಷ ಅಫ್ಗನ್ ನಿರಾಶ್ರಿತರನ್ನು ಪಾಕ್ ಹೊರಗಟ್ಟಿದೆ ಎನ್ನಲಾಗಿದೆ.

### ಭಾರತೀಯ ಯುವಕನಿಗೆ ಕೈಕೋಳ ಅಮೆರಿಕದ ವಿವರಣೆ ಕೇಳಿದ ಭಾರತ

**ನವದೆಹಲಿ:** ಅಮೆರಿಕದ ನ್ಯೂವಾರ್ಕ್ ವಿಮಾನ ನಿಲ್ದಾಣದಲ್ಲಿ ಭಾರತೀಯ ಯುವಕನಿಗೆ ಕೈಕೋಳ ಹಾಕಿ ನೆಲದ ಮೇಲೆ ಉರುಳಿಸಿ ಅಪರಾಧಿಯಂತೆ ನಡೆಸಿಕೊಂಡ ಘಟನೆ ಸಂಬಂಧ ವಿವರಣೆ ನೀಡುವಂತೆ ಅಮೆರಿಕಕ್ಕೆ ಭಾರತ ಸರ್ಕಾರ ಕೇಳಿದೆ ಎಂದು ವರದಿಯಾಗಿದೆ. ಭಾರತೀಯ ಯುವಕನಿಗೆ ಕೈಕೋಳ ಹಾಕಿ ನೆಲದ ಮೇಲೆ ಉರುಳಿಸಿದ ವಿಡಿಯೊ ಮತ್ತು ಫೋಟೊಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಭಾರಿ ಆಕ್ರೋಶ ವ್ಯಕ್ತವಾಗಿದೆ. ಹರಿಯಾಣ ಮೂಲದ ಯುವಕ ವೀಸಾ ಇಲ್ಲದೆ ಅಕ್ರಮವಾಗಿ ಅಮೆರಿಕಕ್ಕೆ ಪ್ರವೇಶಿಸಿದ್ದಾನೆ.

ನ್ಯಾಯಾಲಯದ ಆದೇಶದ ಪ್ರಕಾರವೇ ಆತನನ್ನು ಭಾರತಕ್ಕೆ ಗಡೀಪಾರು ಮಾಡಲಾಗುತ್ತಿದೆ ಎಂದು ನ್ಯೂಯಾರ್ಕ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಸ್ಪಷ್ಟನೆ ನೀಡಿದೆ. ಈ ಪ್ರಕರಣ ಸಂಬಂಧ ವಿದೇಶಾಂಗ ಸಚಿವಾಲಯವು ನವದೆಹಲಿಯಲ್ಲಿರುವ ಅಮೆರಿಕ ರಾಯಭಾರ ಕಚೇರಿಯ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದೆ ಎಂದು ಮೂಲಗಳು ತಿಳಿಸಿವೆ. ಡಿಸಿಯಲ್ಲಿರುವ ಭಾರತೀಯ ರಾಯಭಾರ ಕಚೇರಿ, ನ್ಯೂಯಾರ್ಕ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಅಧಿಕಾರಿಗಳು ಪ್ರಕರಣದ ವಿವರಗಳನ್ನು ಖಚಿತ ಪಡಿಸಿಕೊಳ್ಳಲು ಅಮೆರಿಕದ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದಾರೆ ಎಂದೂ ಮೂಲಗಳು ವಿವರಿಸಿವೆ. ಭಾರತೀಯ ಯುವಕನಿಗೆ ಕೈಕೋಳ ಹಾಕಿದ ಘಟನೆಯನ್ನು ಭಾರತ ಮೂಲದ ಅಮೆರಿಕನ್ ಕುನಾಲ್ ಜೈನ್ ವೀಡಿಯೋ ಮಾಡಿದ್ದರು. ಅಪರಾಧಿಯಂತೆ ನಡೆಸಿಕೊಳ್ಳುವ ಘಟನೆ ಇದಾಗಿದ್ದು, ಅಸಹಾಯಕ ಮತ್ತು ಹೃದಯ ವಿದ್ರಾವಕ ಎಂದು ಹೇಳಿಕೊಂಡಿದ್ದರು.

# ಕರ್ನಾಟಕ ರಾಜ್ಯ ಸರ್ಕಾರಿ ನ್ಯಾಯಬೆಲೆ ಅಂಗಡಿ ಚಿತ್ರೀಕರಣ




• ಉಮೇಶ್ ಬಾಣಾವರ

ಜಯಶಂಕರ್ ಟಾಕೀಸ್ ಬ್ಯಾನರ್ ಮೂಲಕ ತೇಜು ಮೂರ್ತಿ. ಎಸ್ ಪದ್ಮಾವತಿ ಶಂಕರ್‌ರವರ ನಿರ್ಮಾಣದಲ್ಲಿ ಮೂಡಿ ಬರುತ್ತಿರುವ ಕರ್ನಾಟಕ ಸರ್ಕಾರಿ ನ್ಯಾಯಬೆಲೆ ಅಂಗಡಿ ಚಲನಚಿತ್ರ . ಕತೆ ಚಿತ್ರಕಥೆ ಬಿ ರಾಮಮೂರ್ತಿ.



### ಆಹಾರ ಸಚಿವರಾಗಿ ಉದಯವಾಹಿನಿ ಸಂಪಾದಕ

ತಮ್ಮ ಪಾತ್ರದಲ್ಲಿ ನಿರ್ವಹಿಸಿದ್ದು ಮುಖ್ಯಮಂತ್ರಿಗಳಿಗೆ ಆಹಾರ ಇಲಾಖೆ ಅಧಿಕಾರಿಗಳ ಬಗ್ಗೆ ಮತ್ತು ಸರ್ಕಾರಿ ಪಡಿತರ ವಿತರಕರ ಕಮಿಷನ್ ಮತ್ತು ನ್ಯಾಯಯುತ ಬೇಡಿಕೆಗಳಿಗೆ ಮುಖ್ಯಮಂತ್ರಿಗಳ ಗಮನಕ್ಕೆ ತರುವ ಪಾತ್ರದಲ್ಲಿ ತಮ್ಮ ಅದ್ಭುತ ನಟನೆಯನ್ನು ಉದಯವಾಹಿನಿ ಪತ್ರಿಕೆ ಸಂಪಾದಕರಾದ ಟಿ.ಹೊಂಬೇಗೌಡರು ನೀಡಿದರು.



ತಾಯವ್ವ ಸಿನಿಮಾ ಖ್ಯಾತಿಯ ನಿರ್ದೇಶಕರಾದ ಸಾತ್ವಿಕ್ ಪವನ್ ಕುಮಾರ್ ಛಾಯಾಗ್ರಹಣವನ್ನು ಸಹ ಮಾಡುತ್ತಿದ್ದು, ಅನಂತ ಆರ್ಯನ್ ರವರು ಸಂಗೀತ ನೀಡುತ್ತಿದ್ದಾರೆ ಈ ಚಿತ್ರದ ಚಿತ್ರೀಕರಣವು ಮಂಡ್ಯ ಜಿಲ್ಲೆಯ ದೊಡ್ಡ ಅರಸಿಕೆರೆಯಲ್ಲಿ ಪ್ರಾರಂಭವಾಗಿ ಜಿಲ್ಲೆಯಾದ್ಯಂತ ಅದ್ದೂರಿಯಾಗಿ ನಡೆಯುತ್ತಿದ್ದು ಬುಧವಾರ ಸಹ ಮಂಡ್ಯ ಜಿಲ್ಲೆ ಕಿಲಾರ ಬಳಿಯ ಖಾಸಗಿ ರೆಸಾರ್ಟ್ ಒಂದರಲ್ಲಿ ಸರ್ಕಾರಿ ನ್ಯಾಯಬೆಲೆ ಅಂಗಡಿ ಚಲನಚಿತ್ರದಲ್ಲಿ ಮುಖ್ಯಮಂತ್ರಿಗಳು ಆಹಾರ ಸಚಿವರು ಆಹಾರ ಇಲಾಖೆ ಕಾರ್ಯದರ್ಶಿಗಳು ಪಡಿತರ ವಿತರಕರ ಕಮಿಷನ್ ಬಗ್ಗೆ ಚರ್ಚಿಸುವ ಚಿತ್ರೀಕರಣ ಅದ್ದೂರಿಯಾಗಿ ಸಾಗಿತು

**ಸಿಎಂ ಪಾತ್ರದಲ್ಲಿ ಎಲ್ ಆರ್ ಶಿವರಾಮೇಗೌಡರು ಆಹಾರ ಸಚಿವರಾಗಿ ಟಿ ಹೊಂಬೇಗೌಡರು**

ಪ್ರಭಾವಿ ರಾಜಕಾರಣಿ ಮಾಜಿ ಲೋಕಸಭಾ ಸದಸ್ಯ ಎಲ್ ಆರ್ ಶಿವರಾಮೇಗೌಡರು ಕರ್ನಾಟಕ ಸರ್ಕಾರ ನ್ಯಾಯಾಲಯ ಅಂಗಡಿ ಚಲನಚಿತ್ರದಲ್ಲಿ ಮುಖ್ಯಮಂತ್ರಿಗಳಾಗಿ ಪಾತ್ರವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದರು. ನಂತರ ಮಾತನಾಡಿದ ಶಿವರಾಮೇಗೌಡರು ಚಲನಚಿತ್ರದ ಚಿತ್ರಕಥೆಯನ್ನು ರಾಮಮೂರ್ತಿಯವರು ನಿರ್ವಹಿಸಿದ್ದು ನಿರ್ದೇಶನ ಮಾಡುತ್ತಿರುವ ಸಾತ್ವಿಕ್ ಪವನ್ ಕುಮಾರ್ ನೇತೃತ್ವದಲ್ಲಿ ಚಿತ್ರ ತಂಡ ಅತ್ಯುತ್ತಮ ಕಾರ್ಯ ನಿರ್ವಹಿಸುತ್ತಿದೆ ನಾನು ಸಹ ಹಿಂದೆ ಬ್ರಹ್ಮ ಮತ್ತು ಹಳದಿ ಬಸ್ ಎಂಬ ಚಲನಚಿತ್ರದಲ್ಲಿ ನಟಿಸಿದ್ದೇನೆ ಸರ್ಕಾರಿ ನ್ಯಾಯಬೆಲೆ ಅಂಗಡಿ ಚಲನಚಿತ್ರದ ತಂಡ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಮಾಜಿ ಲೋಕಸಭಾ ಸದಸ್ಯ ಎಲ್ ಆರ್ ಶಿವರಾಮೇಗೌಡ ಹೇಳಿದರು



**ರಾಜ್ಯ ಪಡಿತರ ವಿತರಕರ ಅಧ್ಯಕ್ಷ ಕೃಷ್ಣಪ್ಪ ಲವಲವಿಕೆಯಿಂದ ಚಿತ್ತೀಕರಣ ತಂಡದೊಂದಿಗೆ ಬಾಗಿ**

ರಾಜ್ಯ ಪಡಿತರ ವಿತರಕರ ಸಂಘದ ಅಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯಾಧ್ಯಕ್ಷರಾಗಿ ಡಿಡಿಸದಾ ಹೋರಾಟ ಮತ್ತು ರಾಜ್ಯದ ಮೂಲೆ ಮೂಲೆಗಳಿಂದಲೂ ತಮ್ಮ ಸಮಸ್ಯೆಗಳಿಗಾಗಿ ದೂರವಾಣಿ ಮುಖಾಂತರ ಕೃಷ್ಣಪ್ಪನವರನ್ನು ಸಂಪರ್ಕಿಸಿ ತಮ್ಮ ನ್ಯಾಯಬೆಲೆ ಅಂಗಡಿಗಳ ಮಾಲೀಕರು ಹೇಳಿಕೊಳ್ಳುವ ಪಡಿತರ ವಿತರಣೆಯ ಸಮಸ್ಯೆಗಳ ಬಗ್ಗೆ ಚಿರ ಯುವಕನಂತೆ ಸದಾ ಸ್ಪಂದಿಸುತ್ತ ತಮ್ಮ ಹೋರಾಟ ಮತ್ತು ಸಂಘಟನೆಯಿಂದ ರಾಜ್ಯಾದ್ಯಂತ ಹೆಸರು ಮಾಡಿರುವ ಕೃಷ್ಣಪ್ಪ ಸರ್ಕಾರಿ ನ್ಯಾಯಬೆಲೆ ಅಂಗಡಿ ಚಿತ್ರದಲ್ಲಿಯೂ ಸಹ ರಾಜ್ಯಾಧ್ಯಕ್ಷರ ಪಾತ್ರದಲ್ಲಿ ನಟಿಸುತ್ತಿದ್ದು ಇಂದು ಸಹ ಚಿತ್ರೀಕರಣದಲ್ಲಿ ತಮ್ಮ ಪಾತ್ರದ ಅಭಿನಯ ಇಲ್ಲದಿದ್ದರೂ ಸಹ ಚಿತ್ರೀಕರಣದ ತಂಡದೊಂದಿಗೆ ಮತ್ತು ಚಿತ್ರೀಕರಣಕ್ಕಾಗಿ ಆಗಮಿಸಿದ ಪ್ರಭಾವಿ ರಾಜಕಾರಣಿ ಮಾಜಿ ಲೋಕಸಭಾ ಸದಸ್ಯ ಎಲ್ ಆರ್ ಶಿವರಾಮೇಗೌಡ ರೊಂದಿಗೆ ಲವಲವಿಕೆಯಿಂದ ಓಡಾಡುತ್ತಿದ್ದಿದ್ದು ಕಂಡುಬಂದಿತು.

### ಆಹಾರ ಇಲಾಖೆ ಕಾರ್ಯದರ್ಶಿಗಳ ಪಾತ್ರದಲ್ಲಿ ರೋಹಿತ್ ಶ್ರೀನಾಥ್

ಕನ್ನಡ ನಾಡಿನಾದ್ಯಂತ ಮಹಿಳೆಯರ ಮನಸೂರೆಗೊಂಡಿದ್ದ ಖ್ಯಾತಿಯ ಬ್ರಹ್ಮಗಂಟು ಧಾರವಾಹಿ. ಗಂಗೆ ಗೌರಿ ಧಾರವಾಹಿ ಹಾಗೂ ತ್ರಿಪುರ ಸುಂದರಿ. ಮತ್ತು ಮಾಲ್ಗುಡಿ ಡೇಸ್. ಹೀಗೆ ಹಲವಾರು ಧಾರವಾಹಿಗಳ ಮೂಲಕ ರಾಜ್ಯಾದ್ಯಂತ ಖ್ಯಾತಿ ಪಡೆದಿರುವ ರೋಹಿತ್ ಶ್ರೀನಾಥ್‌ರವರು ಆಹಾರ ಇಲಾಖೆಯ ಕಾರ್ಯದರ್ಶಿಗಳ ಪಾತ್ರದಲ್ಲಿ ಮುಖ್ಯಮಂತ್ರಿಗಳಾದ ಎಲ್ ಆರ್ ಶಿವರಾಮೇಗೌಡ ಮತ್ತು ಆಹಾರ ಸಚಿವರಾದ ಟಿ.ಹೊಂಬೇಗೌಡರೊಂದಿಗೆ ಅದ್ಭುತ ನಟನೆ ನೀಡಿದರು



## ಕೊನೆಗೂ ಮೌನ ಮುರಿದ ದ್ರಾವಿಡ್

ರಾಯಲ್ ಚಾಲೆಂಜರ್ಸ್ ಬೆಂಗಳೂರು ಮೊದಲ ಬಾರಿಗೆ ಐಪಿಎಲ್ ಕಪ್ ಎತ್ತಿದೆ. ಈ ಮೂಲಕ 18 ವರ್ಷಗಳ ಕಾಯುವಿಕೆ ಅಂತ್ಯಗೊಂಡಿದೆ. ಇದರ ಸೆಲಬ್ರೇಷನ್‌ಗಾಗಿ ತಂಡ ಬೆಂಗಳೂರಿಗೆ ಬಂದಿತ್ತು. ಈ ವೇಳೆ ಎಂ. ಚಿನ್ನಸ್ವಾಮಿ ಸ್ಟೇಡಿಯಂ ಹೊರ ಭಾಗದಲ್ಲಿ ಉಂಟಾದ ಕಾಲ್ತುಳಿತದಲ್ಲಿ 11 ಜನರು ಮೃತಪಟ್ಟರೆ, 50 ಜನರು ಗಾಯಗೊಂಡಿದ್ದರು. ಈ ಘಟನೆ ಬಗ್ಗೆ ಟೀಂ ಇಂಡಿಯಾ ಮಾಜಿ ಆಟಗಾರ ಹಾಗೂ ಕೋಚ್ ರಾಹುಲ್ ದ್ರಾವಿಡ್ ಅವರು ಕೊನೆಗೂ ಮೌನ ಮುರಿದಿದ್ದಾರೆ. ಅವರು ಘಟನೆ ಬಗ್ಗೆ ಸಂತಾಪ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿರುವ ಜನರಿಗೆ ಕ್ರೀಡೆಯ ಬಗ್ಗೆ ಪ್ರೀತಿ ಇದೆ. ನಾನು ಕೂಡ ಬೆಂಗಳೂರಿನವನು. ಜನರು ಕ್ರಿಕೆಟ್ ಮಾತ್ರವಲ್ಲ, ಎಲ್ಲಾ ಕ್ರೀಡೆಯನ್ನೂ ಪ್ರೀತಿಸುತ್ತಾರೆ. ಫುಟ್‌ಬಾಲ್ ಇರಲಿ, ಕಬಡ್ಡಿ ಇರಲಿ, ಎಲ್ಲಾ ತಂಡವನ್ನು ಜನರು ಅನುಸರಿಸುತ್ತಾರೆ. ಆರ್‌ಸಿಬಿ ನಿಜಕ್ಕೂ ದೊಡ್ಡ ಹಿಂಬಾಲಕರನ್ನು ಹೊಂದಿರೋ ತಂಡ. ನಡೆದಿರುವ ಘಟನೆ ನಿಜಕ್ಕೂ ದುರದೃಷ್ಟಕರ. ಘಟನೆಯಲ್ಲಿ ಪ್ರಾಣ ಕಳೆದು ಕೊಂಡವರಿಗೆ ನನ್ನ ಸಂತಾಪ ಎಂದು ದ್ರಾವಿಡ್ ಹೇಳಿದ್ದಾರೆ.

ಆರ್‌ಸಿಬಿ ತಂಡ ಕಪ್ ಗೆದ್ದ ಖುಷಿಯಲ್ಲಿ ಬೆಂಗಳೂರಿಗೆ ಬಂದಿತ್ತು. ಈ ವೇಳೆ ಎರಡು ಲಕ್ಷ ಜನರು ಸೇರಿದ್ದರು. ವಿಧಾನಸೌಧದಲ್ಲಿ ಕ್ರೀಡಾಪಟುಗಳನ್ನು ಸನ್ಮಾನ ಮಾಡಲಾಯಿತು. ಅಲ್ಲಿಯೂ ಸಾಕಷ್ಟು ಜನರು ಸೇರಿದ್ದರು.

ಆದರೆ, ಯಾವುದೇ ತೊಂದರೆ ಉಂಟಾಗಿರಲಿಲ್ಲ. ಆದರೆ, ಎಂ.ಚಿನ್ನಸ್ವಾಮಿ ಕ್ರೀಡಾಂಗಣದ ಹೊರ ಭಾಗದಲ್ಲಿ ಸಾಕಷ್ಟು ಅಚಾತುರ್ಯಗಳು ನಡೆದವು. ಸ್ಟೇಡಿಯಂ ಹೊರ ಭಾಗದಲ್ಲಿ ಸ್ಲ್ಯಾಬ್ ಒಂದನ್ನು ತಾತ್ಕಾಲಿಕವಾಗಿ ಹಾಕಲಾಗಿತ್ತು. ಇದು ಕುಸಿದಿದ್ದರಿಂದ ಜನರು ಆತಂಕಗೊಂಡು ಚೆಲ್ಲಾಪಿಲ್ಲಿ ಆಗಿ ಓಡಿದರು. ಈ ವೇಳೆ ದುರಂತ ಸಂಭವಿಸಿದೆ ಎನ್ನಲಾಗಿದೆ. ಮೃತಪಟ್ಟವರಲ್ಲಿ ಮಕ್ಕಳು, ಯುವಕರು ಹಾಗೂ ಯುವತಿಯರು ಸೇರಿದ್ದಾರೆ. ಮೃತರ ಕುಟುಂಬದ ಆಕ್ರಂದನ ಮುಗಿಲುಮುಟ್ಟಿದೆ.



## 90 ಎಸೆತಗಳಲ್ಲಿ 190 ರನ್ ಚಚ್ಚಿದ ವೈಭವ್ ಸೂರ್ಯವಂಶಿ

ಐಪಿಎಲ್‌ನಲ್ಲಿ ಕೋಲಾಹಲ ಸೃಷ್ಟಿಸಿದ್ದ 14 ವರ್ಷದ ವೈಭವ್ ಸೂರ್ಯವಂಶಿ ಇದೀಗ ಅಭ್ಯಾಸ ಪಂದ್ಯಗಳಲ್ಲಿಯೂ ತಮ್ಮ ಬ್ಯಾಟಿಂಗ್ ಮೂಲಕ ಸಂಚಲನ ಸೃಷ್ಟಿಸುತ್ತಿದ್ದಾರೆ. ಇತ್ತೀಚೆಗೆ ಬೆಂಗಳೂರಿನ ಬಿಸಿಸಿಐ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ನಡೆದ ಭಾರತದ ಅಂಡರ್ -19 ತಂಡದ ಅಭ್ಯಾಸ ಪಂದ್ಯದಲ್ಲಿ ವೈಭವ್ ಕೇವಲ 90 ಎಸೆತಗಳಲ್ಲಿ 190 ರನ್ ಬಾರಿಸಿ ಅಬ್ಬರದ ಇನ್ನಿಂಗ್ಸ್ ಆಡಿದ್ದಾರೆ. ಇದರ ವಿಡಿಯೋ ಇದೀಗ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ. ವಿಡಿಯೋದಲ್ಲಿರುವಂತೆ ಸೂರ್ಯವಂಶಿ ಸಿಕ್ಸರ್ ಮತ್ತು ಬೌಂಡರಿಗಳ ಮಳೆ ಸುರಿಸಿದ್ದಾರೆ.

**90 ಎಸೆತಗಳಲ್ಲಿ 190 ರನ್:** 14 ವರ್ಷದ ಎಡಗೈ ಬ್ಯಾಟ್ಸ್‌ಮನ್ ವೈಭವ್ ಸೂರ್ಯವಂಶಿ ಇಂಗ್ಲೆಂಡ್‌ಗೆ ಹೋಗುವ ಮೊದಲು ಎನ್‌ಸಿಎಯಲ್ಲಿ ನಡೆದ ಅಭ್ಯಾಸ ಪಂದ್ಯದಲ್ಲಿ ಏಕಾಂಗಿಯಾಗಿ ಸ್ಫೋಟಕ ಪ್ರದರ್ಶನ ನೀಡಿದ್ದಾರೆ. ವರದಿಯ ಪ್ರಕಾರ 200 ಕ್ಕೂ ಹೆಚ್ಚು ಸ್ಟ್ರೈಕ್ ರೇಟ್‌ನೊಂದಿಗೆ ಬ್ಯಾಟಿಂಗ್ ಮಾಡಿದ ವೈಭವ್ ಕೇವಲ 90 ಎಸೆತಗಳಲ್ಲಿ 190 ರನ್ ಬಾರಿಸಿದರು. ಆದಾಗ್ಯೂ, ಅವರು ಎಷ್ಟು ಸಿಕ್ಸರ್‌ಗಳನ್ನು ಬಾರಿಸಿದರು ಎಂಬುದರ ಕುರಿತು ಖಚಿತ ಮಾಹಿತಿ ತಿಳಿದುಬಂದಿಲ್ಲ.

**ಐಪಿಎಲ್‌ನಲ್ಲಿ ವೇಗದ ಶತಕ:** ಐಪಿಎಲ್ 2025 ರಲ್ಲಿ ರಾಜಸ್ಥಾನ್ ರಾಯಲ್ಸ್ ತಂಡದ ಭಾಗವಾಗಿದ್ದ ವೈಭವ್ ಸೂರ್ಯವಂಶಿ ಕೇವಲ 7 ಪಂದ್ಯಗಳನ್ನು ಆಡಿ, 206 ಕ್ಕಿಂತ ಹೆಚ್ಚು ಸ್ಟ್ರೈಕ್ ರೇಟ್‌ನಲ್ಲಿ 250 ಕ್ಕೂ ಹೆಚ್ಚು ರನ್ ಗಳಿಸಿದರು. ಇದೇ ವೇಳೆ ಅವರು ಐಪಿಎಲ್ ಇತಿಹಾಸದಲ್ಲಿ ಅತಿ ವೇಗದ ಶತಕ ಬಾರಿಸಿದ ದಾಖಲೆಯನ್ನು ಬರೆದರು.ಕೇವಲ 35 ಎಸೆತಗಳಲ್ಲಿ ಶತಕ ಬಾರಿಸಿದ ವೈಭವ್ ಸೂರ್ಯವಂಶಿ, ಇದರೊಂದಿಗೆ ಕ್ರಿಸ್ ಗೇಲ್ ನಂತರ ಐಪಿಎಲ್‌ನಲ್ಲಿ ವೇಗದ ಶತಕ ಗಳಿಸಿದ ಎರಡನೇ ಬ್ಯಾಟ್ಸ್‌ಮನ್ ಎಂಬ ದಾಖಲೆಯನ್ನು ಬರೆದರು. ಐಪಿಎಲ್‌ನಲ್ಲಿ ಅಬ್ಬರಿಸಿದ್ದ ವೈಭವ್ ಇಂಗ್ಲೆಂಡ್ ಪ್ರವಾಸ ಕೈಗೊಳ್ಳಲಿರುವ ಅಂಡರ್ 19 ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಇಂಗ್ಲೆಂಡ್‌ಗೆ ಹೋಗುವ ಮೊದಲು, ಬೆಂಗಳೂರಿನಲ್ಲಿ ನಡೆದ ಅಭ್ಯಾಸ ಪಂದ್ಯದಲ್ಲಿ ವೈಭವ್ ಮತ್ತೊಮ್ಮೆ ಅಭಿಮಾನಿಗಳನ್ನು ರಂಜಿಸುವಲ್ಲಿ ಯಶಸ್ವಿಯಾಗಿದ್ದಾರೆ.




**ಭಾರತ ಅಂ-19 ತಂಡದಲ್ಲಿ ಸ್ಥಾನ**

## ತೆಲುಗು ಸಿನಿಮಾದಲ್ಲಿ ರಶ್ಮಿಕಾ ಮಂದಣ್ಣ ಮೇಲೆ ಓಪನ್ ಟ್ರೋಲ್

ತೆಲುಗಿನ 'ಸಿಂಗಲ್' ಸಿನಿಮಾನ ವೈರಲ್ ಮೀಮ್‌ಗಳು ಮತ್ತು ಸೆಲೆಬ್ರಿಟಿಗಳ ಡೈಲಾಗ್‌ಗಳನ್ನು ಬಳಸಿ ನಿರ್ಮಿಸಲಾಗಿದೆ. ರಶ್ಮಿಕಾ ಮಂದಣ್ಣ, ವಿಜಯ್ ದೇವರಕೊಂಡ ಹಾಗೂ ಇತರ ಸೆಲೆಬ್ರಿಟಿಗಳ ಸೋಶಿಯಲ್ ಮೀಡಿಯಾ ಪೋಸ್ಟ್‌ಗಳು ಮತ್ತು ಡೈಲಾಗ್‌ಗಳನ್ನು ಚಿತ್ರದಲ್ಲಿ ಬಳಸಲಾಗಿದೆ. ಇದು ವ್ಯಾಪಕ ಚರ್ಚೆಗೆ ಕಾರಣವಾಗಿದೆ. ಚಿತ್ರದ ಕೆಲವು ದೃಶ್ಯಗಳು ಬಾಲಯ್ಯ ಮತ್ತು ಅಲ್ಲು ಅರ್ಜುನ್ ಸಿನಿಮಾಗಳನ್ನು ನೆನಪಿಸುತ್ತವೆ. ಕಳೆದ ವರ್ಷ ರಿಲೀಸ್ ಆದ ಉಪೇಂದ್ರ ನಟನೆ ಹಾಗೂ ನಿರ್ದೇಶನದ 'ಯುಐ' ಸಿನಿಮಾ ಯಶಸ್ಸು ಕಂಡಿತ್ತು. ಈ ಚಿತ್ರದ 'ಟ್ರೋಲ್' ಸಾಂಗ್ ಸಾಕಷ್ಟು ಸಂಚಲನ ಸೃಷ್ಟಿ ಮಾಡಿತ್ತು. ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆದ ಟ್ರೋಲ್‌ಗಳನ್ನೇ ಇಟ್ಟುಕೊಂಡು ಈ ಹಾಡನ್ನು ರಚಿಸಲಾಗಿತ್ತು. ಹೀಗಿರುವಾಗ ಮೀಮ್‌ಗಳನ್ನೇ ಇಟ್ಟುಕೊಂಡು ಸಿನಿಮಾ ಮಾಡಿದರೆ ಅಂಥ ಸಾಹಸಕ್ಕೆ ತೆಲುಗು ಮಂದಿ ಕೈ ಹಾಕಿ ಯಶಸ್ಸು ಕಂಡಿದ್ದಾರೆ.

ರಶ್ಮಿಕಾ ಮಂದಣ್ಣ, ವಿಜಯ್ ದೇವರಕೊಂಡ ಸೇರಿದಂತೆ ಅನೇಕರ ಡೈಲಾಗ್ ಹಾಗೂ ಪೋಸ್‌ಗಳನ್ನು ಇದರಲ್ಲಿ ಬಳಕೆ ಮಾಡಿಕೊಳ್ಳಲಾಗಿದ್ದು ಸಾಕಷ್ಟು ಚರ್ಚೆ ಹುಟ್ಟುಹಾಕಿದೆ. 'ಸಿಂಗಲ್' ಅನ್ನೋದು ಸಿನಿಮಾದ ಹೆಸರು. ಮೇ 9ರಂದು ಈ ಸಿನಿಮಾ ಥಿಯೇಟರ್‌ನಲ್ಲಿ ಬಿಡುಗಡೆ ಕಂಡಿತು. ಕಾರ್ತಿಕ್ ರಾಜು ಎಂಬುವವರು ಈ ಚಿತ್ರವನ್ನು ನಿರ್ದೇಶನ ಮಾಡಿದ್ದಾರೆ. ನಿರ್ದೇಶನದಲ್ಲಿ ಅವರಿಗೆ ಇದು ಐದನೇ ಅನುಭವ. ಈ ಸಿನಿಮಾದಲ್ಲಿ ಶ್ರೀ ವಿಷ್ಣು, ಇವಾನಾ, ವೆನ್ನೆಲಾ ಕಿಶೋರ್ ಮೊದಲಾದವರು ನಟಿಸಿದ್ದಾರೆ. ಈ ಚಿತ್ರವನ್ನು ಅಲ್ಲು ಅರ್ಜುನ್ ತಂದೆ ಅಲ್ಲು ಅರವಿಂದ್ ಪ್ರೆಸೆಂಟ್ ಮಾಡಿದ್ದಾರೆ.

ಈ ಚಿತ್ರದ ಕ್ಲಿಪ್‌ಗಳು ವೈರಲ್ ಆಗಿವೆ. ಈ ಮೊದಲು ರಶ್ಮಿಕಾ ಮಂದಣ್ಣ ಅವರು ತಮ್ಮ ಬರ್ತ್‌ಡೇ ದಿನ ತಲೆಯ ಮೇಲೆ ಕೈ ಇಟ್ಟುಕೊಂಡು 'ಹ್ಯಾಪಿ ಬರ್ತ್‌ಡೇ ರಶ್ಮಿ' ಎನ್ನುತ್ತಾ ಹೇಳುತ್ತಾ ಬರುತ್ತಿದ್ದರು. ಇದನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದರು. ವಿಶೇಷ ಎಂದರೆ 'ಸಿಂಗಲ್' ಸಿನಿಮಾದಲ್ಲಿ ಬಳಕೆ ಮಾಡಿಕೊಳ್ಳಲಾಗಿದೆ. ವೆನ್ನೆಲ್ಲಾ ಕಿಶೋರ್ ಅವರು 'ಹ್ಯಾಪಿ ಬರ್ತ್‌ಡೇ ಗಾಯತ್ರಿ' ಎನ್ನುತ್ತಾ ಸೇಮ್ ಪೋಸ್‌ನಲ್ಲಿ ಬರುತ್ತಾರೆ. ಸದ್ಯ ಈ ವಿಚಾರ ಚರ್ಚೆ ಹುಟ್ಟುಹಾಕಿದೆ.

**ಸಿಂಗಲ್ ಅನ್ನೋದು ಸಿನಿಮಾದ ಹೆಸರು**



## ಪೊಲೀಸರಿಗೆ ಆವಾಜ್ ಹಾಕಿದ ಗಾಯಕಿ!

ಖ್ಯಾತ ಗಾಯಕಿ ಮಂಗ್ಲಿ ಬರ್ತಡೇ ಪಾರ್ಟಿ ವೇಳೆ ಪೊಲೀಸರು ದಾಳಿ ನಡೆಸಿ, ಮಾದಕ ವಸ್ತು ಸೇವಿಸಿದ್ದ ಹಲವರನ್ನು ವಶಕ್ಕೆ ಪಡೆದಿದ್ದಾರೆ.

ಎರ್ಲಪಲ್ಲಿರುವ ತ್ರಿಪುರಾ ರೆಸಾರ್ಟ್‌ನಲ್ಲಿ ಬರ್ತಡೇ ಪಾರ್ಟಿ ನಡೆಯುತ್ತಿತ್ತು. ಈ ವೇಳೆ, ಚೆವೆಲ್ಲಾ ಠಾಣೆ ಪೊಲೀಸರು ದಾಳಿ ನಡೆಸಿದ್ದಾರೆ. ದಾಳಿ ವೇಳೆ ಗಾಂಜಾ, ವಿದೇಶಿ ಮದ್ಯ ಪತ್ತೆಯಾಗಿದೆ. ಪಾರ್ಟಿಯಲ್ಲಿ ಭಾಗಿಯಾಗಿದ್ದ ಹಲವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಮೆಡಿಕಲ್ ಟೆಸ್ಟ್‌ನಲ್ಲಿ ಹಲವರು ಮಾದಕ ವಸ್ತು ಸೇವಿಸಿರೋದು ಪತ್ತೆಯಾಗಿದೆ. ಈ ಸಂಬಂಧ ಚೆವೆಲ್ಲಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದಾಳಿ ವೇಳೆ ಪೊಲೀಸರು ವಿಡಿಯೋ ಮಾಡಿದ್ದು, ಮಂಗ್ಲಿ, ವಿಡಿಯೋ ಮಾಡೋದು ನಿಲ್ಲಿಸ್ತೀಯೋ ಇಲ್ವೋ ಎಂದು ಪೊಲೀಸರ ಮೇಲೆ ಗದರಿದ್ದಾಳೆ. ಇದಕ್ಕೆ, ನನ್ನ ಕೆಲಸ ನಾನು ಮಾಡ್ತಿದ್ದೇನೆ ಎಂದು ಪೊಲೀಸ್ ಸಿಬ್ಬಂದಿ ಉತ್ತರಿಸಿದ್ದಾರೆ.



## ಕತ್ರಿನಾ ಕೈಫ್ ರಾಯಭಾರಿ

ಭಾರತದೊಂದಿಗೆ ಸಂಘರ್ಷ ಮಾಡಿ ಕೊಂಡಿದ್ದ ಮಾಲ್ಡೀವ್ಸ್, ಬಾಲಿವುಡ್ ನಟಿ ಕತ್ರಿನಾ ಕೈಫ ಅವರನ್ನು ತನ್ನ ದೇಶದ ಜಾಗತಿಕ ಪ್ರವಾಸೋದ್ಯಮದ ರಾಯಭಾರಿಯಾಗಿ ಘೋಷಿಸಿದೆ. ಮಾಲ್ಡೀವ್ಸ್ ಮಾರ್ಕೆಟಿಂಗ್ ಮತ್ತು ಪಬ್ಲಿಕ್ ರಿಲೇಶನ್ಸ್ ಕಾರ್ಪೊರೇಷನ್ ಇತ್ತೀಚೆಗೆ ಈ ಘೋಷಣೆ ಮಾಡಿದೆ. ನಟಿ ಕತ್ರಿನಾ ಕೈಫ್ ಅವರನ್ನು ವಿಸಿಟ್ ಮಾಲ್ಡೀವ್ಸ್ ಜಾಗತಿಕ ಬ್ರ್ಯಾಂಡ್ ರಾಯಭಾರಿಯಾಗಿ ನೇಮಿಸಲಾಗಿದೆ. ಭಾರತದ ಜೊತೆ ರಾಜತಾಂತ್ರಿಕ ಸಂಬಂಧ ಸುಧಾರಣೆಗೆ ಈ ಕ್ರಮಕೈಗೊಳ್ಳಲಾಗಿದೆ ಎನ್ನಲಾಗಿದೆ.

ನಮ್ಮ ಜಾಗತಿಕ ಬ್ರ್ಯಾಂಡ್ ರಾಯಭಾರಿ ಕತ್ರಿನಾ ಅವರನ್ನು ಸ್ವಾಗತಿಸಲು ನಾವು ರೋಮಾಂಚನಗೊಂಡಿದ್ದೇವೆ. ಜನಪ್ರಿಯ ವ್ಯಕ್ತಿತ್ವ ಮತ್ತು ವಿಶ್ವಾದ್ಯಂತ ಅಭಿಮಾನಿಗಳನ್ನು ಹೊಂದಿರುವ ಅವರನ್ನು ಕಳೆದ 5 ವರ್ಷಗಳಿಂದ ಸತತ ವಿಶ್ವದ ಪ್ರಮುಖ ತಾಣವಾದ ಸನ್ನಿ ಸೈಡ್ ಆಫ್ ಲೈಫ್‌ಗೆ ಪರಿಪೂರ್ಣ ಪ್ರತಿನಿಧಿಯನ್ನಾಗಿ ಮಾಡುತ್ತದೆ. ವಿಶೇಷವಾಗಿ ನಾವು ಪ್ರಪಂಚದಾದ್ಯಂತ ಪ್ರಮುಖ ಮಾರುಕಟ್ಟೆಗಳಲ್ಲಿ ನಮ್ಮ 'ಸಮ್ಮರ್ ಸೇಲ್ಸ್' ಪ್ರಚಾರವನ್ನು ಪ್ರಾರಂಭಿಸುತ್ತಿದ್ದೇವೆ ಎಂದು ಎಂಡಿ ಇಬ್ರಾಹಿಂ ಶಿಯುರಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.



ತಮಿಳಿನ ಸಣ್ಣ ಬಜೆಟ್ ಸಿನಿಮಾ 'ಟೂರಿಸ್ಟ್ ಫ್ಯಾಮಿಲಿ' ಚಿತ್ರಮಂದಿರಗಳಲ್ಲಿ ದೊಡ್ಡ ಹಿಟ್ ಆಗಿದೆ. ಸಿನಿಮಾ ಒಟಿಟಿಯಲ್ಲೂ ಬಿಡುಗಡೆ ಆಗಿ ಹಿಟ್ ಎನಿಸಿಕೊಂಡಿದೆ. ಆದರೆ ಇದೀಗ 'ಟೂರಿಸ್ಟ್ ಫ್ಯಾಮಿಲಿ' ಸಿನಿಮಾ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ನೆಗೆಟಿವ್ ವಿಮರ್ಶೆಗಳು ಕೇಳಿ ಬರುತ್ತಿವೆ. ಇದೊಂದು 'ಡೇಂಜರಸ್' ಸಿನಿಮಾ ಎನ್ನಲಾಗುತ್ತಿದೆ. ಇದರ ನಡುವೆ ಪ್ರಭಾಸ್ ನಟನೆಯ 'ಛತ್ರಪತಿ' ಸಿನಿಮಾ ಬಗ್ಗೆಯೂ ಚರ್ಚೆ ಎದ್ದಿದೆ. ತಮಿಳಿನ ಸಣ್ಣ ಬಜೆಟ್ ಸಿನಿಮಾ 'ಟೂರಿಸ್ಟ್ ಫ್ಯಾಮಿಲಿ' ಕಳೆದ ತಿಂಗಳು ಚಿತ್ರಮಂದಿರಗಳಲ್ಲಿ ಬಿಡುಗಡೆ ಆಗಿ ದೊಡ್ಡ ಹಿಟ್ ಎನಿಸಿಕೊಂಡಿತು. ಸಸಿಕುಮಾರ್, ಸಿಮ್ರನ್ ಮುಖ್ಯ ಪಾತ್ರಗಳಲ್ಲಿ ನಟಿಸಿರುವ ಈ ಸಿನಿಮಾ ಫ್ಯಾಮಿಲಿ ಆಡಿಯೆನ್ಸ್ ಮೆಚ್ಚುಗೆ ಗಳಿಸಿಕೊಂಡಿದೆ. ಶ್ರೀಲಂಕಾದಿಂದ ನಿಯಮಬಾಹಿರವಾಗಿ ತಮಿಳುನಾಡಿಗೆ ಬರುವ ತಮಿಳು ಕುಟುಂಬವೊಂದರ ಕತೆಯನ್ನು ಈ ಸಿನಿಮಾ ಒಳಗೊಂಡಿದೆ. ಸಿನಿಮಾ ಕೆಲ ವಾರಗಳ ಹಿಂದಷ್ಟೆ ಜಿಯೋ ಹಾಟ್‌ಸ್ಟಾರ್ ಒಟಿಟಿಯಲ್ಲಿ ಬಿಡುಗಡೆ ಆಗಿದ್ದು,



## ಪ್ರಭಾಸ್‌ಗೊಂದು ನ್ಯಾಯ, ಟೂರಿಸ್ಟ್‌ಗೊಂದು ನ್ಯಾಯ?


ಒಟಿಟಿಯಲ್ಲಿಯೂ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗಿದೆ. ಅದರ ಬೆನ್ನಲ್ಲೆ ಸಿನಿಮಾದ ಬಗ್ಗೆ ನೆಗೆಟಿವ್ ಚರ್ಚೆಗಳು ಸಹ ಶುರುವಾಗಿವೆ. 'ಟೂರಿಸ್ಟ್ ಫ್ಯಾಮಿಲಿ' ಸಿನಿಮಾ ನೋಡಿದ ಕೆಲವು ಮಂದಿ ಸಿನಿಮಾದ ಮುಖ್ಯಧಾತುವಿನ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಿನಿಮಾದಲ್ಲಿ ಅಕ್ರಮ ವಲಸೆಯನ್ನು ನಾರ್ಮಲೈಜ್ ಮಾಡಲಾಗಿದೆ ಎಂದು ಆರೋಪಿಸಿದ್ದಾರೆ. ಭಾರತ ಪ್ರಸ್ತುತ ಅಕ್ರಮ ವಲಸಿಗರ ಸಮಸ್ಯೆಯ ವಿರುದ್ಧ ಹೋರಾಡುತ್ತಿದೆ. ಆದರೆ 'ಟೂರಿಸ್ಟ್ ಫ್ಯಾಮಿಲಿ' ಸಿನಿಮಾನಲ್ಲಿ ಅಕ್ರಮ ವಲಸೆಯನ್ನು ವೈಭವೀಕರಿಸಲಾಗಿದೆ' ಎಂದು ಟೀಕೆ ಮಾಡಿದ್ದಾರೆ. ಅದು ಮಾತ್ರವೇ ಅಲ್ಲದೆ ಸಿನಿಮಾದಲ್ಲಿರುವ ಕೆಲವು ಸಣ್ಣ-ಪುಟ್ಟ ವಿಷಯಗಳನ್ನು ಹುಡುಕಿ-ಹುಡುಕಿ ಟೀಕೆ ಮಾಡಲಾಗುತ್ತಿದೆ. ಇನ್ನು 'ಟೂರಿಸ್ಟ್ ಫ್ಯಾಮಿಲಿ' ಸಿನಿಮಾದ ಪರವಾಗಿ ಸಹ ಸಾಮಾಜಿಕ ಜಾಲತಾಣದಲ್ಲಿ ಕೆಲವರು ವಾದ ಮಂಡಿಸಿದ್ದು, ಪ್ರಭಾಸ್ ನಟನೆಯ 'ಛತ್ರಪತಿ' ಸಿನಿಮಾವನ್ನು ಉದಾಹರಣೆಯಾಗಿ ತೆಗೆದುಕೊಂಡಿದ್ದಾರೆ. ಆ ಸಿನಿಮಾನಲ್ಲಿ ಸಹ ಪ್ರಭಾಸ್ ಹಾಗೂ ಕುಟುಂಬ ತಮಿಳುನಾಡಿನಿಂದ ತಪ್ಪಿಸಿಕೊಂಡು ವೈಜಾಗ್‌ಗೆ ಬಂದಿರುತ್ತಾರೆ.

**ಅಕ್ರಮ ವಲಸೆ ನಾರ್ಮಲೈಜ್**

## 57ನೇ ವಯಸ್ಸಿಗೆ ತಂದೆ ಆದ ಅರ್ಬಾಜ್

57 ವರ್ಷದ ಅರ್ಬಾಜ್ ಖಾನ್ ಮತ್ತು ಅವರ ಪತ್ನಿ ಶುರಾ ಖಾನ್ ಅವರು ತಮ್ಮ ಮಗುವಿನ ಆಗಮನದ ಬಗ್ಗೆ ಅಧಿಕೃತವಾಗಿ ಘೋಷಿಸಿದ್ದಾರೆ. ಈ ಸುದ್ದಿ ಅಭಿಮಾನಿಗಳಲ್ಲಿ ಉತ್ಸಾಹ ಮೂಡಿಸಿದೆ. ಹಲವು ವದಂತಿಗಳ ನಂತರ ಈ ದಂಪತಿಗಳು ತಮ್ಮ ಸಂತೋಷವನ್ನು ಹಂಚಿಕೊಂಡಿದ್ದಾರೆ. ಅರ್ಬಾಜ್ ಅವರು ತಮ್ಮ ಹೊಸ ಜವಾಬ್ದಾರಿಯ ಬಗ್ಗೆ ಉತ್ಸುಕರಾಗಿದ್ದಾರೆ. ಸಲ್ಮಾನ್ ಖಾನ್ ಸಹೋದರ ಅರ್ಬಾಜ್ ಖಾನ್‌ಗೆ ಈಗ 57 ವರ್ಷ. ಅವರು ಕಳೆದ ಡಿಸೆಂಬರ್‌ನಲ್ಲಿ ಶುರಾ ಖಾನ್ ಅವರನ್ನು ವಿವಾಹ ಆದರು. ಈಗ ಈ ದಂಪತಿಗೆ ಮಗು ಜನಿಸುತ್ತಿದೆ. ಈ ವಿಚಾರವನ್ನು ದಂಪತಿ ಅಧಿಕೃತ ಮಾಡಿದ್ದಾರೆ. ಪ್ರೆಗ್ನೆನ್ಸಿ ವಿಚಾರದ ಬಗ್ಗೆ ಇಷ್ಟು ದಿನಗಳ ಕಾಲ ನಾನಾ ವದಂತಿಗಳು ಹಬ್ಬಿದ್ದವು. ಕೊನೆಗೂ ಇದಕ್ಕೆ ಉತ್ತರ ಸಿಕ್ಕಂತೆ ಆಗಿದೆ. ಅನೇಕರು ಅರ್ಬಾಜ್ 57ನೇ ವಯಸ್ಸಿಗೆ ತಂದೆ ಆಗುತ್ತಿದ್ದಾರೆ ಎಂಬ ವಿಚಾರ ತಿಳಿದು ಅಚ್ಚರಿ ಹೊರ ಹಾಕಿದ್ದಾರೆ. ಇತ್ತೀಚೆಗೆ ಶುರಾ ಅವರು ಸಾರ್ವಜನಿಕವಾಗಿ ಕಾಣಿಸಿಕೊಂಡಾಗ ಅನೇಕರ ಗಮನ ಅವರ ಹೊಟ್ಟೆಯ ಮೇಲೆ ಹೋಗಿತ್ತು. ಅವರು ಪ್ರೆಗ್ನೆಂಟ್ ಎಂದು ಹೇಳಿದ್ದರು. ಆದರೆ, ಈ ಬಗ್ಗೆ ದಂಪತಿ ಮೌನ ವಹಿಸಿದ್ದರು. ಅನೇಕರು ಇದು ಸುಳ್ಳು ಸುದ್ದಿ ಎಂದು ಹೇಳಿದ್ದರು.

ಈ ಎಲ್ಲಾ ವಿಚಾರಕ್ಕೆ ಸಂಬಂಧಿಸಿ ಅರ್ಬಾಜ್ ಹಾಗೂ ಶುರಾ ಸ್ಪಷ್ಟನೆ ನಿಡಿದ್ದಾರೆ. ಮೊದಲ ಮಗುವಿನ ನಿರೀಕ್ಷೆಯಲ್ಲಿ ನೀವಿದ್ದೀರಂತೆ ಎಂದು ಶುರಾ ಹಾಗೂ ಅರ್ಬಾಜ್‌ಗೆ ಕೇಳಲಾಯಿತು. ಇದಕ್ಕೆ ಉತ್ತರಿಸಿದ ಅರ್ಬಾಜ್ ಹೌದು ಹಾಗೊಂದು ಸುದ್ದಿ ಇದೆ. ನಾನು ಅದನ್ನು ತಳ್ಳಿ ಹಾಕುತ್ತಿಲ್ಲ. ನನ್ನ ಕುಟುಂಬಕ್ಕೆ ಈ ಬಗ್ಗೆ ಗೊತ್ತು.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966